ಸಂಪುಟ : 14 Volume 14 | ಸಂಚಿಕೆ : 56 Issue 56 | ಪುಟಗಳು : 08 Pages 08 | ಬುಧವಾರ 03 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದರ್ಗಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

**ಬೆಳಗು**

ಗುಣಾತ್ಮಕವಾಗಿ ಯೋಚಿಸುವುದಿಲ್ಲ ಎಂದಾದಲ್ಲಿ ನೀವು ಕನಿಷ್ಠ ಪಕ್ಷ ಸುಮ್ಮನಾದರೂ ಇರಿ.

-- ಜೋಯೆಲ್ ಆಸ್ಟಿನ್ .

ಸಂಪಾದಕರು: ರಮೇಶ ರೆಡ್ಡಿ

## ತೈಲ ಪೂರೈಕೆಯಲ್ಲಿ ವ್ಯತ್ಯಾಸವಾಗದಂತೆ ಕ್ರಮವಹಿಸಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಮದ್ಯ ಪ್ರಾಚ್ಯ ಯುದ್ದ ಬಿಕ್ಕಟ್ಟಿನಿಂದ ಪೆಟ್ರೋಲ್ ಮತ್ತು ಡಿಸೇಲ್‌ಗೆ ಸಂಬಂದಿಸಿದಂತೆ, ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅಧ್ಯಕ್ಷತೆಯಲ್ಲಿ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಉಪಸ್ಥಿತಿಯಲ್ಲಿ ಇತ್ತೀಚೆಗೆ (ಮೇ 26 ರಂದು) ತೈಲ ಕಂಪನಿ ಅಧಿಕಾರಿಗಳಿಗೆ ಮತ್ತು ಪೇಟ್ರೋಲ್ ಬಂಕ್ ಮಾಲೀಕರ ಸಭೆ ನಡೆಯಿತು. ಪೆಟ್ರೋಲ್ ಹಾಗೂ ಡಿಸೇಲ್ ಪೂರೈಕೆ ಮತ್ತು ವಿತರಣೆ ಕುರಿತು ಜಿಲ್ಲೆಯಲ್ಲಿರುವ ತೈಲ ಕಂಪನಿ ಅಧಿಕಾರಿಗಳು, ಪೇಟ್ರೋಲ್ ಬಂಕ್ ಮಾಲೀಕರು 2002ರ ಪೆಟ್ರೋಲಿಯಂ ಕಾಯ್ದೆಯನ್ವಯ ಹಾಗೂ ಮೇ 8ರ ಪತ್ರದಲ್ಲಿ ಆಯುಕ್ತರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಬೆಂಗಳೂರು ಇವರು ನೀಡಿರುವ ಸೂಚನೆಗಳನ್ನು ಪಾಲಿಸುವಂತೆ ತಿಳಿಸುತ್ತಾ, ತೈಲ ಪೂರೈಕೆಯಲ್ಲಿ ವ್ಯತ್ಯಾಸವಾಗದಂತೆ ಕ್ರಮವಹಿಸಲು ಸೂಚಿಸಿದರು ಎಂದು ಕೊಪ್ಪಳ ಆಹಾರ, ನಾಗರಿಕರ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉತ್ತಮ ಆರೋಗ್ಯಕ್ಕೆ ದೈಹಿಕ ಚಟುವಟಿಕೆ ಅಗತ್ಯ




• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಆರೋಗ್ಯಕರ ಜೀವನ ಇಂದು ಬಹುಮುಖ್ಯವಾಗಿದ್ದು ಬದಲಾದ ಜೀವನಶೈಲಿ ಮತ್ತು ಆಹಾರ ಪದ್ಧತಿಗಳಿಂದಾಗಿ ಅನೇಕ ಪ್ರಕಾರದ ಕಾಯಿಲೆಗಳು ಕಾಣಿಸಿಕೊಳ್ಳುತ್ತಿವೆ. ಈ ದಿಸೆಯಲ್ಲಿ ನಾಗರಿಕರು ಉತ್ತಮ ಆರೋಗ್ಯಕ್ಕಾಗಿ ದೈಹಿಕ ಚಟುವಟಿಕೆಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಉಪಪ್ರಾಚಾರ್ಯ ಡಾ.ಸಿ.ಎಸ್.ಹಿರೇಮಠ ಹೇಳಿದರು.

ವಿಶ್ವಬೈಸಿಕಲ್ ದಿನದ ಅಂಗವಾಗಿ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಸೈಕಲ್ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮನುಷ್ಯರಲ್ಲಿ ದೈಹಿಕ ಚಟುವಟಿಕೆಗಳು ಕಡಿಮೆಯಾಗುತ್ತಿರುವುದರಿಂದ ಅನೇಕ ಬಗೆಯ ಕಾಯಿಲೆಗಳು ಕಾಣಿಸಿಕೊಳ್ಳುತ್ತಿವೆ. ಕ್ರೀಡೆ, ವ್ಯಾಯಾಮ, ನಡಿಗೆ ಇಂತಹ ಚಟುವಟಿಕೆಗಳಿಂದ ಮನುಷ್ಯರು ದೂರಾಗುತ್ತಿರುವ ಪರಿಣಾಮವಾಗಿ ದೇಹ ರೋಗಗಳ ಗೂಡಾಗುತ್ತಿದೆ. ಆದ್ದರಿಂದ ಶರೀರದ ಸ್ವಾಸ್ಥ್ಯಕ್ಕಾಗಿ ದೈಹಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು ಅಗತ್ಯವಾಗಿದೆ ಎಂದರು.

ಈ ಸಂದರ್ಭದಲ್ಲಿ ವಿವಿಧ ವಿಭಾಗಗಳ ಮುಖ್ಯಸ್ಥರಾದ ಡಾ.ಅಶೋಕ ಡೋರ್ಲೆ, ಡಾ.ಅಶೋಕ ಬಡಕಲಿ, ಡಾ.ಬ್ರಿಜೇಶ ಪಾಟೀಲ, ರಾಷ್ಟ್ರೀಯ ಸೇವಾ ಯೋಜನೆ ಘಟಕದ ಸಂಯೋಜನಾಧಿಕಾರಿ ಡಾ.ಶ್ರೀನಿವಾಸ ಪಾಟೀಲ ಮತ್ತು ವಿವಿಧ ವಿಭಾಗಗಳ ವೈದ್ಯರು ಉಪಸ್ಥಿತರಿದ್ದರು. 20 ಕಿಲೋ ಮೀಟರ್‌ವರೆಗೆ ಸಾಗಿದ ಸೈಕಲ್ ಜಾಥಾದಲ್ಲಿ ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಸುಮಾರು 40 ವೈದ್ಯರು ಭಾಗವಹಿಸಿದ್ದರು. ಸೈಕಲ್ ಸವಾರಿಯಿಂದಾಗುವ (ಸೈಕ್ಲಿಂಗ್) ಆರೋಗ್ಯ ಬಲವರ್ಧನೆ, ಮಾಲಿನ್ಯಮುಕ್ತ ಸಾರಿಗೆ ಮತ್ತು ಪರಿಸರ ಮಾಲಿನ್ಯ ನಿಯಂತ್ರಣ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಸೈಕಲ್ ಜಾಥಾ ಆಯೋಜಿಸಿದ್ದರ ಉದ್ದೇಶವಾಗಿತ್ತು. ಕಾರ್ಯಕ್ರಮವನ್ನು ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಘಟಕ ಮತ್ತು ಸಮುದಾಯ ಆರೋಗ್ಯ ವಿಭಾಗ ಇವುಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿತ್ತು.

## ಮನುಷ್ಯನ ಆರೋಗ್ಯಕ್ಕೆ ತಂಬಾಕು ಮಾರಕ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ



ತಾಲೂಕಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ತಂಬಾಕು ಹಾಗೂ ತಂಬಾಕು ಉತ್ಪನ್ನ ಬಳಕೆ ಇಂದು ಮಾನವನ ಅವಿಭಾಜ್ಯ ಅಂಶವಾಗಿದೆ. ತಂಬಾಕು.ಬೀಡಿ.ಸಿಗರೇಟ್ ಧೂಮಪಾನ ಹಾಗೂ ನಶೆ. ತಂಬಾಕು.ಗುಟ್ಕಾಸೇವನೆಯಿಂದ ಮಾರಕ ಕ್ಯಾನ್ಸರ್ ರೋಗ ಬರುತ್ತಿದೆಯುವಸಮುದಾಯ ಇದರಿಂದ ದೂರವಿದ್ದು ಆರೋಗ್ಯವಂತ ರಾಗಿರಲು ತಾಲೂಕು ಆಸ್ಪತ್ರೆಯ ತಜ್ಞ ವೈದ್ಯರಾದ ಡಾ: ಖಾಜಾ ಮೊಹಿನುದ್ದೀನ್ ತಿಳಿಸಿದರು.

ತಂಬಾಕು ರಹಿತ ದಿನಾಚರಣೆ ಕಾರ್ಯಕ್ರಮದಲ್ಲಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದ ತಾಲೂಕು ಆರೋಗ್ಯ ಅಧಿಕಾರಿ ಡಾ: ಅಮರೇಶ ಪಾಟೀಲ ಅವರು ತಂಬಾಕಿನಲ್ಲಿರುವ 70 ವಿಷಯಾಗಿ ರಾಸಾಯನಿಕಗಳ ಕ್ಯಾನ್ಸರ್ ಕಾರಣವಾಗಿವೆ. ನಿಕೋಟಿನ್,ನೈಟ್ರೋಸೊಮೈನ್ ,ಬಿಂಜಿನ್, ಪಾಲಿಸೈಕ್ಲಿಕ್ ಎರುನಾಟಿಕ್ ಹೈಡ್ರೋಕಾರ್ಬೋನ್ ನಂತಹ ಭಾರತವನ್ನು ಇದರಲ್ಲಿವೆ.ಮಾದಕ ವಸ್ತು ಸೇವನೆಯಿಂದ ಶ್ವಾಸಕೋಶ ಕ್ಯಾನ್ಸರ್,ಹೃದಯಾಘಾತ, ದಂತ ಮತ್ತು ಬಾಯಿ ಕ್ಯಾನ್ಸರ್,ಅಲ್ಲದೇ ದೀರ್ಘ ಕಾಲದ ಉಸಿರಾಟದ ತೊಂದರೆಯಿಂದ ಕಾಯಿಲೆಗಳು ಉಂಟಾಗುತ್ತವೆ.ಈ ಬಗ್ಗೆ ಸಾರ್ವಜನಿಕರು ಎಚ್ಚೆತ್ತು-ಕೊಂಡು ಜೀವನ ಮಾಡಲು ಆರೋಗ್ಯ ವಂತರಾಗಿಬಾಳಲು ಮಾಹಿತಿ ನೀಡಿದರು. ತಂಬಾಕು ರಹಿತ ದಿನದ ಜಾಗೃತಿ ಮೂಡಿಸುವ ಪ್ರತಿಜ್ಞಾ ವಿಧಿಯನ್ನು ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ್ ಜೋಶಿ ಬೋಧಿಸಿದರು.ಕಾರ್ಯಕ್ರಮದಲ್ಲಿ ದಂತ ವೈದ್ಯೆ ಡಾ: ಶೋಭಾ ನಾಯಕ.ಡಾ: ಪ್ರಗತಿ.ಡಾ: ಇಕ್ಬಾಲ್. ಸಮಾಲೋಚಕರಾದ ನೀಲಾಂಬಿಕ. ಚಂದ್ರಕಲಾ, ರವಿ ಬಳಿಗಾರ್. ರವಿ ಮುಂಡೇವಾಡಿ. ಕ್ಷಯರೋಗ ಮೇಲ್ವಿಚಾರಕ ರವಿಕುಮಾರ ಹೂಗಾರ.ಅಮರೇಶ ಯಲಿಗಾರ್. ಹಾಗೂ ವಸೀಂ ರೆಹಮಾನ್,ಇಲಿಯಾಸ್ ಸಾರ್ವಜನಿಕರು ಹಾಜರಿದ್ದರು.

## ಸುಸ್ಥಿರ ಭವಿಷ್ಯಕ್ಕಾಗಿ ಪರಿಸರ ರಕ್ಷಣೆ ಅತ್ಯಗತ್ಯ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಜೂ 2 :ವಿಶ್ವ ಪರಿಸರ ದಿನಾಚರಣೆಯು ಕೇವಲ ಒಂದು ದಿನದ ಆಚರಣೆಯಾಗಬಾರದು. ಅದು ನಮ್ಮ ಜಂಟಿ ಜವಾಬ್ದಾರಿಯನ್ನು ನೆನಪಿಸುವಮತ್ತುವರ್ಷಪೂರ್ತಿ ಕಾರ್ಯನಿರ್ವಹಿಸುವ ಯೋಜನೆಯಾಗಬೇಕು. ಆರೋಗ್ಯಕರ ರಾಷ್ಟ್ರದ ನಿರ್ಮಾಣಕ್ಕೆಆರೋಗ್ಯಕರ ಪರಿಸರ ಅತ್ಯಗತ್ಯ ಎಂದು ಸರ್ಕಾರದ ಮುಖ್ಯಕಾರ್ಯದರ್ಶಿ ಡಾ.ಶಾಲಿನಿರಜನೀಶ್ ತಿಳಿಸಿದರು.

ಇಂದುಬೆಂಗಳೂರಿನ ಭಾರತೀಯವಿಜ್ಞಾನ ಸಂಸ್ಥೆಯ(ಐಐಎಸ್‌ಸಿ) ದಿವೇಕಾಹವಾಮಾನ ಬದಲಾವಣೆ ಕೇಂದ್ರದ ವತಿಯಿಂದಜೂನ್2ಮತ್ತು 3ರಂದು ಆಯೋಜಿಸಲಾಗಿರುವ "ಹವಾಮಾನ,ಮಾಲಿನ್ಯ ಮತ್ತು ಆರೋಗ್ಯ: ಭಾರತದಲ್ಲಿ ಸುಸ್ಥಿರ ಭವಿಷ್ಯದ ಹಾದಿಗಳು" ಎಂಬ ಎರಡು ದಿನಗಳ ರಾಷ್ಟ್ರೀಯ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಲುಷಿತ ಗಾಳಿ ಮತ್ತು ನೀರು ಸಮಾಜದ ದುರ್ಬಲ ವರ್ಗದವರಾದ ಮಹಿಳೆಯರು, ಮಕ್ಕಳು ಮತ್ತು ರೈತರ ಮೇಲೆ ತೀವ್ರ ಪರಿಣಾಮ ಬೀರುತ್ತಿದೆ. ಆದ್ದರಿಂದ, ಭಾರತವು ಅಭಿವೃದ್ಧಿ ಹೊಂದಿದ ಭಾರತ ಆಗಬೇಕಾದರೆ, ಮೊದಲು 'ವಿಕಸಿತ್ ಪರಿಸರ'ವನ್ನು ನಿರ್ಮಿಸುವುದು ಅನಿವಾರ್ಯವಾಗಿದೆ ಎಂದರು.

ವಿಜ್ಞಾನಿಗಳು, ನೀತಿ ನಿರೂಪಕರು, ಉದ್ಯಮದ ಪ್ರತಿನಿಧಿಗಳು, ಪರಿಸರ ತಜ್ಞರು ಮತ್ತು ಸಾರ್ವಜನಿಕ ಆರೋಗ್ಯ ವೃತ್ತಿಪರರನ್ನು ಒಂದೇ ವೇದಿಕೆಗೆ ತಂದು, ಹವಾಮಾನ ಬದಲಾವಣೆ ಮತ್ತು ಮಾಲಿನ್ಯದ ಸವಾಲುಗಳಿಗೆ ವೈಜ್ಞಾನಿಕ ಪರಿಹಾರಗಳನ್ನು ಕಂಡುಕೊಳ್ಳುವ ನಿಟ್ಟಿನಲ್ಲಿ ಈ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ.

# ಇಂದು ಡಿಕೆಶಿ ಪ್ರಮಾಣ



• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನಿಯೋಜಿತ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಬುಧವಾರ ಸಂಜೆ 4.05ಕ್ಕೆ ಲೋಕಭವನದಲ್ಲಿ ರಾಜ್ಯದ ನೂತನ ಮುಖ್ಯಮಂತ್ರಿಯಾಗಿ 10 ಜನ ಸಚಿವರೊಂದಿಗೆ ಪ್ರಮಾಣವಚನ ಸ್ವೀಕರಿಸಲಿದ್ದು, ಈ ಸಮಾರಂಭ ಹಲವು ವಿಶೇಷತೆಗಳಿಗೆ ಸಾಕ್ಷಿಯಾಗುತ್ತಿದೆ.

ರಾಜ್ಯದ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಡಿಕೆ ಶಿವಕುಮಾರ್ ಅವರು, ಸ್ವಾಮೀಜಿ, ಫಾದರ್ ಹಾಗೂ ಮೌಲ್ವಿ ಸೇರಿದಂತೆ ಸರ್ವಧರ್ಮಗಳ ಸ್ವಾಮೀಜಿಗಳ ಸಮ್ಮುಖದಲ್ಲಿ ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕಾರ ಮಾಡಲಿದ್ದಾರೆ.

**10 ಸಚಿವರ ಸೇರ್ಪಡೆ ?**

ಇದುವರೆಗೂ ರಾಜ್ಯದಲ್ಲಿ ಯಾವುದೇ ನಾಯಕ ಸರ್ವಧರ್ಮಗಳ ಸ್ವಾಮೀಜಿಗಳ ಸಮ್ಮುಖದಲ್ಲಿ ಸಿಎಂ ಆಗಿ ಪ್ರಮಾಣವಚನ ಸ್ವೀಕರಿಸಿದ ಉದಾಹರಣೆಗಳಿಲ್ಲ. ಹೀಗಾಗಿ ಡಿಕೆ ಶಿವಕುಮಾರ್ ಅವರೇ ಮೊದಲ ಬಾರಿಗೆ ಎಲ್ಲಾ ಧರ್ಮಗಳ ಸ್ವಾಮೀಜಿಗಳ ಸಮ್ಮುಖದಲ್ಲಿ ಪ್ರಮಾಣವಚನ ಸ್ವೀಕರಿಸುತ್ತಿದ್ದಾರೆ.

ಈ ಸಂಬಂಧ ಈಗಾಗಲೇ ಎಲ್ಲಾ ಧರ್ಮ, ಜಾತಿಗಳ ಸುಮಾರು 55 ಸ್ವಾಮೀಜಿಗಳಿಗೆ ಆಹ್ವಾನ ನೀಡಲು ಸೂಚನೆ ನೀಡಲಾಗಿದೆ. ಈ ಮೂಲಕ ಸರ್ವ ಧರ್ಮ ಸಹಿಷ್ಣುತೆ, ಪರಸ್ಪರ ಸಹಬಾಳ್ವೆ, ಶಾಂತಿ ಸೌಹಾರ್ದತೆಯ ಸಂದೇಶ ಸಾರಲು ಡಿಕೆಶಿ ಮುಂದಾಗಿದ್ದಾರೆ ಎನ್ನಲಾಗಿದೆ.

ಹೊಸ ಸಚಿವ ಸಂಪುಟದಲ್ಲಿ ಅನುಭವಿ ನಾಯಕರು ಮತ್ತು ಹೊಸ ಮುಖಗಳ ಮಿಶ್ರಣವಿದ್ದು, ಜಾತಿ ಪ್ರಾತಿನಿಧ್ಯ, ಪ್ರಾದೇಶಿಕ ಸಮತೋಲನ ಆಯ್ಕೆ ಪ್ರಕ್ರಿಯೆಯಲ್ಲಿ ಪ್ರಮುಖ ಪಾತ್ರ ವಹಿಸುವ ನಿರೀಕ್ಷೆಯಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

### 10 ಸಚಿವರು ಪ್ರಮಾಣ ವಚನ

ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರರೊಂದಿಗೆ ಜೂ.3 ರಂದು ಸಂಜೆ ನಡೆವ ಪ್ರಮಾಣ ವಚನ ಕಾರ್ಯಕ್ರಮದಲ್ಲಿ ನೂತನ ಸಚಿವರಾಗಿ ಯು.ಟಿ.ಖಾದರ್,ರಾಮಲಿಂಗಾರೆಡ್ಡಿ,ಜಿ.ಪ ರಮೇಶ್ವರ, ಯತೀಂದ್ರಸಿದ್ದರಾಮಯ್ಯ,ಕೆ.ಜೆ.ಜಾರ್ಜ,ಪ್ರಿಯಾಂಕ್ ಖರ್ಗೆ,ಎಂ.ಬಿ.ಪಾಟೀಲ, ಸತೀಶ ಜಾರಕಿಹೋಳಿ, ಕೃಷ್ಣಭೈರೇಗೌಡ, ರೂಪಾ ಶಶಿಧರ ಅವರ ಹೆಸರನ್ನು ಅಂತಿಮಗೊಳಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಇಂದು ಇಡಿ ದಿನ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ, ಕರ್ನಾಟಕದ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಸೇರಿದಂತೆ ಪಕ್ಷದ ಹಿರಿಯ ಮುಖಂಡರೊಂದಿಗೆ ಸಭೆ ನಡೆಸಿದ ನಿಯೋಜಿತ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹಾಗೂ ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಭೆ ನಡೆಸಿ ಅಳೆದು ತೂಗಿ ನೂತನ ಸಚಿವರ ಪಟ್ಟಿಯನ್ನು ಅಂತಿಮಗೊಳಿಸಿದ್ದಾರೆನ್ನಲಾಗಿದೆ.

### ಕುರ್ಚಿ ದಿಕ್ಕು ಬದಲು, ಅಜ್ಜಯ್ಯನ ಫೋಟೋ ಅಳವಡಿಕೆ

ಮಂಗಳವಾರ ವಿಧಾನಸೌಧದ ಮೂರನೇ ಮಹಡಿಯಲ್ಲಿರುವ ಮುಖ್ಯಮಂತ್ರಿಗಳ ಕಚೇರಿಗೆ ಜ್ಯೋತಿಷಿಗಳು ಭೇಟಿ ನೀಡಿ ವಾಸ್ತು ಪರಿಶೀಲಿಸಿದ್ದಾರೆ.

ನೂತನ ಸಿಎಂ ಡಿಕೆ ಶಿವಕುಮಾರ್ ಕುಳಿತುಕೊಳ್ಳಲಿರುವ ಕುರ್ಚಿಯ ವಾಸ್ತು ಪರಿಶೀಲಿಸಿದ ಜ್ಯೋತಿಷಿಗಳು, ಕುರ್ಚಿಯ ದಿಕ್ಕನ್ನು ಬದಲಿಸಿದ್ದಾರೆ. ಅಲ್ಲದೆ ಜ್ಯೋತಿಷಿಗಳ ಸಲಹೆಯಂತೆ ಸಿಎಂ ಕಚೇರಿಯಲ್ಲಿ ಅಜ್ಜಯ್ಯನ ಫೋಟೋ ಅಳವಡಿಸಲಾಗಿದೆ.

ಡಿ.ಕೆ ಶಿವಕುಮಾರ್ ಅವರು ಅಜ್ಜಯ್ಯನನ್ನು ಬಲವಾಗಿ ನಂಬುತ್ತಾರೆ.

### ವ್ಯಾಪಕ ವ್ಯವಸ್ಥೆ

ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಕಾಂಗ್ರೆಸ್ ನಾಯಕ ಡಿ ಕೆ ಶಿವಕುಮಾರ್ ಪ್ರಮಾಣ ವಚನ ಸ್ವೀಕಾರಕ್ಕೆ ಲೋಕ ಭವನದಲ್ಲಿ ವ್ಯಾಪಕ ವ್ಯವಸ್ಥೆ ಮಾಡಲಾಗಿದೆ.

ವಿಧಾನಸೌಧ ಮತ್ತು ಲೋಕಭವನ ಪ್ರದೇಶದ ಸುತ್ತಲೂ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಡಿಕೆ ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ, ಕರ್ನಾಟಕದ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಮತ್ತು ನಿರ್ಗಮಿತ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ನಾಯಕರನ್ನು ಒಳಗೊಂಡ ಕಾಂಗ್ರೆಸ್ ಧ್ವಜಗಳು ಮತ್ತು ದೊಡ್ಡ ಬ್ಯಾನರ್‌ಗಳನ್ನು ಹಾಕಲಾಗಿದೆ.

ಲೋಕಭವನ ಸುತ್ತಲೂ ಬಿಗಿ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ. ಬೆಂಬಲಿಗರು ಮತ್ತು ಪಕ್ಷದ ಕಾರ್ಯಕರ್ತರ ದೊಡ್ಡ ಸಂಖ್ಯೆಯಲ್ಲಿ ಆಗಮಿಸುವ ನಿರೀಕ್ಷೆ ಇರುವುದರಿಂದ ಲೋಕ ಭವನಕ್ಕೆ ಹೋಗುವ ರಸ್ತೆಗಳಲ್ಲಿ ಬ್ಯಾರಿಕೇಡ್‌ಗಳನ್ನು ಹಾಕಲಾಗಿದೆ.

## ರಾಜ್ಯಕ್ಕೆ ಜೂ.5 ರಂದು ಮುಂಗಾರು ಪ್ರವೇಶ



• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯಕ್ಕೆ ಜೂ.5 ರಂದು ಮುಂಗಾರು ಪ್ರವೇಶಿಸಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.ಈ ಬಾರಿ ಮುಂಗಾರು ಪ್ರವೇಶ ತಡ ಆಗಲಿದೆ ಎನ್ನಲಾಗಿತ್ತು. ಆದರೆ ತಡ ಆಗಿಲ್ಲ ಸರಿಯಾದ ಸಮಯಕ್ಕೆ ಮುಂಗಾರು ಪ್ರವೇಶಿಸುತ್ತಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ. ಮುಂದಿನ ಐದು ದಿನಗಳ ಕಾಲ ರಾಜ್ಯದ ಹಲವೆಡೆ ಮಳೆಯಾಗಲಿದೆ. ಗದಗ, ಮೈಸೂರು ಸೇರಿ ಎಂಟು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಜೂ.3 ರಂದು ಬೆಂಗಳೂರಿನಲ್ಲಿ ಸಾಧಾರಣ ಮಳೆ ಆಗುವ ಸಾಧ್ಯತೆ ಇದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ.

ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಜೂ.3 ರಿಂದ ಜೂ.5ರ ವರೆಗೆ ಹಾಗೂ ಒಳನಾಡು ಜಿಲ್ಲೆಗಳಲ್ಲಿ ಜೂ. 4ರ ವರೆಗೆ ಒಂದು ಅಥವಾ ಎರಡು ಸ್ಥಳಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

## ರೌಡಿಶೀಟರ್ ಆಕಾಶ್ ಗಡಿಪಾರು

• ಮಲ್ಲಮ್ಮ ನುಡಿ ವಾರ್ತೆ ಬೀದರ



ಜೂ 02:ಬೀದರ್ ಜಿಲ್ಲೆಯಲ್ಲಿ ಸಮಾಜದಲ್ಲಿ ಶಾಂತಿ ಪಾಲನೆ ಹಾಗೂ ಕಾನೂನು ಸುವ್ಯವಸ್ಥೆಗಾಗಿ ಬೀದರ್ ನಗರದ ಚಿದ್ರಿಯ ನಿವಾಸಿ ರೌಡಿಶೀಟರ್ ಆಕಾಶ್ ತಂದೆ ಅಶೋಕ ಹೆಳವಾ ಎಂಬಾತನನ್ನು ಬೀದರ್ ಜಿಲ್ಲೆಯಿಂದ ರಾಯಚೂರು ಜಿಲ್ಲೆಗೆ ಗಡಿಪಾರು ಮಾಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ತಿಳಿಸಿದ್ದಾರೆ.ಪದೇಪದೆ ಅಪರಾಧಿಕ ಚಟುವಟಿಕೆಗಳನ್ನು ನಡೆಸುವುದು, ಹಿಂದಿನ ಚಾಳಿಯನ್ನೇ ಮುಂದೊರೆಸಿಕೊಂಡು ಹೋಗುತ್ತಿರುವುದರಿಂದ ಗಡಿಪಾರು ಮಾಡಲಾಗಿದೆ ಎಂದು ಎಸ್ಪಿ ಮಾಹಿತಿ ನೀಡಿದ್ದಾರೆ.ಜಿಲ್ಲೆಯಲ್ಲಿ ಮಾರಕ ಆಯುಧಗಳೊಂದಿಗೆ ದರೋಡೆಗೆಹೊಂಚು ಹಾಕುತ್ತಿದ್ದ, ಸುಲಿಗೆ ಮಾಡುತ್ತಿದ್ದ, ವಾಹನ ಕಳ್ಳತನ, ರಾತ್ರಿ ವೇಳೆ ಮನೆ ಕಳ್ಳತನ ಮಾಡುವುದು ಸೇರಿ ಸಾರ್ವಜನಿಕರಿಗೆ ಜೀವದ ಬೆದರಿಕೆ ಹಾಕುವುದನ್ನು ಮಾಡುತ್ತಿದ್ದನು.

## ಕಂಟ್ರಿ ಪಿಸ್ತೂಲ್ ತಯಾರಿಸುತ್ತಿದ್ದ 13 ಜನ ಅರೆಸ್ಟ್

ಬೆಳಗಾವಿ: ಗಡಿಜಿಲ್ಲೆಯಲ್ಲಿ ಕಂಟ್ರಿ ಪಿಸ್ತೂಲ್ ತಯಾರಿಸುತ್ತಿದ್ದ 13 ಆರೋಪಿಗಳ ಗ್ಯಾಂಗ್‌ವೊಂದನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ.


ಆರೋಪಿಗಳಾದ ಮಾರುತಿ ಸುತಾರ, ಸೋಮನಾಥ ಚೌಗಲೆ, ಸಂತೋಷ ನಾಯಕ, ಮಾರುತಿ ಗುಡದ್ಯಾಗೋಳ, ಬಾಳು ನಾಯಕ, ಲಕ್ಷ್ಮಣ ಗುಜನಾಳ, ಬಸವರಾಜ ಸಾಲೋಟಗಿ, ಬಸವಂತ ಯರಮಾಳಕರ, ಲಕ್ಷ್ಮಣ ಗುರವ, ಮರಿಯಪ್ಪ ನಾಯಕ, ವಿಶ್ವನಾಥ ದೇಸಾಯಿ ಬಂಧಿತರು.

## ಆಟದ ಸಾಮಗ್ರಿಗಳು ಕಳುವು

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ತಾಲ್ಲೂಕಿನ ಹಾಲಹಳ್ಳಿ (ಕೆ) ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಕೋಣೆಯೊಂದರ ಬಾಗಿಲು,ಕಿಟಕಿ ಮುರಿದ ಕಳ್ಳರು ಆಟದ ಸಾಮಗ್ರಿಗಳನ್ನು ಕಳವುಮಾಡಿದ ಘಟನೆ ನಡೆದಿದೆ. ಒಂದು ಶಾಟ್ ಫುಟ್,ವಾಲಿಬಾಲ್ ನೆಟ್, ಎರಡು ವಾಲಿಬಾಲ್, ಕ್ರಿಕೆಟ್ ಬ್ಯಾಟ್ ಸೇರಿದಂತೆ ಇತರ ಸಾಮಗ್ರಿಗಳನ್ನು ಕಳುವು ಮಾಡಿದ್ದಾರೆ.

2025ರ ಅಕ್ಟೋಬರ್ ಮತ್ತುನವೆಂಬರ್ ತಿಂಗಳಲ್ಲಿಯೂ ನಮ್ಮ ಶಾಲೆಯಲ್ಲಿ ಕಳ್ಳತನ ನಡೆದಿದ್ದು ಪ್ಲೇಟ್, ಸ್ಟೋವ್, ಆಟದ ಸಾಮಗ್ರಿ ಸೇರಿದಂತೆ ಇತರ ವಸ್ತುಗಳನ್ನು ಕಳವು ಮಾಡಲಾಗಿತ್ತು ಎಂದು ಮುಖ್ಯ ಶಿಕ್ಷಕಿ ವಿಜಯಲಕ್ಷ್ಮಿ ಪ್ಯಾಗೆ ತಿಳಿಸಿದ್ದಾರೆ.



ಡಾಕುಳಗಿ : ಶ್ರೀ ಮಹಾಲಕ್ಷ್ಮೀ 3 ನೇ ಜಾತ್ರಾ ಮಹೋತ್ಸವ ಸ್ವಾಮೀಜಿ, ಶಿವಾನಂದ ಸ್ವಾಮಿ ಸಂಜು ಗಂಗಾ ಪಾಟೀಲ್ ವೀರೇಶ ಸ್ವಾಮಿ ಭಕ್ತರು ಇದ್ದರು.

**ಬಿಜೆಪಿಗೆ ಅಣ್ಣಾಮಲೈ ಗುಡ್‌ಬೈ : ನಿತಿನ್ ನಬಿನ್‌ಗೆ ರಾಜೀನಾಮೆ ಸಲ್ಲಿಕೆ**

## ಡಾ. ಚಂದ್ರಶೇಖರ ಪಾಟೀಲರಿಗೆ ಸಚಿವ ಸ್ಥಾನ ನೀಡಲು ಮಾಶಟ್ಟಿ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ



ರಾಜ್ಯ ರಾಜಕಾರಣದಲ್ಲಿ ದೀರ್ಘಕಾಲದಿಂದ ಜನಸೇವೆಯಲ್ಲಿ ತೊಡಗಿಸಿಕೊಂಡಿರುವ ಏರೆಡು ಬಾರಿ ವಿಧಾನ ಪರಿಷತ್ ಸದಸ್ಯರಾಗಿರುವ ಡಾ. ಚಂದ್ರಶೇಖರ ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷ ಮಲ್ಲಿಕಾರ್ಜುನ ಮಾಶಟ್ಟಿ ಸೇರಿದಂತೆ ವಿವಿಧ ಸಂಘಟನೆಗಳು, ಮುಖಂಡರು ಹಾಗೂ ಬೆಂಬಲಿಗರು ಒತ್ತಾಯಿಸಿದ್ದಾರೆ.

ಜನರ ಸಮಸ್ಯೆಗಳಿಗೆ ಸ್ಪಂದಿಸುವ ನಾಯಕರಾಗಿ ಗುರುತಿಸಿಕೊಂಡಿರುವ ಡಾ. ಚಂದ್ರಶೇಖರ ಪಾಟೀಲ ಅವರು ಶಿಕ್ಷಣ, ಆರೋಗ್ಯ, ಕೃಷಿ ಹಾಗೂ ಗ್ರಾಮೀಣಾಭಿವೃದ್ಧಿ ಕ್ಷೇತ್ರಗಳಲ್ಲಿ ಸಾಕಷ್ಟು ಸೇವೆ ಸಲ್ಲಿಸಿದ್ದಾರೆ. ಪಕ್ಷದ ಸಂಘಟನೆ ಬಲಪಡಿಸುವಲ್ಲಿ ಮತ್ತು ಜನರೊಂದಿಗೆ ನಿರಂತರ ಸಂಪರ್ಕ ಕಾಯ್ದುಕೊಳ್ಳುವಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ ಎಂದು ಬೆಂಬಲಿಗರು ಅಭಿಪ್ರಾಯಪಟ್ಟಿದ್ದಾರೆ.

ಸರ್ಕಾರದಲ್ಲಿ ಅನುಭವಿಗಳಿಗೆ ಹಾಗೂ ಜನಪರ ನಾಯಕರಿಗೆ ಅವಕಾಶ ನೀಡುವುದು ಅಗತ್ಯವಾಗಿದ್ದು, ಡಾ. ಚಂದ್ರಶೇಖರ ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಿದರೆ ಜಿಲ್ಲೆಯ ಅಭಿವೃದ್ಧಿಗೆ ಮತ್ತಷ್ಟು ವೇಗ ಸಿಗಲಿದೆ ಎಂದು ಮಲ್ಲಿಕಾರ್ಜುನ ಮಾಶಟ್ಟಿ ಅವರು ತಿಳಿಸಿದ್ದಾರೆ. ರಾಜ್ಯದ ಸಮಗ್ರ ಅಭಿವೃದ್ಧಿ ಮತ್ತು ಜನರ ನಿರೀಕ್ಷೆಗಳನ್ನು ಈಡೇರಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿ ಹಾಗೂ ಪಕ್ಷದ ನಾಯಕತ್ವವು ಡಾ. ಚಂದ್ರಶೇಖರ ಪಾಟೀಲ ಅವರ ಸೇವೆಯನ್ನು ಪರಿಗಣಿಸಿ ಸಚಿವ ಸ್ಥಾನ ನೀಡಬೇಕೆಂದು ಒತ್ತಾಯಗಳು ಕೇಳಿಬರುತ್ತಿವೆ.

## ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ: ದೋಷರಹಿತ ಮತದಾರರ ಪಟ್ಟಿ ಸಿದ್ಧಪಡಿಸಲು ಸಹಕರಿಸುವಂತೆ ಜಿಲ್ಲಾ ಚುನಾವನಾಧಿಕಾರಿ ಇಕ್ರಮ್ ಶರೀಫ್ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಜೂ.2: ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ರಾಜ್ಯದಾದ್ಯಂತ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಪಟ್ಟಿ ತಯಾರಿಸುವ ಕುರಿತು ವೇಳಾಪಟ್ಟಿ ಪ್ರಕಟಿಸಿದ್ದು, ಅದರಂತೆ ಕಲಬುರಗಿ ಜಿಲ್ಲೆಯಲ್ಲಿ ದೋಷಪೂರಿತ ಸ್ವಚ್ಚ ಮತದಾರರ ಪಟ್ಟಿ ತಯ್ಯಾರಿಕೆಗೆ ರಾಜಕೀಯ ಪಕ್ಷಗಳು ಮುಖಂಡರು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಚುನಾವಣಾಧಿಕಾರಿ ಇಕ್ರಮ್ ಶರೀಫ್ ಹೇಳಿದರು.

ಮಂಗಳವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಭಾರತ ಚುನಾವಣಾ ಆಯೋಗವು ಎಸ್.ಐ.ಆರ್ ಮೂರನೇ ಹಂತದಲ್ಲಿ ಕರ್ನಾಟಕ ರಾಜ್ಯದಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಪಟ್ಟಿ ತಯಾರಿಸುವ ಕುರಿತು ವೇಳಾಪಟ್ಟಿ ಪ್ರಕಟಿಸಿದೆ. ಅದರಂತೆ ಜೂನ್ 20 ರಿಂದ ಜಿಲ್ಲೆಯಲ್ಲಿ ಪ್ರಕ್ರಿಯೆ ಆರಂಭವಾಗಲಿದೆ ಎಂದಿದ್ದಾರೆ.

ದಿ.01-10-2026 ಅರ್ಹತಾ ದಿನಾಂಕವನ್ನಾಗಿ ಪರಿಗಣಿಸಿ ಈ ವಿಶೇಷ ಸಮಗ್ರ ಮತದಾರರ ಪರಿಷ್ಕರಣೆ ಕಾರ್ಯ ನಡೆಯಲಿದೆ. ಜೂನ್ 20 ರಿಂದ 29ರ ವರೆಗೆ ಚುನಾವಣಾ ಸಿಬ್ಬಂದಿಗೆ ತರಬೇತಿ, ಪೂರ್ವಸಿದ್ಧತೆ ಮುದ್ರಣ ಕಾರ್ಯ ಜರುಗಲಿದೆ. ಜೂನ್ 30 ರಿಂದ ಜುಲೈ 29ರ ವರೆಗೆ ಬಿ.ಎಲ್.ಓ.ಗಳು ಮನೆ-ಮನೆಗೆ ಭೇಟಿ ನೀಡಿ ವಿಉತರಿಸಿ ಸಂಗ್ರಹಣೆ ಮಾಡಲಿದ್ದಾರೆ. ಇದೇ ಅವಧಿಯಲ್ಲಿ ಮತಗಟ್ಟೆಗಳ ರೇಷನಲೈಸೇಷನ್ ಕಾರ್ಯ ಸಹ ಒಟ್ಟಿಗೆ ನಡೆಯಲಿದೆ. ಆಗಸ್ಟ್ 5ಕ್ಕೆ ಕರಡು ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ. ಕರಡು ಪಟ್ಟಿಗೆ ಆಗಸ್ಟ್ 5 ರಿಂದ ಸೆಪ್ಟೆಂಬರ್ 4ರ ವರೆಗೆ ಆಕ್ಷೇಪಣೆ ಆಹ್ವಾನಿಸಿ ಅಕ್ಟೋಬರ್ 3 ರೊಳಗೆ ಆಕ್ಷೇಪಣೆಗಳನ್ನು ವಿಲೇವಾರಿ ಮಾಡಿ ಕೊನೆಗೆ ಅಕ್ಟೋಬರ್ 7ಕ್ಕೆ ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ ಎಂದು ಎಸ್.ಐ.ಆರ್. ಕ್ಯಾಲೆಂಡರ್ ಘಟನಾವಳಿಗಳನ್ನು ವಿವರಿಸಿದರು.

ಕಲಬುರಗಿ ಜಿಲ್ಲೆಯಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಪಟ್ಟಿ ತಯಾರಿಕೆಗೆ ಸಂಬಂಧಿಸಿದಂತೆ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಜಿಲ್ಲೆಯ 9 ವಿಧಾನಸಭಾ ಕ್ಷೇತ್ರಗಳಲ್ಲಿ 11,89,398 ಪುರುಷ, 11,84,171 ಮಹಿಳೆಯರು, 340 ಇತರೆ ಸೇರಿ ಒಟ್ಟು 23,73,909 ಮತದಾರರಿದ್ದು, 2,400 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಪ್ರತಿ ಮತಗಟ್ಟೆಗೆ ಬೂತ್ ಲೇವಲ್ ಆಫೀಸರ್ ನೇಮಕ ಮಾಡಲಾಗಿದ್ದು, ಬಿ.ಎಲ್.ಓ ಗಳ ಮೇಲೆ ಮೇಲುಸ್ತುವಾರಿಗೆ 275 ಜನರನ್ನು ಬಿ.ಎಲ್.ಓ ಸೂಪರ್‌ವೈಸರ್ ನೇಮಕ ಮಾಡಲಾಗಿದೆ.

ಇನ್ನೂ ಬೂತ್‌ವಾರು ಶುದ್ಧ ಮತದಾರರ ಪಟ್ಟಿ ಮತ್ತು ಮ್ಯಾಪಿಂಗ್ ಕಾರ್ಯಕ್ಕೆ ಸಹಕರಿಸಲು ಬೂತ್ ಲೇವೆಲ್ ಏಜೆಂಟರನ್ನು ನೇಮಕ ಮಾಡುವಂತೆ ಈಗಾಗಲೆ ರಾಜಕೀಯ ಪಕ್ಷಗಳಿಗೆ ಸೂಚಿಸಲಾಗಿದೆ. ಮನೆಗೆ ಬರುವ ಬಿ.ಎಲ್.ಓ.ಗಳಿಗೆ ಮತದಾರರು ಅಗತ್ಯ ಸಹಕಾರ ನೀಡಬೇಕೆಂದ ಅವರು, ಎಸ್.ಐ.ಆರ್ ಕುರಿತು ಸಾರ್ವಜನಿಕರಲ್ಲಿ ಯಾವುದೇ ರೀತಿ ಗೊಂದಲಗಳಿದ್ದಲ್ಲಿ ಆಯಾ ಮತಕ್ಷೇತ್ರದ ಮತದಾರರ ನೋಂದಣಾಧಿಕಾರಿಗಳನ್ನು ಸಂಪರ್ಕಿಸುವಂತೆ ಜಿಲ್ಲಾ ಚುನಾವಣಾಧಿಕಾರಿ ಇಕ್ರಮ್ ಶರೀಫ್ ತಿಳಿಸಿದ್ದಾರೆ.

ಫೆಸಿಲಿಟೇಷನ್ ಸೆಂಟರ್ ಸ್ಥಾಪನೆ: 2022ರ ಮತದಾರರ ಪಟ್ಟಿಗೆ 2025ರ ಮತದಾರರ ಪಟ್ಟಿಗೆ ಮ್ಯಾಪಿಂಗ್ ಮಾಡುವ ಎಸ್.ಐ.ಆರ್. ಕಾರ್ಯ ತೀವ್ರಗೊಳಿಸಲು ಬಿ.ಎಲ್.ಓ. ಹಂತದಲ್ಲಿ ಫೆಸಿಲಿಟೇಷನ್ ಸೆಂಟರ್ ಸ್ಥಾಪನೆ ಮಾಡಲಾಗುತ್ತಿದೆ. ಇದಲಕ್ಕೆ ಗ್ರಾಮೀಣ ವಿಭಾಗದಲ್ಲಿ ವೋಟರ್ ಫೆಸಿಲಿಟೇಷನ್ ಸೆಂಟರ್ ಸ್ಥಾಪನೆಗೆ ಜಿಲ್ಲಾ ಪಂಚಾಯತ್ ಸಿ.ಇ.ಓ ಅವರಿಗೆ ನಿರ್ದೇಶನ ನೀಡಲಾಗಿದೆ. ಬಿ.ಎಲ್.ಓ. ಮತ್ತು ಬಿ.ಎಲ್.ಎ.ಗಳ ಇದರ ಸದುಪಯೋಗ ಪಡೆದು ಪರಸ್ಪರ ಸಮನ್ವಯ ಎಸ್.ಐ. ಆರ್. ಕಾರ್ಯ ಯಾಶಸ್ವಿಗೊಳಸಿಬೇಕೆಂದು ಜಿಲ್ಲಾ ಚುನಾವಣಾಧಿಕಾರಿ ಇಕ್ರಮ್ ಶರೀಫ್ ತಿಳೀಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ ರಾಜುಲ್ ಸಂಕನೂರ್, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ ಇದ್ದರು.

## ಸಿಹಿ ನೀಡಿ, ಸಮವಸ್ತ್ರ ವಿತರಿಸಿ ವಿದ್ಯಾರ್ಥಿಗಳ ಸ್ವಾಗತ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ತಾಲೂಕಿನ ಡಿಗ್ಗಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹೊಸ ಶೈಕ್ಷಣಿಕ ವರ್ಷದ ನಿಮಿತ್ತ ಹಮ್ಮಿಕೊಳ್ಳಲಾಗಿದ್ದ 'ಶಾಲಾ ಪ್ರಾರಂಭೋತ್ಸವ' ಕಾರ್ಯಕ್ರಮವು ಅತ್ಯಂತ ಸಡಗರ ಮತ್ತು ಸಂಭ್ರಮದಿಂದ ಜರುಗಿತು. ಶಾಲೆಗೆ ಆಗಮಿಸಿದ ಪುಟ್ಟ ಮಕ್ಕಳನ್ನು ಹೂವು ನೀಡಿ, ಆರತಿ ಬೆಳಗಿ ಅತ್ಯಂತ ಪ್ರೀತಿಯಿಂದ ಬರಮಾಡಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಪಿ.ಡಿ.ಓ. ವೆಂಕಟೇಶರಾವ ದೇಶಪಾಂಡೆ ಅವರು, "ಮಕ್ಕಳ ಭವಿಷ್ಯವನ್ನು ರೂಪಿಸುವಲ್ಲಿ ಪ್ರಾಥಮಿಕ ಶಿಕ್ಷಣ ಅತಿ ಮುಖ್ಯವಾದದ್ದು. ಗುಣಮಟ್ಟದ ಕಲಿಕೆಗೆ ಪ್ರತಿಯೊಬ್ಬ ವಿದ್ಯಾರ್ಥಿಯೂ ಆದ್ಯತೆ ನೀಡಬೇಕು. ಶಿಕ್ಷಣವು ಜೀವನದ ಪ್ರಗತಿಯ ದಾರಿಯಾಗಿದ್ದು, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು" ಎಂದು ಶಿಕ್ಷಣದ ಮಹತ್ವದ ಬಗ್ಗೆ ಸುದೀರ್ಘವಾಗಿ ವಿವರಿಸಿದರು.

ಸಿಹಿ ಊಟ, ಸಮವಸ್ತ್ರ ವಿತರಣೆ: ಶಾಲೆಗೆ ಮರಳಿದ ಮಕ್ಕಳಿಗೆ ಈ ಸಂದರ್ಭದಲ್ಲಿ ವಿಶೇಷವಾಗಿ ಸಿಹಿ ನೀಡಿ ಶುಭ ಕೋರಲಾಯಿತು. ತದನಂತರ ಸರಕಾರದಿಂದ ಸರಬರಾಜಾದ ಉಚಿತ ಶಾಲಾ ಸಮವಸ್ತ್ರಗಳನ್ನು ವಿದ್ಯಾರ್ಥಿಗಳಿಗೆ ವಿತರಿಸಲಾಯಿತು. ಕಾರ್ಯಕ್ರಮದ ಅಂಗವಾಗಿ ಶಾಲಾ ಆವರಣದಲ್ಲಿ ಗಿಡಕ್ಕೆ ನೀರೆರೆಯುವ ಮೂಲಕ ಪರಿಸರ ಜಾಗೃತಿಯ ಸಂದೇಶ ಸಾರಲಾಯಿತು ಹಾಗೂ ಸರಸ್ವತಿ ಪೂಜೆಯನ್ನು ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ ಬಂಡಯ್ಯ ಸ್ವಾಮಿ, ಶಾಲೆಯ ಮುಖ್ಯ ಗುರುಗಳು, ಶಿಕ್ಷಕ ವೃಂದ, ಸಿಬ್ಬಂದಿಗಳು ಹಾಗೂ ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿ (SDMC) ಅಧ್ಯಕ್ಷರು, ಉಪಾಧ್ಯಕ್ಷರು ಸೇರಿದಂತೆ ಗ್ರಾಮದ ಪ್ರಮುಖರು ಹಾಗೂ ಪಾಲಕರು ಉಪಸ್ಥಿತರಿದ್ದರು.

## ಕಲಿಕೆ ಒಂದು ತಪಸ್ಸು : ಮೂಗನೂರಮಠ



• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಕಲಿಕೆ ಒಂದು ತಪಸ್ಸು ಇದ್ದಂತೆ ಅದನ್ನು ಸಂಪಾದಿಸಲು ಶ್ರಮ ಮತ್ತು ಆಸಕ್ತಿ ಮುಖ್ಯ ಎಂದು ಪಾಚಾರ್ಯ ಎಸ್.ಆರ್.ಮೂಗನೂರಮಠ ಹೇಳಿದರು. ಬಿ.ವಿ.ವಿ.ಸಂಘದ ಬಸವೇಶ್ವರ ಕಲಾ ಮಹಾವಿದ್ಯಾಲಯದಲ್ಲಿ ಸರಸ್ವತಿ ಪೂಜೆ ಸಮಾರಂಭದಲ್ಲಿ ಸರಸ್ವತಿ ದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ತಮ್ಮ ಸಾಮರ್ಥ್ಯ ಹಾಗೂ ಆಸಕ್ತಿ ಅನುಗುಣವಾಗಿ ಕಲಿಕಾ ವಿಷಯವನ್ನು ಆಯ್ಕೆ ಮಾಡಿಕೊಳ್ಳಬೇಕು. ಅಂದಾಗ ಸಾಧನೆಯ ಹಾದಿ ಸುಗಮವಾಗಲಿದೆ ಎಂದರು.

ಕಾರ್ಯಕ್ರಮಕ್ಕೂ ಮೊದಲು ಬೀಳೂರು ಗುರುಬಸವ ಮಹಾಸ್ವಾಮಿಗಳಿಗೆ ಪೂಜೆ ಸಲ್ಲಿಸಲಾಯಿತು. ಇದೇ ಸಂದರ್ಭದಲ್ಲಿ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಹೂ ನೀಡಿ ಆತ್ಮೀಯವಾಗಿ ಸ್ವಾಗತಿಸಲಾಯಿತು. ವೇದಿಕೆ ಮೇಲೆ ಸಂಗೀತ ವಿಭಾಗದ ಮುಖ್ಯಸ್ಥ ಡಾ. ಕೆ.ವಿ.ಮಠ ಇದ್ದರು. ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಹೊಸ ಶೈಕ್ಷಣಿಕ ವರ್ಷದ ಯಶಸ್ಸಿಗೆ ಶುಭ ಹಾರೈಸಿದರು.

## ಕೆಪಿಎಸ್-ಮ್ಯಾಗ್ನೆಟ್ ಯೋಜನೆ ವಿರೋಧಿಸಿ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು



ತಾಲೂಕಿನ ಕೆಪಿಎಸ್ - ಮ್ಯಾಗ್ನೆಟ್ ಯೋಜನೆಯನ್ನು ವಿರೋಧಿಸಿ ಹಾಗೂ ಗುರುಪುರ ಮತ್ತು ಕಟ್ಟೆಮಳಲವಾಡಿ ಕೆಪಿಎಸ್ ಶಾಲೆಗಳಿಗೆ ಸುತ್ತಮುತ್ತಲಿನ ಶಾಲೆಗಳನ್ನು ವಿಲೀನಗೊಳಿಸಿದಂತೆ ಆಗ್ರಹಿಸಿ, ಹುಣಸೂರು ತಾಲೂಕಿನ ವಿವಿಧ ಗ್ರಾಮಗಳ ಗ್ರಾಮಸ್ಥರು ಎಐಡಿಎಸ್‌ಓ ಹಾಗೂ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿ ನೇತೃತ್ವದಲ್ಲಿ ತಾಲೂಕು ಬಿಇಓ ಕಚೇರಿ ಮುಂಭಾಗ ಪ್ರತಿಭಟನೆ ಮಾಡಿ, ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಕಾಳನಾಯಕ್ ಮನವಿ ಪತ್ರ ಸಲ್ಲಿಸಿದರು. ಪ್ರತಿಭಟನೆಯ ನಂತರ ಹುಣಸೂರು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಕಾಳನಾಯಕ್ ಅವರಿಗೆ ಮನವಿ ಪತ್ರ ನೀಡಲಾಯಿತು. ಮನವಿ ಸ್ವೀಕರಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸರ್ಕಾರಿ ಶಾಲೆಗಳನ್ನು ವಿಲೀನಗೊಳಿಸುವುದಿಲ್ಲ, ಮುಚ್ಚುವುದಿಲ್ಲ ಎಂದು ಗ್ರಾಮಸ್ಥರಿಗೆ ಭರವಸೆ ನೀಡಿದರು. ಸಂದರ್ಭದಲ್ಲಿ ಎಐಡಿಎಸ್‌ಓ ಜಿಲ್ಲಾ ಉಪಾಧ್ಯಕ್ಷರಾದ ಸ್ವಾತಿ ಅವರು ಮಾತನಾಡಿ ' ಸರ್ಕಾರ ತನ್ನ ಮೂಲ ಕರ್ತವ್ಯ ಮರೆತು ಜನಸಾಮಾನ್ಯರನ್ನು ಕತ್ತಲೆಗೆ ತಳ್ಳುವ ಹೀನ ಕೆಲಸಕ್ಕೆ ಕೈಹಾಕಿದೆ. ಕೆಪಿಎಸ್ ಮ್ಯಾಗ್ನೆಟ್ ಶಾಲೆಗೆ ಇಷ್ಟೊಂದು ದಾಖಲಾತಿ ಮಾಡಿಸಿದ್ದೇವೆ ಎಂದು ಅಂಕಿ-ಅಂಶಗಳನ್ನು ಪ್ರದರ್ಶಿಸಿ ಜಾರಿಕೊಳ್ಳಲು ಶಿಕ್ಷಕರು ಮತ್ತು ಪೋಷಕರ ಮೇಲೆ ಒತ್ತಡ ಹೇರುತ್ತಿದೆ' ಎಂದು ದೂರಿದರು. ಸರ್ಕಾರಿ ಶಾಲೆಗಳು ಮಕ್ಕಳ ಜ್ಞಾನದ ಮಂದಿರವಾಗಿದೆ. ಹುಣಸೂರಿನಲ್ಲಿ ಗುರುಪುರ ಹಾಗೂ ಕಟ್ಟೆಮಳಲವಾಡಿ ಶಾಲೆಯನ್ನು ಕೆಪಿಎಸ್ ಮ್ಯಾಗ್ನೆಟ್ ಶಾಲೆ ಮಾಡುವುದಾಗಿ ಡಿಡಿಪಿಐ ಹೇಳಿದ್ದಾರೆ. ಯಾವುದೇ ಕಾರಣಕ್ಕೂ ಈ ಸುತ್ತಲಿನ ಶಾಲೆಗಳನ್ನು ಮುಚ್ಚಬಾರದೆಂದು ಆಗ್ರಹಿಸಿದರು. ಕರ್ನಾಟಕ ರಾಜ್ಯ ರೈತ ಸಂಘದ ಮೈಸೂರು ಜಿಲ್ಲಾಧ್ಯಕ್ಷರಾದ ಹೊಸೂರು ಕುಮಾರ್ ಅವರು ಮಾತನಾಡಿ, ಗ್ರಾಮೀಣ ಭಾಗದ ಶಾಲೆಗಳನ್ನು ರಕ್ಷಿಸಿಕೊಳ್ಳುವುದು ನಮ್ಮ ಜವಾಬ್ದಾರಿ. ಕೆಪಿಎಸ್ ಮ್ಯಾಗ್ನೆಟ್ ಯೋಜನೆ ಹಿಂಪಡೆಯುವವರೆಗೆ ನಮ್ಮ ಹೋರಾಟ ನಿಲ್ಲಬಾರದು. ಸರ್ಕಾರ ಎಚ್ಚೆತ್ತುಕೊಂಡು ಈ ಕೂಡಲೇ ನೀತಿಯನ್ನು ಹಿಂಪಡೆಯಬೇಕು. ಇಲ್ಲದಿದ್ದರೆ ದೊಡ್ಡ ಹೋರಾಟವನ್ನು ಸರ್ಕಾರ ಎದುರಿಸಬೇಕಾಗುತ್ತದೆ ಎಂದರು. ಈ ಸಂದರ್ಭದಲ್ಲಿ ದಲಿತ ಸಂಘರ್ಷ ಸಮಿತಿ ಮುಖಂಡರಾದ ರಾಜಣ್ಣ ಅವರು ಮಾತನಾಡಿ, ಮಂಜೇಗೌಡರು, ರಾಜೇಗೌಡರು, ರವಿ, ಭಾಸ್ಕರ್. ಧನಂಜಯ್ ,ಮಹದೇವ್, ರಾಮೇಗೌಡ, ಹರೀಶ್ ಹಾಗೂ ದೇವರಾಜು ಉಜಿನಿಗೌಡ ಒಳಗೊಂಡಂತೆ ವಿವಿಧ ಗ್ರಾಮಗಳಿಂದ ಪೋಷಕರು, ಗ್ರಾಮಸ್ಥರು ಹಾಜರಿದ್ದರು

## ದೇವದಾಸಿ ಮಹಿಳೆಯರ ಸಮೀಕ್ಷೆ ಅಪೂರ್ಣ: ಮರುಸಮೀಕ್ಷೆಗೆ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ರಾಜ್ಯ ಸರ್ಕಾರ ನಡೆಸಿರುವ ಮಾಜಿ ದೇವದಾಸಿ ಮಹಿಳೆಯರು ಹಾಗೂ ಅವರ ಮೂರು ತಲೆಮಾರಿನ ಕುಟುಂಬಗಳ ಸಮೀಕ್ಷೆ ಅಪೂರ್ಣವಾಗಿದ್ದು, ಸಮಗ್ರ ಮರುಸಮೀಕ್ಷೆ ನಡೆಸಬೇಕು ಎಂದು ಕರ್ನಾಟಕ ರಾಜ್ಯ ದೇವದಾಸಿ ಮಹಿಳೆಯರ ವಿಮೋಚನಾ ಸಂಘ ಒತ್ತಾಯಿಸಿದೆ. ಸಂಘದ ಜಿಲ್ಲಾ ಮುಖಂಡರಾದ ಎ. ಸ್ವಾಮಿ, ಹೆಚ್. ದುರುಗಮ್ಮ, ಭಾರತಿ, ಲಕ್ಷ್ಮೀದೇವಿ, ದೊಡ್ಡ ಹುಲಿಗೆಮ್ಮ, ಶಿಲ್ಪಾ, ರುದ್ರಮ್ಮ, ಶೇಖಮ್ಮ, ರಂಗಮ್ಮ, ಗಂಗಮ್ಮ, ಕಾಡಮ್ಮ, ಗೋವಿಂದಮ್ಮ, ರೇಣುಕಮ್ಮ, ದುರುಗಮ್ಮ, ಹಂಪಮ್ಮ ಸೇರಿದಂತೆ ಹಲವು ಮಹಿಳೆಯರು ಮುಖ್ಯಮಂತ್ರಿ ಅವರಿಗೆ ಸಲ್ಲಿಸಿರುವ ಮನವಿಯಲ್ಲಿ ಈ ಬೇಡಿಕೆಗಳನ್ನು ಮುಂದಿಟ್ಟಿದ್ದಾರೆ.

2007-08ರಲ್ಲಿ ನಡೆದ ಸಮೀಕ್ಷೆಯಲ್ಲಿ ಸುಮಾರು 46,800 ದೇವದಾಸಿ ಮಹಿಳೆಯರನ್ನು ಗುರುತಿಸಲಾಗಿತ್ತು. ಆದರೆ ಆಗಲೂ 20 ಸಾವಿರಕ್ಕೂ ಹೆಚ್ಚು ಮಹಿಳೆಯರು ಸಮೀಕ್ಷೆಯಿಂದ ಹೊರಗುಳಿದಿದ್ದರು. ಈ ಹಿನ್ನೆಲೆಯಲ್ಲಿ ಹಲವು ವರ್ಷಗಳಿಂದ ಮರುಸಮೀಕ್ಷೆಗೆ ಒತ್ತಾಯಿಸಲಾಗುತ್ತಿತ್ತು. ಅದರ ಫಲವಾಗಿ 2025ರಲ್ಲಿ ಸರ್ಕಾರ ಮತ್ತೊಮ್ಮೆ ಸಮೀಕ್ಷೆ ನಡೆಸಿದರೂ ಕೇವಲ 23,385 ಮಹಿಳೆಯರನ್ನು ಮಾತ್ರ ಗುರುತಿಸಿರುವುದು ಗಂಭೀರ ಲೋಪವಾಗಿದೆ ಎಂದು ಅವರು ಆರೋಪಿಸಿದ್ದಾರೆ.



ಹಿಂದಿನ ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟ ಮಹಿಳೆಯರ ಮಕ್ಕಳ ಹಾಗೂ ಮೊಮ್ಮಕ್ಕಳ ಕುಟುಂಬಗಳ ಸಂಖ್ಯೆಯನ್ನು ಪರಿಗಣಿಸಿದರೆ ಸುಮಾರು ಎರಡು ಲಕ್ಷಕ್ಕೂ ಹೆಚ್ಚು ಕುಟುಂಬಗಳು ಲೆಕ್ಕಕ್ಕೆ ಬರಬೇಕಿತ್ತು. ಆದರೆ ಪ್ರಸ್ತುತ ಸಮೀಕ್ಷೆಯಲ್ಲಿ ಸುಮಾರು 90 ಸಾವಿರ ಕುಟುಂಬಗಳನ್ನು ಮಾತ್ರ ದಾಖಲಿಸಿರುವುದು ಸಮೀಕ್ಷೆಯ ಅಸಮರ್ಪಕತೆಯನ್ನು ತೋರಿಸುತ್ತದೆ ಎಂದು ತಿಳಿಸಿದ್ದಾರೆ.

ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆಯಲ್ಲಿನ ಕೊರತೆಗಳನ್ನೂ ಈ ಸಮೀಕ್ಷೆ ಬಯಲಿಗೆಳೆದಿದೆ. ಗುರುತಿಸಲ್ಪಟ್ಟ ಮಹಿಳೆಯರಲ್ಲಿ ಕೇವಲ ಸಾವಿರಕ್ಕೂ ಕಡಿಮೆ ಮಂದಿಗೆ ಮನೆ ಸೌಲಭ್ಯ ದೊರೆತಿದ್ದು, ಅರ್ಧದಷ್ಟು ಮಂದಿಗೆ ಮಾತ್ರ ಪಿಂಚಣಿ ಸಿಕ್ಕಿದೆ. ಅನೇಕ ವಯೋವೃದ್ಧ ಮಹಿಳೆಯರು ಯಾವುದೇ ಸೌಲಭ್ಯ ಪಡೆ-ಯದೆ ಮೃತಪಟ್ಟಿದ್ದಾರೆ ಎಂದು ದೂರಿದ್ದಾರೆ. ದೇವದಾಸಿ ಮಹಿಳೆಯರ ಮಕ್ಕಳನ್ನು ಸಮೀಕ್ಷೆಗೆ ಸೇರಿಸಲು ಅನಗತ್ಯ ದಾಖಲೆಗಳನ್ನು ಕಡ್ಡಾಯಗೊಳಿಸಿರುವುದರಿಂದ ಅನೇಕ ಕುಟುಂಬಗಳು ಹೊರಗುಳಿದಿವೆ. 1982ರ ನಂತರ ದೇವದಾಸಿಗಳಾಗಿ ಗುರುತಿಸಲ್ಪಟ್ಟ ಮಹಿಳೆಯರನ್ನೂ ಈ ಸಮೀಕ್ಷೆಯಲ್ಲಿ ಸೇರಿಸಿಲ್ಲ ಎಂದು ಸಂಘದ ಮುಖಂಡರು ತಿಳಿಸಿದ್ದಾರೆ.

ಬೇಡಿಕೆಗಳು

ನಿಂತಿರುವ ಪಿಂಚಣಿಯನ್ನು ಕೂಡಲೇ ಬಿಡುಗಡೆ ಮಾಡಿ ಮಾಸಿಕ ?6,000ಕ್ಕೆ ಹೆಚ್ಚಿಸಬೇಕು. 2007ರ ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟ ಮಹಿಳೆಯರನ್ನು ಹೊಸ ಸಮೀಕ್ಷೆಯಿಂದ ಹೊರಗಿಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ನಮೂನೆ-1, 2 ಮತ್ತು 3ರಡಿ ಸಮರ್ಪಕ ಮರುಸಮೀಕ್ಷೆ ನಡೆಸಬೇಕು. ದೇವದಾಸಿ ಮಹಿಳೆಯರ ಮಕ್ಕಳಿಗೆ ಶಿಕ್ಷಣಕ್ಕಾಗಿ ತಾಯಿಯ ದೇವದಾಸಿ ದೃಢೀಕರಣ ಪತ್ರ ನೀಡಬೇಕು.

ಎಲ್ಲಾ ದೇವದಾಸಿ ಮಹಿಳೆಯರಿಗೆ ?2 ಲಕ್ಷ ಸಾಲ ಹಾಗೂ ಸಹಾಯಧನ, ಶಿಕ್ಷಣಕ್ಕೆ ಅನುಗುಣವಾಗಿ ಉದ್ಯೋಗ ಅಥವಾ ಮಾಸಿಕ ?10 ಸಾವಿರ ನಿರುದ್ಯೋಗ ಭತ್ಯೆ ನೀಡಬೇಕು. ಭೂಹೀನ ಮಹಿಳೆಯರಿಗೆ ಐದು ಎಕರೆ ಭೂಮಿ ಹಂಚಿಕೆ ಮಾಡಬೇಕು. 8Ø80 ಅಡಿ ನಿವೇಶನ ಹಾಗೂ ?12 ಲಕ್ಷ ವೆಚ್ಚದ ಉಚಿತ ಮನೆ ನಿರ್ಮಿಸಿ ಕೊಡಬೇಕು. ಮದುವೆ ಸಹಾಯಧನ ಅರ್ಜಿಗಳನ್ನು ಒಂದು ವರ್ಷದೊಳಗೆ ವಿಲೇವಾರಿ ಮಾಡಿ ಹಣ ಬಿಡುಗಡೆ ಮಾಡಬೇಕು. ಎಲ್ಲ ದೇವದಾಸಿ ಮಹಿಳೆಯರಿಗೆ ಶಾಶ್ವತ ದೇವದಾಸಿ ದೃಢೀಕರಣ ಪತ್ರ ನೀಡಬೇಕು ಎಂದು ಆಗ್ರಹಿಸಿದ್ದಾರೆ.

## ಮಂಗಳೂರು, ಭಾನಾಪುರ: ಗ್ರಾಮ-1 ಪರಿಣಾಮಕಾರಿ ಅನುಷ್ಠಾನಕ್ಕೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕೊಪ್ಪಳ ಜಿಲ್ಲೆಯಲ್ಲಿ ಗ್ರೇಡ್-2 ಇಂದ ಗ್ರೇಡ್-1 ನವೀಕರಿಸಲಾದ ಹಾಗೂ ಹತ್ತು ಸಾವಿರಕ್ಕೂ ಅಧಿಕ ಜನಸಂಖ್ಯೆ ಇರುವ ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ-1 ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಸಲುವಾಗಿ ಕುಕನೂರು ತಾಲ್ಲೂಕಿನ 2 ಗ್ರಾಮ ಪಂಚಾಯತಿಗಳಲ್ಲಿ ಹೊಸದಾಗಿ ಅಧಿಸೂಚನೆಯನ್ನು ಸರ್ಕಾರವು ಹೊರಡಿಸಿರುತ್ತದೆ. ಕೊಪ್ಪಳ ಜಿಲ್ಲೆಯ ಕುಕನೂರು ತಾಲ್ಲೂಕಿನ ಮಂಗಳೂರು ಗ್ರಾಮ ಪಂಚಾಯತ್ ಗ್ರೇಡ್-1 (ಹತ್ತು ಸಾವಿರಕ್ಕೂ ಅಧಿಕ ಜನಸಂಖ್ಯೆ ಇರುವ ಗ್ರಾಮ) ಮತ್ತು ಭಾನಾಪುರ ಗ್ರೇಡ್-2 ರಿಂದ 1, ಈ ಎರಡು ಗ್ರಾಮಗಳಲ್ಲಿ ತಲಾ ಒಂದು ಹುದ್ದೆಗಳಲ್ಲಿ ಆಯಾ ಗ್ರಾಮ ಪಂಚಾಯತಿಗಳಲ್ಲಿನ ಆಸಕ್ತರು ಕಾರ್ಯನಿರ್ವಹಿಸಲು ಇಚ್ಛಿಸಿದ್ದಲ್ಲಿ ಜೂನ್ 15ರೊಳಗಾಗಿ ಪೋರ್ಟಲ್ https://sevasindhuservices.karnataka.gov.in/loginWindow.do ನಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಮಾತ್ರ ಅವಕಾಶ ಕಲ್ಪಿಸಿದ್ದು, ಇದರ ಸದುಪಯೋಗಪಡಿಸಿಕೊಳ್ಳಬೇಕೆಂದು ಕೊಪ್ಪಳ ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಸರಕಾರ
**ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು,**
**ಸಾಮಾಜಿಕ ಅರಣ್ಯ ಉಪ ವಿಭಾಗ, ರವರ ಕಛೇರಿ ಕಲಬುರಗಿ**

ಸಂಖ್ಯೆ: ಸಅಸಂ/ಕಲ/ಸಾಅ/ಇ-ಟೆಂಡರ/ಸಿಆರ್-/2026-27 ದಿನಾಂಕ : 01-06-2026

**:: ಟೆಂಡರ್ ಪ್ರಕಟಣೆ (ಕರೆ-2) ::**

(**KPPP ಮೊದಲನೆ ಆವೃತ್ತಿಯಲ್ಲಿನ ಪ್ರೋರ್ಟಲ್ ಮೂಲಕ ಮಾತ್ರ**)

ಕಲಬುರಗಿ ಸಾಮಾಜಿಕ ಅರಣ್ಯ ವಿಭಾಗ ಕಛೇರಿಯಿಂದ 2026-27ನೇ ಸಾಲಿನಲ್ಲಿ ಕೆ.ಎಫ್.ಡಿ.ಎಫ್ ಮತ್ತು ಆರ್.ಎಸ್.ಪಿ. ಯೋಜನೆಗಳಡಿ ನೆಡುತೋಪು ನಿರ್ಮಾಣ/ನಿರ್ವಹಣೆ ಕಾಮಗಾರಿಗಳನ್ನು ಕೈಗೊಳ್ಳಲು ಅರ್ಹ ಗುತ್ತಿಗೆದಾರರಿಗೆ ಇ-ಟೆಂಡರ್‌ನ್ನು kppp.karnataka.gov.in ನಡಿಯಲ್ಲಿ ಟೆಂಡರ್ ಅಹ್ವಾನಿಸಲಾಗಿದ್ದು, ವಿವರ ಈ ಕೆಳಗಿನಂತಿದೆ.

ಕಾಮಗಾರಿಯ ವಿವರ : **ಕಲಬುರಗಿ ಸಾಮಾಜಿಕ ಅರಣ್ಯ ವಿಭಾಗದಲ್ಲಿ ಪ್ರತ್ಯಕವಾಗಿ ಟೆಂಡರ್ ಅಹ್ವಾನಿಸಲಾಗಿದೆ.**
1) ಟೆಂಡರ್‌ಗಿಟ್ಟ ಮೊತ್ತ : **ಕನಿಷ್ಠ 419100/-, ಗರಿಷ್ಠ 1242800/-,** 2) ಲೆಕ್ಕ ಶೀರ್ಷಿಕೆ : ಕೆ.ಎಫ್.ಡಿ.ಎಫ್ ಮತ್ತು ಆರ್.ಎಸ್.ಪಿ. 3) ಗುತ್ತಿಗೆದಾರರ ಅರ್ಹತೆ : 2026-27ನೇ ಸಾಲಿನಲ್ಲಿ ಪ್ರಾದೇಶಿಕ ಅರಣ್ಯ ವಿಭಾಗದಲ್ಲಿ ನೊಂದಣಿ ಮಾಡಿರಬೇಕು, 4) ತಾಂತ್ರಿಕ ಹಾಗೂ ಆರ್ಥಿಕ ಬಿಡ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ : **09-06-2026 ಅಪರಾಹ್ನ 4.00 ಗಂಟೆಯವರೆಗೆ,** 5) ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿನಾಂಕ : **10-06-2026 ಅಪರಾಹ್ನ 4.00 ಗಂಟೆ ನಂತರ,** 6) ಆರ್ಥಿಕ ಬಿಡ್‌ಗಳನ್ನು ತೆರೆಯುವ ದಿನಾಂಕ : **11-06-2026 ಅಪರಾಹ್ನ 4.00 ಗಂಟೆ ನಂತರ** (ತಾಂತ್ರಿಕ ಬಿಡ್‌ನಲ್ಲಿ ಅರ್ಹತೆ ಹೊಂದಿದಲ್ಲಿ ಮಾತ್ರ ಆರ್ಥಿಕ ಬಿಡ್ ತೆರೆಯಲಾಗುವುದು. 7) ಹೆಚ್ಚಿನ ವಿವರಗಳಿಗಾಗಿ ಸಂಪರ್ಕಿಸಬೇಕಾದ ವಿಳಾಸ : ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಸಾಮಾಜಿಕ ಅರಣ್ಯ ಉಪ ವಿಭಾಗ ಎಸ್.ಬಿ. ಟೆಂಪಲ್ ರೋಡ, ಕಲಬುರಗಿ.

**ಸಹಿ/- ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು**
ವಾ.ಸಾ.ಸಂ.ಇ/ಕಲಬುರಗಿ/177/ಕೆ.ಎಸ್.ಎಂ.ಸಿ.&ಎ/2026-27 **ಸಾಮಾಜಿಕ ಅರಣ್ಯ ಉಪ ವಿಭಾಗ, ಕಲಬುರಗಿ**

## ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಜೂ 04 ರಂದು ರಾಯಚೂರಗೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಜೂ 02 : ಭಾರತ ಸರ್ಕಾರದ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಜೂನ್ 04 ರಂದು ರಾಯಚೂರು ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.

ಅಂದು ಬೆಳಿಗ್ಗೆ 11:15ಕ್ಕೆ ಯಾದಗಿರಿ ಜಿಲ್ಲೆಯ ಗುರುಮಿಠಕಲ್ ತಾಲೂಕಿನ ಬಡೆಪಲ್ಲಿ ಗ್ರಾಮದಿಂದ ನಿರ್ಗಮಿಸಿ, ಮಧ್ಯಾಹ್ನ 12 ಗಂ-ಟೆಗೆ ರಾಯಚೂರಿನ ಶಕ್ತಿನಗರಕ್ಕೆ ಆಗಮಿಸಿ ಶಕ್ತಿನಗರದ ಆರ್.ಟಿ.ಪಿ.ಎಸ್. ಅತಿಥಿ ಗೃಹದಲ್ಲಿ ರಾಯಚೂರು ಮತ್ತು ಯಾದಗಿರಿ ಮಹತ್ವಾಕಾಂಕ್ಷೆ ಜಿಲ್ಲೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸುವರು.

ಮಧ್ಯಾಹ್ನ 1:30 ರಿಂದ 2:30ರವರೆಗೆ ಕಾಯ್ದಿರಿಸಲಾಗಿದೆ.

ಮಧ್ಯಾಹ್ನ 2:30ಗಂಟೆಗೆ ಶಕ್ತಿನಗರದ ಆರ್.ಟಿ.ಪಿ.ಎಸ್ ಅತಿಥಿ ಗೃಹದಿಂದ ನಿರ್ಗಮಿಸಿ, ರಾಯಚೂರಿನ ನೂತನ ಜಿಲ್ಲಾಧಿಕಾರಿಗಳ ಕಚೇರಿಗೆ ಆಗಮಿಸಿ ಭಾರತ ವನ ಪ್ಲಾಂಟೇಷನ್ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ನಂತರ ಸಂಜೆ 4 ಗಂಟೆಗೆ ರಾಯಚೂರು ಜಿಲ್ಲಾಧಿಕಾರಿಗಳ ಕಚೇರಿಯಿಂದ ವಿಜಯನಗರ ಜಿಲ್ಲೆಯ ಹೊಸಪೇಟೆ ಕಡೆಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರ ಪ್ರವಾಸ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.02: ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಅವರು ಬೆಂಗಳೂರಿನಿಂದ ರೈಲಿನ ಮೂಲಕ ಜೂನ್ 4 ರಂದು ಗುರುವಾರ ಬೆಳಿಗ್ಗೆ 8.30 ಗಂಟೆಗೆ ಕಲಬುರಗಿಗೆ ಆಗಮಿಸುವರು.

ಅಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿಯಿಂದ ಕಾರಿನ ಮೂಲಕ ಕಾಳಗಿಗೆ ಪ್ರಯಾಣಿಸಿ, ಬೆಳಿಗ್ಗೆ 11.30 ಗಂಟೆಗೆ ಕಾಳಗಿಯ ಸಮುದಾಯ ಆರೋಗ್ಯ ಕೇಂದ್ರ (ಸಿ.ಹೆಚ್.ಸಿ.) ಕ್ಕೆ ಭೇಟಿ ನೀಡುವರು.

ಅಂದು ಮಧ್ಯಾಹ್ನ 1 ಗಂಟೆಗೆ ಕಾಳಗಿನ ತಾಲೂಕಿನ ವಚ್ಚಾ ಗ್ರಾಮದಲ್ಲಿ ಶ್ರೀ ಭಕ್ತ ಕನಕದಾಸರು ಮತ್ತು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಮೂರ್ತಿ ಉದ್ಘಾಟಿಸುವರು ಹಾಗೂ ಬೀರಲಿಂಗೇಶ್ವರ ಗುಡಿ ಹತ್ತಿರ ಮಹಿಳಾ ಸ್ಪಂದನ ಸಮಾವೇಶ (ನಿಮ್ಮ ದೂರು ನಮ್ಮ ಪರಿಹಾರ) ದಲ್ಲಿ ಭಾಗವಹಿಸುವರು. ನಂತರ ಸಂಜೆ 7 ಗಂಟೆಗೆ ಕಲಬುರಗಿಯಿಂದ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

## ದೇಶಿ ಕಲೆ ಉಳಿಸುವಲ್ಲಿ ಯುವತಿ ಸಂಘದ ಶ್ರಮ ಶ್ಲಾಘನೀಯ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂನ್.02 – ಭಾರತ ದೇಶವು ಹಳ್ಳಿಗಳಿಂದ ಕೂಡಿದ ದೇಶವಾಗಿದೆ. ಇಂತಹ ಹಳ್ಳಿ ಕಲಾವಿದರ ಕಲೆ ಹಾಗೂ ಸಾಹಿತ್ಯದಲ್ಲಿ ನಾಡಿನ ಪ್ರಜ್ಞೆ ಮತ್ತು ಸಂಸ್ಕೃತಿಯ ಪರಂಪರೆ ಹಾಸುಹೊಕ್ಕಾಗಿದೆ. ಹೀಗಾಗಿ ದೇಶಿ ಸೊಗಡಿನ ಕಲೆಯನ್ನು ಉಳಿಸಿ ಬೆಳೆಸಿದ ನಿಜವಾದ ಕಲಾವಿದರೆಂದರೆ ಅದು ಜನಪದ ಕಲಾವಿದರು ಎಂದು ಹಿರಿಯ ಕಲಾವಿದರಾದ ಪ್ರಕಾಶ್ ಅವರು ಅಭಿಪ್ರಾಯಪಟ್ಟರು.

ಅವರು ಇತ್ತೀಚಿಗೆ ನಗರದ ಪಾಂಡುರಂಗಮಂದಿರದಲ್ಲಿ ಓನಕೆ ಓಬ್ಬವ್ವ ಯುವತಿ ಸಂಘ (ರಿ) ಬೀದರ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಓನಕೆ ಓಬ್ಬವ್ವ ಉತ್ಸವ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಇಂದಿನ ಕಲಾವಿದರು ಜನಪದ ಹಾಡು, ನರ್ತನ ಹಾಗೂ ನಾಟಕ ಪ್ರದರ್ಶನದಲ್ಲಿ ಎಷ್ಟೇ ಪ್ರಜ್ಞಾವಂತರಾಗಿದ್ದರೂ ಸಹ, ಅಪ್ಪಟ ಜನಪದರ ಮುಂದೆ ಅವರ ಕಲೆ ಗೌಣವಾಗುತ್ತದೆ. ಅಂತಹ ನಿಜವಾದ ಜನಪದ ಕಲಾವಿದರನ್ನು ಉಳಿಸಿ ಬೆಳೆಸುವ ಕಾರ್ಯವನ್ನು ಇಂದು ಓನಕೆ ಓಬ್ಬವ್ವ ಯುವತಿ ಸಂಘ ಮಾಡುತ್ತಿರುವುದು ನಿಜಕ್ಕೂ ಪ್ರಶಂಸನೀಯ ಎಂದರು.

ಇದೇ ವೇಳೆ ವೀರ ಮಹಿಳೆ ಓನಕೆ ಓಬ್ಬವ್ವರ ಶೌರ್ಯ ಮತ್ತು ಆದರ್ಶಗಳನ್ನು ಇಂದಿನ ಮಹಿಳೆಯರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದ ಅವರು, ಇಲಾಖೆಯ ಸಹಯೋಗದೊಂದಿಗೆ ಸಂಘವು ಇಂತಹ ವಿಭಿನ್ನ ಕಾರ್ಯಕ್ರಮ ಹಮ್ಮಿಕೊಂಡಿರುವುದಕ್ಕೆ ಅಭಿನಂದನೆ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲೆಯ ವಿವಿಧ ಕಲಾತಂಡಗಳಿಂದ ವಿಭಿನ್ನ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಈ ಕಾರ್ಯಕ್ರಮದಲ್ಲಿ ರಾಜಕುಮಾರ್, ಪ್ರಕಾಶ್ ಕುಲಕರ್ಣಿ, ಲಕ್ಷ್ಮಿ ಚಿಟ್ಟಾ, ಶಿವಕುಮಾರ್, ಮಾಣಿಕ, ರಾಜಕುಮಾರ್, ಹಿರಿಯ ಕಲಾವಿದರಾದ ನೂರಂದಪ್ಪ ಮಂಗಲಾ, ಚಂದ್ರಕಲಾ, ಪಾರ್ವತಿ, ರೇಣುಕಾ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಕಾರ್ಯಕ್ರಮದ ಸ್ವಾಗತ ಗಂಗಮ್ಮ, ಸಂಚಾಲನೆ ಕೃಷ್ಣಾ, ವಂದನಾರ್ಪಣೆ ಮಹಾದೇವಿ ನೆರವೇರಿಸಿದರು.

## ಬೀದರ್‌ನಲ್ಲಿ ಚನ್ನಮ್ಮ ಉತ್ಸವ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಯಶಸ್ವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂನ್.02– ಭಾರತ ದೇಶವು ಹಳ್ಳಿಗಳಿಂದ ಕೂಡಿದ ದೇಶವಾಗಿದೆ. ಇಂತಹ ಹಳ್ಳಿ ಕಲಾವಿದರ ಕಲೆ ಮತ್ತು ಸಾಹಿತ್ಯದಲ್ಲಿ ನಾಡಿನ ಪ್ರಜ್ಞೆ ಹಾಗೂ ಸಂಸ್ಕೃತಿಯ ಪರಂಪರೆ ಹಾಸುಹೊಕ್ಕಾಗಿದೆ. ಹೀಗಾಗಿ ದೇಶಿ ಸೊಗಡಿನ ಕಲೆಯನ್ನು ಉಳಿಸಿ ಬೆಳೆಸಿದ ನಿಜವಾದ ಕಲಾವಿದರೆಂದರೆ ಅದು ಜನಪದ ಕಲಾವಿದರು" ಎಂದು ಕನ್ನಡ ಜಾನಪದ ಪರಿಷತ್ ಅಕಾಡೆಮಿಯ ಮಹಿಳಾ ಸದಸ್ಯೆ ಮಂಗಲಾ ತಿಳಿಸಿದರು.

ಅವರು ಇತ್ತೀಚಿಗೆ ನಗರದ ಪ್ರತಾಪನಗರದ ಹನುಮಾನ್ ಮಂದಿರದ ಕಲ್ಯಾಣ ಮಂಟಪದಲ್ಲಿ ಚನ್ನಮ್ಮ ಕಲಾ ಸಾಹಿತ್ಯ ಸೇವಾ ಸಂಘ (ರಿ) ಬೀದರ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಚನ್ನಮ್ಮನ ಉತ್ಸವ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಜನಪದ ಹಾಡಿನಲ್ಲಿ, ನರ್ತನದಲ್ಲಿ ಹಾಗೂ ನಾಟಕ ಪ್ರದರ್ಶನದಲ್ಲಿ ಇಂದಿನ ಕಲಾವಿದರು ಎಷ್ಟೇ ಪ್ರಜ್ಞಾವಂತರಾಗಿದ್ದರೂ ಕೂಡ, ಅಪ್ಪಟ ಜನಪದರ ಮುಂದೆ ಅವರ ಕಲೆ ಗೌಣವಾಗುತ್ತದೆ. ಇಂತಹ ಕಲಾ ಪರಂಪರೆಯನ್ನು ಮತ್ತು ನಿಜವಾದ ಜನಪದ ಕಲಾವಿದರನ್ನು ಉಳಿಸಿ ಬೆಳೆಸುವ ಕಾರ್ಯವನ್ನು ಚನ್ನಮ್ಮ ಕಲಾ ಸಾಹಿತ್ಯ ಸೇವಾ ಸಂಘವು ಮಾಡುತ್ತಿರುವುದು ನಿಜಕ್ಕೂ ಪ್ರಶಂಸನೀಯ ಎಂದು ಅವರು ಶ್ಲಾಘಿಸಿದರು.

ಇದೇ ವೇಳೆ ಕಿತ್ತೂರು ರಾಣಿ ಚನ್ನಮ್ಮನವರ ವೀರತ್ವ ಹಾಗೂ ಆದರ್ಶಗಳನ್ನು ಸ್ಮರಿಸಿದ ಅವರು, ವೀರ ಮಹಿಳೆಯರ ಆದರ್ಶಗಳು ಇಂದಿನ ಎಲ್ಲಾ ಮಹಿಳೆಯರಲ್ಲೂ ಮೂಡಿಬರಬೇಕು. ಇಲಾಖೆಯ ಸಹಯೋಗದೊಂದಿಗೆ ಇಂತಹ ವಿಭಿನ್ನ ಕಾರ್ಯಕ್ರಮ ಹಮ್ಮಿಕೊಂಡಿರುವುದು ಅಭಿನಂದನೀಯ. ಬೀದರ್‌ನ ಕಲಾವಿದರು ತಮ್ಮ ಅತ್ಯುತ್ತಮ ಕಲಾ ಪ್ರದರ್ಶನದ ಮೂಲಕ ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಬೆಳೆಯುವಂತಾಗಲಿ" ಎಂದು ಶುಭ ಹಾರೈಸಿದರು.

ಉತ್ಸವದ ಅಂಗವಾಗಿ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿವಿಧ ಕಲಾತಂಡಗಳಿಂದ ಮೂಡಿಬಂದ ಪ್ರದರ್ಶನಗಳು ಪ್ರೇಕ್ಷಕರ ಮನ ಗೆದ್ದವು.

ಈ ಕಾರ್ಯಕ್ರಮದಲ್ಲಿ ರೇವಣಪ್ಪ ಮುಲಗೆ, ರಾಜಕುಮಾರ್ ಹುಮನಾಬಾದೆ, ಪ್ರಕಾಶ್ ಕುಲಕರ್ಣಿ, ಲಕ್ಷ್ಮಿ ಚಿಟ್ಟಾ, ಶಿವಕುಮಾರ್, ಮಾಣಿಕ, ರಾಜಕುಮಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು. ಮಾಹಾದೇವಿ ಅವರು ಎಲ್ಲರನ್ನೂ ಸ್ವಾಗತಿಸಿದರು, ಕೃಷ್ಣಾ ಅವರು ಕಾರ್ಯಕ್ರಮ ಸಂಚಾಲನೆ ನಡೆಸಿಕೊಟ್ಟರೆ, ಬಸವರಾಜ ಅವರು ವಂದನಾರ್ಪಣೆ ಮಾಡಿದರು.

## ಅವರಾದ (ಬಿ):ಶಾಲಾ ಪ್ರಾರಂಭೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.2–2026–27ನೇ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭೋತ್ಸವನ್ನು ಅವರಾದ(ಬಿ) ಕರ್ನಾಟಕ ಪಬ್ಲಿಕ್ ಸ್ಕೂಲ್‌ನಲ್ಲಿ ನೆರವೇರಿಸಲಾಯಿತು.

ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಶೇಖರ್ ಹಂಚಿನಾಳ, ಶಿಕ್ಷಣ ಸಂಯೋಜಕ ಲಕ್ಷ್ಮಿಕಾಂತ್, ಸಿಆರ್‌ಪಿ ಶರಣು ಆಗಮಿಸಿ ಕಾರ್ಯಕ್ರಮಕ್ಕೆ ಹೆಚ್ಚಿನ ಚೈತನ್ಯ ತುಂಬಿದರು. ಎಲ್ಲ ವಿದ್ಯಾರ್ಥಿಗಳಿಗೆ ಹೂ ಗುಚ್ಛ ನೀಡಿ, ಪುಷ್ಪವೃಷ್ಟಿ ಮಾಡುವ ಮೂಲಕ ಸ್ವಾಗತಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅನಿಲ್ ಕುಮಾರ್ ಕಿವಡೆ ವಹಿಸಿದ್ದರು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಉಪ ಪ್ರಾಂಶುಪಾಲ ಸಂತೋಷ ಕುಮಾರ, ಸರಕಾರಿ ಪ್ರೌಢಶಾಲೆ ಮುಖ್ಯಗುರು ಗೋಪಾಲ್ ಚೌಹಾನ್ ಆಗಮಿಸಿದ್ದರು. ಎಸ್‌ಡಿಎಂಸಿ ಸದಸ್ಯರಾದ ರೇವಣ್ಣಸಿದಪ್ಪ ಮಕರಬಿ ಹಾಗೂ ಇನ್ನಿತರ ಸದಸ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಮಕ್ಕಳಿಗೆ 2 ಜೊತೆ ಸಮವಸ್ತ್ರ ಹಾಗೂ ಪಠ್ಯ ಪುಸ್ತಕ ಸಾಂಕೇತವಾಗಿ ವಿತರಣೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಕಾರ್ಯಕ್ರಮ ಉದ್ದೇಶಿಸಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮಾತನಾಡಿದರು. ಶೇ. ಹತ್ತರಷ್ಟು ದಾಖಲಾತಿ ಹೆಚ್ಚು ಮಾಡಲು ಕಿವಿ ಮಾತು ಹೇಳಿದರು. ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಶಿಕ್ಷಕರ ಪಾತ್ರ ಬಹುಮುಖ್ಯ ಎಲ್ಲರೂ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಪ್ರಮುಖ ಪಾತ್ರವಹಿಸಬೇಕು. ಅದರಲ್ಲೂ ಈ ವರ್ಷದಿಂದ ದ್ವಿ ಭಾಷೆ ಪದ್ಧತಿಯಲ್ಲಿ ಪಾಠಬೋಧನೆಗಳು ಪ್ರಾರಂಭವಾಗುತ್ತಿದ್ದು ಎಲ್ಲರೂ ಅದಕ್ಕೆ ಅಣಿಯಾಗಿ ಕೆಲಸ ನಿರ್ವಹಿಸಲು ತಿಳಿಸಿದರು. ಶಾಲೆ ಮುಖಗಳು ಗುರುಗಳಾದ ಹೆಚ್ ಎಸ್ ಹಿರೇಮಠ ಮಾತನಾಡಿ, ಊರಲ್ಲಿ ಪ್ರಭಾತ್ ಪೇರಿ ಮಾಡುವ ಮೂಲಕ ಕರಪತ್ರ ನೀಡುವ ಮೂಲಕ ಬ್ಯಾನರ್‌ಗಳನ್ನ ಹಚ್ಚುವ ಮೂಲಕ ಶಿಕ್ಷಣ ಸೌಲಭ್ಯಗಳ ಬಗ್ಗೆ ಪಾಲಕರಲ್ಲಿ ಜಾಗೃತಿ ಮೂಡಿಸಿ 45 ಮಕ್ಕಳನ್ನು ದಾಖಲಾತಿ ಮಾಡಲಾಯಿತು. ಮಕ್ಕಳಿಗೆ ಸಿಹಿ ನೀಡುವ ಮೂಲಕ ಹಾಗೂ ಬಾಳೆಹಣ್ಣು, ಮೊಟ್ಟೆ ಕೊಡುವ ಮೂಲಕ ಸಾಂಕೇತಿಕವಾಗಿ ಶಾಲಾ ಪ್ರಾರಂಭೋತ್ಸವ ನಡೆಸಲಾಯಿತು. ಪ್ರಹ್ಲಾದ ಕುಲಕರ್ಣಿ ಕಾರ್ಯಕ್ರಮ ನಿರೂಪಣೆ ಮಾಡಿದರು. ಶಿಕ್ಷಕ ಜಗಪ್ಪ ವಂದಿಸಿದರು. ಶಿಕ್ಷಕರು ಹಾಗೂ ಬಿಸಿ ಊಟದ ಸಿಬ್ಬಂದಿ ಹಾಜರಿದ್ದರು.

## ಬೀದರ್ ದಕ್ಷಿಣ:ಜನರ ಕನಸುಗಳಿಗೆ ಶಾಶ್ವತ ಪರಿಹಾರ

**(ಸತೀಷ ತುಪ್ಪದ್)**

ವಿಶೇಷ ವರದಿ





ಬೀದರ, ಜೂನ್ 2:– ಸಿಂಧೋಲ ಗ್ರಾಮದ ಬಳಿ ಸುಮಾರು ರೂ.7 ಕೋಟಿ ವೆಚ್ಚದಲ್ಲಿ ನಿರ್ಮಿಸಲಾದ ಸುಸಜ್ಜಿತ ಸೇತುವೆ ಕೇವಲ ಒಂದು ಅಭಿವೃದ್ಧಿ ಕಾಮಗಾರಿಯಲ್ಲ, ಸುತ್ತಮುತ್ತಲಿನ 40ಕ್ಕೂ ಹೆಚ್ಚು ಗ್ರಾಮಗಳ ಜನರ ಬಹುಕಾಲದ ಕನಸಿನ ಸಾಕಾರವಾಗಿದೆ. ಮಳೆಗಾಲದಲ್ಲಿ ಜನರು ಅನುಭವಿಸುತ್ತಿದ್ದ ಸಂಚಾರದ ಸಂಕಷ್ಟಕ್ಕೆ ಈ ಸೇತುವೆ ಶಾಶ್ವತ ಪರಿಹಾರ ಒದಗಿಸಿದೆ ಎಂದು ಶ್ರೀ ವೀರೇಶ್ವರ ಶಿವಾಚಾರ್ಯ ಧನಾಶ್ರೀ ಅವರು ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ಸಿಂಧೋಲ ಗ್ರಾಮದ ಬಳಿ ನಿರ್ಮಿಸಲಾದ ಸೇತುವೆ ಲೋಕಾರ್ಪಣೆ ಹಿನ್ನೆಲೆ ಗ್ರಾಮಸ್ಥರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಜನರಿಂದ ಆಯೋಜಿಸಿದ್ದ ಅಭಿನಂದನಾ ಹಾಗೂ ಸನ್ಮಾನ ಸಮಾರಂಭದಲ್ಲಿ ಅವರು ಆಶೀರ್ವಚನ ನೀಡಿದರು.

ರೈತರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಈ ಸೇತುವೆ ಅತ್ಯಂತ ಉಪಯುಕ್ತವಾಗಿದೆ. ಈ ಮಹತ್ವದ ಕಾಮಗಾರಿಯನ್ನು ಪೂರ್ಣಗೊಳಿಸಿ ಜನರಿಗೆ ಸಮರ್ಪಿಸಿರುವ ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರ ಅಭಿವೃದ್ಧಿ ಪರ ಕಾಳಜಿಯನ್ನು ಅಭಿನಂದಿಸುತ್ತೇನೆ. ಮುಂದಿನ ದಿನಗಳಲ್ಲಿಯೂ ಇಂತಹ ಜನೋಪಯೋಗಿ ಯೋಜನೆಗಳು ಇನ್ನಷ್ಟು ಆಗಲಿ ಎಂದು ಆಶಿಸುತ್ತೇನೆ ಎಂದು ಹೇಳಿದರು.

“ಬೀದರ್ ದಕ್ಷಿಣ ಕ್ಷೇತ್ರದ ಸಮಗ್ರ ಅಭಿವೃದ್ಧಿಯೇ ನಮ್ಮ ಪ್ರಮುಖ ಗುರಿಯಾಗಿದೆ. ಮುಂದಿನ ದಿನಗಳಲ್ಲಿಯೂ ರಸ್ತೆ, ಸೇತುವೆ, ಕುಡಿಯುವ ನೀರು, ಶಿಕ್ಷಣ, ಆರೋಗ್ಯ ಹಾಗೂ ಇತರೆ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಿ ಜನರ ಬದುಕನ್ನು ಇನ್ನಷ್ಟು ಸುಗಮಗೊಳಿಸುವ ಕಾರ್ಯವನ್ನು ನಿರಂತರವಾಗಿ ಮುಂದುವರಿಸಲಾಗುವುದು” ಎಂದು ಭರವಸೆ ನೀಡಿದರು.

ಶ್ರೀ ಭಗವಂತಪ್ಪ ಸಿಂಧೋಲ (ರೈತ) ಮಾತನಾಡಿ, “ಮಳೆಗಾಲದಲ್ಲಿ ನಮ್ಮ ಜಮೀನುಗಳಿಗೆ ತೆರಳುವುದು ತುಂಬಾ ಕಷ್ಟವಾಗುತ್ತಿತ್ತು. ಈಗ ಸೇತುವೆ ನಿರ್ಮಾಣದಿಂದ ಕೃಷಿ ಚಟುವಟಿಕೆಗಳು ಸುಗಮವಾಗಿವೆ. ನಮ್ಮ ಬಹುಕಾಲದ ಬೇಡಿಕೆ ಈಡೇರಿದೆ. ದಶಕಗಳ ಕಾಲ ಜನರು ಎದುರಿಸುತ್ತಿದ್ದ ಸಮಸ್ಯೆಗೆ ಇಂದು ಶಾಶ್ವತ ಪರಿಹಾರ ದೊರೆತಿದೆ. ಈ ಸೇತುವೆಯಿಂದ ವಿದ್ಯಾರ್ಥಿಗಳ ಶಿಕ್ಷಣ, ರೈತರ ಕೃಷಿ ಚಟುವಟಿಕೆಗಳು ಹಾಗೂ ವ್ಯಾಪಾರ ವಹಿವಾಟುಗಳಿಗೆ ಹೆಚ್ಚಿನ ಅನುಕೂಲವಾಗಿದ್ದು, ಗ್ರಾಮೀಣ ಅಭಿವೃದ್ಧಿಗೆ ಹೊಸ ವೇಗ ಸಿಕ್ಕಿದೆ” ಎಂದು ಹೇಳಿದರು.

**“ಸಿಂಧೋಲ ಗ್ರಾಮದ ಬಳಿ ಮಳೆಗಾಲದಲ್ಲಿ ಜನರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದರು. ಇದೀಗ ಸುಮಾರು ರೂ.7 ಕೋಟಿ ವೆಚ್ಚದಲ್ಲಿ ನಿರ್ಮಿಸಲಾದ ಈ ಸೇತುವೆಯು ಸುತ್ತಮುತ್ತಲಿನ ಸುಮಾರು 40 ಗ್ರಾಮಗಳ ಜನರಿಗೆ, ರೈತರಿಗೆ ಹಾಗೂ ಶಾಲಾ–ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳಿಗೆ ಮಹತ್ತರ ಅನುಕೂಲ ಕಲ್ಪಿಸಿದೆ” ಎಂದರು “ಹಲವು ವರ್ಷಗಳ ಕಾಲ ಜನರು ಎದುರಿಸುತ್ತಿದ್ದ ಸಂಚಾರದ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಿರುವ ಈ ಸೇತುವೆ ಗ್ರಾಮೀಣ ಅಭಿವೃದ್ಧಿಯ ಮಹತ್ವದ ಹೆಜ್ಜೆಯಾಗಿದೆ. ಗ್ರಾಮಸ್ಥರು ಆತ್ಮೀಯವಾಗಿ ಅಭಿನಂದಿಸಿ ಸನ್ಮಾನಿಸಿರುವುದು ಅಪಾರ ಸಂತಸ ತಂದಿದೆ. ಜನರ ವಿಶ್ವಾಸ, ಪ್ರೀತಿ ಹಾಗೂ ಆಶೀರ್ವಾದವೇ ಇನ್ನಷ್ಟು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಪ್ರೇರಣೆಯಾಗಿದೆ” ಎಂದು ಹೇಳಿದರು.**

**–ಡಾ.ಶೈಲೇಂದ್ರ ಬೆಲ್ದಾಳೆ**
**ಬೀದರ್ ದಕ್ಷಿಣ ಕ್ಷೇತ್ರದ ಶಾಸಕರು**

ಮೋದಿನ್ (ಗ್ರಾಮದ ಮುಖಂಡ) ಮಾತನಾಡಿ, “ಸುಮಾರು 30ಕ್ಕೂ ಹೆಚ್ಚು ವರ್ಷಗಳಿಂದ ಮಳೆಗಾಲದಲ್ಲಿ ಸಂಪರ್ಕ ಕಡಿತಗೊಂಡು ಜನರು ಅನುಭವಿಸುತ್ತಿದ್ದ ಸಂಕಷ್ಟಗಳಿಗೆ ಈ ಸೇತುವೆ ಶಾಶ್ವತ ಪರಿಹಾರ ಒದಗಿಸಿದೆ. ಮಳೆಗಾಲ ಬಂದಾಗ ಗ್ರಾಮಗಳ ನಡುವಿನ ಸಂಪರ್ಕ ಸಂಪೂರ್ಣ ಕಡಿತಗೊಂಡು, ವಿದ್ಯಾರ್ಥಿಗಳು ಶಾಲಾ–ಕಾಲೇಜುಗಳಿಗೆ ತೆರಳಲು, ರೈತರು ತಮ್ಮ ಜಮೀನುಗಳಿಗೆ ಹೋಗಲು ಹಾಗೂ ಸಾರ್ವಜನಿಕರು ತುರ್ತು ಅಗತ್ಯಗಳಿಗಾಗಿ ಸಂಚರಿಸಲು ಅನೇಕ ತೊಂದರೆಗಳನ್ನು ಎದುರಿಸುತ್ತಿದ್ದರು. ಇದೀಗ ಈ ಸೇತುವೆ ನಿರ್ಮಾಣದಿಂದ ಆ ಎಲ್ಲಾ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ದೊರೆತಿದೆ” ಎಂದು ತಿಳಿಸಿದರು.

ನಾವು ಹಲವು ವರ್ಷಗಳಿಂದ ಈ ಸೇತುವೆಯ ನಿರೀಕ್ಷೆಯಲ್ಲಿದ್ದೆವು. ಮಳೆಗಾಲದಲ್ಲಿ ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿದ್ದರು. ರೈತರು ಕೃಷಿ ಚಟುವಟಿಕೆಗಳಿಗೆ ತೆರಳಲು ಪರದಾಡುತ್ತಿದ್ದರು. ಅನಾರೋಗ್ಯದ ಸಂದರ್ಭದಲ್ಲಿ ರೋಗಿಗಳನ್ನು ಆಸ್ಪತ್ರೆಗೆ ಕರೆದೊಯ್ಯುವುದೂ ಕಷ್ಟಕರವಾಗಿತ್ತು. ಇಂದು ರೂ.7 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಈ ಸೇತುವೆಯಿಂದ ಸುಮಾರು 40 ಗ್ರಾಮಗಳ ಜನರ ಬದುಕಿನಲ್ಲಿ ಮಹತ್ತರ ಬದಲಾವಣೆ ಕಂಡುಬಂದಿದೆ. ಇದು ಕೇವಲ ಸೇತುವೆಯಲ್ಲ, ನಮ್ಮ ಭಾಗದ ಅಭಿವೃದ್ಧಿಗೆ ಹೊಸ ದಾರಿಯಾಗಿದೆ. ಈ ಜನಪರ ಅಭಿವೃದ್ಧಿ ಕಾರ್ಯಕ್ಕಾಗಿ ಮಾನ್ಯ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರಿಗೆ ನಾವು ಹೃತ್ಪೂರ್ವಕ ಅಭಿನಂದನೆಗಳು ಹಾಗೂ ಕೃತಜ್ಞತೆಗಳನ್ನು ಸಲ್ಲಿಸುತ್ತೇವೆ” ಎಂದು ಹೇಳಿದರು.

ಶಿವಕುಮಾರ ಸಿಂಧೋಲ (ಮುಖಂಡ) ಮಾತನಾಡಿ, “ಸುಮಾರು 40 ಗ್ರಾಮಗಳ ಜನರ ಕನಸಾಗಿದ್ದ ಸೇತುವೆ ಇಂದು ನನಸಾಗಿದೆ. ಈ ಅಭಿವೃದ್ಧಿ ಕಾರ್ಯದಿಂದ ಜನರ ಜೀವನದಲ್ಲಿ ಮಹತ್ತರ ಬದಲಾವಣೆ ಬಂದಿದೆ. ಮಾನ್ಯ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರಿಗೆ ನಾವು ಅಭಿನಂದನೆ ಸಲ್ಲಿಸುತ್ತೇವೆ” ಎಂದರು.

ಈ ಸಂದರ್ಭದಲ್ಲಿ ಮುಖಂಡರಾದ ಗುರುನಾಥ ರಾಜಗೀರ, ರಾಜರೆಡ್ಡಿ ಶಾಬಾದ, ಪ್ರಭು ಮೆಂಗಾ, ಮಾಣಿಕಪ್ಪ ಖಾಶೆಂಪುರ, ಸುರೇಶ ಮಾಶೆಟ್ಟಿ, ಶಿವಕುಮಾರ ಸ್ವಾಮಿ, ಜಗನಾಥ್ ಪಾಟೀಲ, ಚಂದ್ರಶೇಖರ ಶೇಖಾಪುರ, ಮಲ್ಲಿಕಾರ್ಜುನ ಮುತ್ತಂಗಿ, ಚಂದ್ರಯ್ಯ ಸ್ವಾಮಿ, ಸಂಜುಕುಮಾರ ಕೋಳಿ, ಫಾಳೇಪ್ಪ ಚಟನಳ್ಳಿ, ಶಿವಶರಣಪ್ಪ ತಗಾರೆ, ಜೋಸೆಫ್ ಕೊಡ್ಡೆಕರ್, ಹೇಮಾ ತುಕ್ಕಾರೆಡ್ಡಿ, ಸಂತೋಷಿ ನಿಡವಂಚಾ, ಸಂತೋಷರೆಡ್ಡಿ ಆಣದೂರ, ಜಗನ್ನಾಥ ಜಮಾದಾರ, ಶ್ರೀನಿವಾಸ ಪೊದ್ದಾರ, ಅನೀಲಕುಮಾರ ಪನ್ನಾಳೆ, ನಾರಾಯಣರೆಡ್ಡಿ, ಗುಂಡಪ್ಪ ಬುದ–ೀರಾ, ಕಾಶಿನಾಥ ಸಿಂಧೋಲ, ಸಂಗಯ್ಯ ಸ್ವಾಮಿ, ಭಗವಂತಪ್ಪ ಸಿಂಧೋಲ, ಶಂಕರೆಪ್ಪ ಬಾಪೂರ, ರಾಮು ರಾಠೋಡ್, ಜಗನ್ನಾಥ ರಾಜಗೀರ, ಮಂಜುನಾಥ ಸುಣಗಾರ, ರಾಜಕುಮಾರ ಯಾಕತಪುರ, ಪೀರಪ್ಪ ಸೇರಿದಂತೆ ಅನೇಕ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಬೇಸಿಗೆ ಚೆಸ್ ತರಬೇತಿ ಸಮಾರೋಪ




ಮಲ್ಲಮ್ಮ ನುಡಿ ವಾರ್ತೆ

ಬೀದರ್: ಜೂ.2: ಸ್ವಾಮಿ ವಿವೇಕಾನಂದ ಚೆಸ್ ಅಕಾಡೆಮಿ ವತಿಯಿಂದ ಇಲ್ಲಿಯ ರಾಮಕೃಷ್ಣ ವಿವೇಕಾನಂದ ಆಶ್ರಮದಲ್ಲಿ 7 ರಿಂದ 17 ವರ್ಷದ ಒಳಗಿನ ಮಕ್ಕಳಿಗೆ ಹಮ್ಮಿಕೊಂಡಿದ್ದ ಹತ್ತು ದಿನಗಳ ಬೇಸಿಗೆ ಚೆಸ್ ತರಬೇತಿ ಭಾನುವಾರ ಸಮಾರೋಪಗೊಂಡಿತು.

ಜಿಲ್ಲೆಯ 60 ಮಕ್ಕಳು ತರಬೇತಿಯಲ್ಲಿ ಉತ್ಸಾಹದಿಂದ ಪಾಲ್ಗೊಂಡರು. ಶಿವಮೊಗ್ಗದ ಅಂತರರಾಷ್ಟ್ರೀಯ ಚೆಸ್ ತೀರ್ಪುಗಾರ ಪ್ರಾಣೇಶ್ ಯಾದವ್ ತರಬೇತಿ ನೀಡಿದರು. ಶರಣಪ್ಪ ಚಿಟಗುಪ್ಪ ಸಹಾಯಕ ತರಬೇತುದಾರರಾಗಿ ಕಾರ್ಯ ನಿರ್ವಹಿಸಿದರು.

ತರಬೇತಿ ಬಳಿಕ ಮಕ್ಕಳಿಗೆ ಮೂರು ವಿಭಾಗದಲ್ಲಿ ಸ್ಪರ್ಧೆ ಏರ್ಪಡಿಸಿ ಸಮಾರೋಪ ಸಮಾರಂಭದಲ್ಲಿ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

8 ವರ್ಷದ ಒಳಗಿನ ಬಾಲಕರ ವಿಭಾಗದಲ್ಲಿ ಸತ್ಯಜೀತ್ ಶಾಹೂ (ಪ್ರಥಮ), ಶ್ರೀಹಾನ್ (ದ್ವಿತೀಯ), ಶರಣ್ ಇಟಗಿ (ತೃತೀಯ), ಬಾಲಕಿಯರ ವಿಭಾಗದಲ್ಲಿ ಶಿವಾಂಗಿ (ಪ್ರಥಮ), ಆರಾಧನಾ ಆರ್. ಪಾಟೀಲ (ದ್ವಿತೀಯ), 10 ವರ್ಷದ ಒಳಗಿನ ಬಾಲಕರ ವಿಭಾಗದ ಶ್ರೀಯಾನ್ ಬಿರಾದಾರ (ಪ್ರಥಮ), ಪರ್ಥ್ (ದ್ವಿತೀಯ), ವೇದಾಂಶ್ (ತೃತೀಯ), ಬಾಲಕಿಯರ ವಿಭಾಗದಲ್ಲಿ ಶಾನ್ವಿ (ಪ್ರಥಮ), ಶಿವಾನಿ ಗುಪ್ತಾ (ದ್ವಿತೀಯ), 11 ರಿಂದ 17 ವರ್ಷದ ಒಳಗಿನ ಬಾಲಕರ ವಿಭಾಗದಲ್ಲಿ ವಿಹಾನ್ (ಪ್ರಥಮ), ಸನ್ನಿಹಿತ್ (ದ್ವಿತೀಯ), ಕೃಷ್ಣ (ತೃತೀಯ), ಬಾಲಕಿಯರ ವಿಭಾಗದ ಆರುಷಿ (ಪ್ರಥಮ) ಹಾಗೂ ಸಂಕಲ್ಪ (ದ್ವಿತೀಯ) ಸ್ಥಾನ ಗಳಿಸಿದರು.

ರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷ ಜ್ಯೋತಿರ್ಮಯಾನಂದ ಸ್ವಾಮೀಜಿ ಹಾಗೂ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ ವಿಜೇತರಿಗೆ ಬಹುಮಾನ ವಿತರಿಸಿದರು.

ಸ್ವಾಮಿ ವಿವೇಕಾನಂದ ಚೆಸ್ ಅಕಾಡೆಮಿಯ ಉಸ್ತುವಾರಿಯೂ ಆದ ಬೀದರ್ ಚೆಸ್ ಅಕಾಡೆಮಿ ಅಧ್ಯಕ್ಷ ನಿತಿನ್ ಕರ್ಪೂರ ತರಬೇತಿ ಹಾಗೂ ಸ್ಪರ್ಧೆಗಳನ್ನು ಅಚ್ಚುಕಟ್ಟಾಗಿ ಸಂಘಟಿಸಿದ್ದರು. ನರ್ಚರ್ ಶಾಲೆಯ ಅಧ್ಯಕ್ಷ ದತ್ತಾ ಮುಳೆ, ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿ ಪ್ರಭು ತಟ್ಟಪಟಿ, ಬೀದರ್ ಚೆಸ್ ಅಕಾಡೆಮಿಯ ಕಾರ್ಯದರ್ಶಿ ಸತೀಶ್ ಸ್ವಾಮಿ, ಜಂಟಿ ಕಾರ್ಯದರ್ಶಿ ವಿಕ್ರಮ ತಗಾರೆ, ಸದಸ್ಯ ಸುರೇಶ ಸ್ವಾಮಿ, ಡಾ. ನಿತೇಶಕುಮಾರ ಬಿರಾದಾರ ಮತ್ತಿತರರು ಇದ್ದರು.

## ಮುಂಗಾರು ಹಂಗಾಮಿಗೆ ಅಗತ್ಯವಿರುವಷ್ಟು ಬಿತ್ತನೆ ಬೀಜ ಲಭ್ಯ:ರೈತರು ಆತಂಕ ಪಡುವ ಅಗತ್ಯವಿಲ್ಲ : ಶಾಸಕ ಈಶ್ವರ ಖಂಡ್ರೆ



ಭಾಲ್ಕಿ: ಜೂ.2: ತಾಲ್ಲೂಕಿನ ರೈತರಿಗೆ ಮುಂಗಾರು ಹಂಗಾಮಿಗೆ ಅಗತ್ಯವಿರುವಷ್ಟು ಬಿತ್ತನೆ ಬೀಜಗಳು ಲಭ್ಯವಿದ್ದು, ರೈತರು ಆತಂಕ ಪಡುವ ಅಗತ್ಯವಿಲ್ಲ ಎಂದು ಶಾಸಕ ಈಶ್ವರ ಖಂಡ್ರೆ ತಿಳಿಸಿದ್ದಾರೆ. ತಾಲ್ಲೂಕಿನ ವಿವಿಧ ಕೃಷಿ ಕೇಂದ್ರಗಳ ಮೂಲಕ ರೈತರಿಗೆ ಬಿತ್ತನೆ ಬೀಜಗಳ ವಿತರಣೆಯನ್ನು ಈಗಾಗಲೇ ಆರಂಭಿಸಲಾಗಿದ್ದು, ಕೃಷಿ ಚಟುವಟಿಕೆಗಳಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಪ್ರಮಾಣದ ಬೀಜಗಳ ಸಂಗ್ರಹವನ್ನು ಮಾಡಲಾಗಿದೆ.

ರೈತರಿಗೆ ಸಮಯಕ್ಕೆ ಸರಿಯಾಗಿ ಗುಣಮಟ್ಟದ ಬೀಜಗಳು ದೊರೆಯುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಬಿತ್ತನೆ ಅವಧಿಯಲ್ಲಿ ಬೀಜಗಳ ಕೊರತೆ ಉಂಟಾಗದಂತೆ ನಿರಂತರವಾಗಿ ಮೇಲ್ವಿಚಾರಣೆ ವಹಿಸಲಾಗುತ್ತಿದೆ. ರೈತರು ಸರ್ಕಾರದ ಮಾನ್ಯತೆ ಪಡೆದ ಕೇಂದ್ರಗಳಿಂದಲೇ ಬೀಜಗಳನ್ನು ಪಡೆದು ಮುಂಗಾರು ಕೃಷಿ ಚಟುವಟಿಕೆಗಳನ್ನು ಆರಂಭಿಸಬೇಕು ಎಂದು ಅವರು ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ.

ಭಾಲ್ಕಿ ತಾಲ್ಲೂಕಿನ ರೈತರ ಹಿತಾಸಕ್ತಿಗೆ ರಾಜ್ಯ ಸರ್ಕಾರ ಹಾಗೂ ಸ್ಥಳೀಯ ಆಡಳಿತ ಬದ್ಧವಾಗಿದ್ದು, ಕೃಷಿಗೆ ಅಗತ್ಯವಿರುವ ಎಲ್ಲ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಶಾಸಕ ಶ್ರೀ ಈಶ್ವರ ಖಂಡ್ರೆ ತಿಳಿಸಿದ್ದಾರೆ.

## ಅಧಿಕಾರಿಗಳಿಂದ ಕೃಷಿ ಪರಿಕರಗಳ ಪರಿಶೀಲನೆ




ಮಲ್ಲಮ್ಮ ನುಡಿ ವಾರ್ತೆ

ಮುದಗಲ್ : ಪಟ್ಟಣದ ಬದ್ರಿನಾಥ್ ಟ್ರೇಡರ್ಸ್ ಕಷಿ ಪರಿಕರ ಮಾರಾಟ ಮಳಿಗೆಗೆ ಭೇಟಿ ನೀಡಿದ್ದ ತಾಲೂಕ ಅಧಿಕಾರಿ ಎಡಿಎ ವಿಜಯಮೂರ್ತಿ ನೇತತ್ವದ ತಂಡ ಪರಿಕರಗಳ ತಪಾಸಣೆಗೆ ಮಾಡಿದರು.

ಕಷಿ ಪರಿಕರ ಮಳಿಗೆಯಲ್ಲಿ ಮಾರಾಟ ಮಾಡುವಂತಹ ರಸಗೊಬ್ಬರ, ಕೀಟನಾಶಕ, ಬಿತ್ತನೆಬೀಜಗಳ ಧರಪಟ್ಟಿ, ಸಂಬಂಧಪಟ್ಟ ಸರಬರಾಜುದಾರರ ಸಂಸ್ಥೆ ನೀಡಿರುವ ಪ್ರಮಾಣ ಪತ್ರದಲ್ಲಿರುವ ಪರಿಕರಗಳನ್ನು ಹಾಗೂ ಅಂಗಡಿ ಪರವಾನಿಗೆ, ಅವಧಿ ಮೀರಿದ ಕೀಟನಾಶಕ, ಬಿತ್ತನೆ ಬೀಜಗಳನ್ನು ದಾಸ್ತಾನು ಮಾಡಿರುವ ವಿವರಗಳನ್ನು ಪರಿಶೀಲಿಸಿದರು. ಅಧಿನಿಯಮ ಉಲಂಗಿಸಿದ ಪರಿಣಾಮ ಮಾಲೀಕರಿಗೆ ಶೋ ಕಾರ್ಡ್ ನೋಟೀಸ್ ನೀಡಲಾಯಿತು.

ಕೃಷಿಅಧಿಕಾರಿ ಶ್ರೀಶೈಲಬೋವಿ, ತಾಂತ್ರಿಕ ಅಧಿಕಾರಿ ಅಮರೇಗೌಡ ಸೇರಿದಂತೆ ರೈತರು ಉಪಸ್ಥಿತರಿದ್ದರು.

## ಸಸಿ ನೆಡುವಿಕೆ, ಪ್ರಬಂಧ ಹಾಗೂ ರಸಪ್ರಶ್ನೆ ಸ್ಪರ್ಧೆ ಆಯೋಜನೆ: ಮಲ್ಲಿಕಾರ್ಜುನ ಮೇಟಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜೂ.2: ಬಿಸಿಲಿನ ನಾಡು ಎಂದೇ ಖ್ಯಾತಿ ಪಡೆದಿರುವ ಈ ಭಾಗದ ವಿದ್ಯಾರ್ಥಿಗಳಲ್ಲಿ ಪರಿಸರ ಸಂರಕ್ಷಣೆ ಕುರಿತು ಅರಿವು ಮತ್ತು ಜಾಗೃತಿ ಮೂಡಿಸುವ ಉದ್ದೇಶದಿಂದ ಜೂನ್ 5ರಂದು ನಡೆಯಲಿರುವ ವಿಶ್ವಪರಿಸರ ದಿನಾಚರಣೆ ಅಂಗವಾಗಿ ಡಿಡಿಯು ಸಮೂಹ ಶಿಕ್ಷಣ ಸಂಸ್ಥೆಗಳ ವತಿಯಿಂದ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ ಎಂದು ಸಂಸ್ಥೆಯ ಆಡಳಿತಾಧಿಕಾರಿ ಮಲ್ಲಿಕಾರ್ಜುನ ಮೇಟಿ ತಿಳಿಸಿದ್ದಾರೆ. ನಗರದ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯಾದಗಿರಿ, ಶಹಾಪುರ, ಕಲಬುರಗಿ, ದೋರನಹಳ್ಳಿ, ವಡಗೇರಾ ಹಾಗೂ ಸೈದಾಪುರದಲ್ಲಿರುವ ಡಿಡಿಯು ಶಾಲೆಗಳಲ್ಲಿ ಪ್ರಬಂಧ ಸ್ಪರ್ಧೆ, ರಸಪ್ರಶ್ನೆ ಸ್ಪರ್ಧೆ ಹಾಗೂ ಅತಿ ಹೆಚ್ಚು ಸಸಿಗಳನ್ನು ನೆಡುವ ವಿಶೇಷ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

## ಖಾಶೆಂಪೂರ ಗ್ರಾಮದಲ್ಲಿ ಉದ್ಯೋಗ ಖಾತ್ರಿ ಯೋಜನೆ ಜಾರಿಗೊಳಿಸುವಂತೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಜೂ.2: ಬೀದರ ತಾಲೂಕಿನ ಕಾಡವಾದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಖಾಶೆಂಪೂರ (ಪಿ) ಗ್ರಾಮದಲ್ಲಿ (VB -G RAMG) ವಿಕಾಸಿತ್ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) ಯೋಜನೆಯನ್ನು ತಕ್ಷಣ ಪುನರಾರಂಭಿಸಿ ಕೂಲಿ ಕಾರ್ಮಿಕರಿಗೆ ಉದ್ಯೋಗ ಕಲ್ಪಿಸಬೇಕು ಎಂದು ಇಂಡಿಯನ್ ನ್ಯಾಷನಲ್ ಭೀಮ್ ಆರ್ಮಿಯ ಸಂಸ್ಥಾಪಕ ರಾಜ್ಯಾಧ್ಯಕ್ಷ ದಿಲೀಪಕುಮಾರ ವರ್ಮಾ ಅವರು ಒತ್ತಾಯಿಸಿದ್ದಾರೆ.

ಈ ಕುರಿತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸಿದ ಮನವಿಯಲ್ಲಿ, ಕಳೆದ ಒಂದು ವರ್ಷದಿಂದ ಖಾಶೆಂಪೂರ ಗ್ರಾಮದಲ್ಲಿ ಯೋಜನೆ ಸ್ಥಗಿತಗೊಂಡಿರುವುದರಿಂದ ನೂರಾರು ಕೂಲಿ ಕಾರ್ಮಿಕರು ಉದ್ಯೋಗವಿಲ್ಲದೆ ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಆರೋಪಿಸಲಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗ ಖಾತ್ರಿ ಯೋಜನೆಯಡಿ ಸರ್ಕಾರ 100 ದಿನಗಳಿಂದ 125 ದಿನಗಳವರೆಗೆ ಉದ್ಯೋಗಾವಕಾಶವನ್ನು ವಿಸ್ತರಿಸಿದ್ದರೂ, ಸ್ಥಳೀಯ ಅಧಿಕಾರಿಗಳು ನಿಯಮಗಳನ್ನು ಸಮರ್ಪಕವಾಗಿ ಜಾರಿಗೊಳಿಸುತ್ತಿಲ್ಲ ಎಂದು ಸಂಘಟನೆ ದೂರಿದೆ. ಕಾರ್ಮಿಕರು ಕೆಲಸಕ್ಕಾಗಿ ಅರ್ಜಿ ಸಲ್ಲಿಸಿದ 15 ದಿನಗಳೊಳಗೆ ಉದ್ಯೋಗ ನೀಡದಿದ್ದರೆ ನಿರುದ್ಯೋಗ ಭತ್ಯೆ ನೀಡಬೇಕೆಂಬ ನಿಯಮವಿದ್ದರೂ, ಕಳೆದ ಒಂದು ವರ್ಷದಿಂದ ಯಾವುದೇ ಭತ್ಯೆ ನೀಡದೇ ಕಾರ್ಮಿಕರ ಹಕ್ಕುಗಳನ್ನು ನಿರ್ಲಕ್ಷಿಸಲಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

## ತಮ್ಮ ನಿವೃತ್ತಿ ಜೀವನ ಸುಖಕರವಾಗಿರಲಿ

ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್:ಜೂ.2:ತಮ್ಮ ವೃತ್ತಿಯನ್ನು ಯಶಸ್ವಿಯಾಗಿ ನಿಭಾಯಿಸಿ ಕಾಯಕದಲ್ಲಿಯೇ ಕೈಲಾಸ ಕಂಡವರು ಎಂದು ಕಾರ್ಯನಿರ್ವಾಹಕ ಅಧಿಕಾರಿಗಳಾದ ಅಂಬರೀಶ್ ಪಾಟೀಲ್ ಅವರು ನುಡಿದರು.



ಗುರುಮಠಕಲ್ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ಬೀಳ್ಕೊಡುಗೆ ಸಮಾರಂಭ ಉದ್ದೇಶ ಅವರು ಮಾತನಾಡಿದರು.

ಗುರುಮಠಕಲ್ ತಾಲೂಕು ಗ್ರೇಡ್ 2 ಕಾರ್ಯದರ್ಶಿ ಸೂರ್ಯಕಾಂತ್ ಮತ್ತು ಗ್ರೇಡ್ 2 ಕಾರ್ಯದರ್ಶಿ ಮಲ್ಲರೆಡ್ಡಿ ಅವರಿಗೆ ಶಾಲು ಹೊದಿಸಿ ಫಲಪುಷ್ಪ ಕೊಟ್ಟು ಹೃದಯಪೂರ್ವಕವಾಗಿ ಬೀಳ್ಕೊಡಲಾಯಿತು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಹಲವು ವರ್ಷಗಳಿಂದ ಗುರುಮಠಕಲ ತಾಲೂಕಿನ ಪಂಚಾಯಿತಿಗಳಲ್ಲಿ ಪ್ರಭಾರಿ ಪಿಡಿಓಗಳಾಗಿ, ಕಾರ್ಯದರ್ಶಿಗಳಾಗಿ ಅಪಾರ ಸೇವೆ ಸಲ್ಲಿಸಿದ್ದಾರೆ. ತಮ್ಮ ಸಲಹೆಗೆ ತಾಲೂಕು ಪಂಚಾಯಿತಿ ಸದಾ ಆಹ್ವಾನಿಸುತ್ತದೆ. ತಾವುಗಳು ಯಾವಾಗ ಬೇಕಾದರೂ ತಾಲೂಕು ಪಂಚಾಯಿತಿಗೆ ಭೇಟಿ ನೀಡಬಹುದು ಎಂದರು.

ಈ ಸಂದರ್ಭದಲ್ಲಿ ವೇದಿಕೆ ಮೇಲೆ ಇದ್ದ ಗಣ್ಯರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ಆತ್ಮೀಯರು ತಮ್ಮ ಅನಿಸಿಕೆ ತಿಳಿಸಿದರು.

ಈ ವೇಳೆ ತಾ.ಪಂ. ಯೋಜನಾಧಿಕಾರಿ ಶ್ರೀಮತಿ ಭಾರತಿ ಸಜ್ಜನ್, ತಾ.ಪಂ. ಸಹಾಯಕ ನಿರ್ದೇಶಕ (ಉ.ಖ.) ರಾಮಚಂದ್ರ ಬಸೂದೆ, ತಾ.ಪಂ. ಸಹಾಯಕ ನಿರ್ದೇಶಕ ( ಪಂ.ರಾ.) ಮಲ್ಲಿಕಾರ್ಜುನ್ ಸಂಗ್ವಾರ್ ಹಾಗೂ ಗಣ್ಯಮಾನ್ಯರು, ಸೇರಿದಂತೆ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಮತ್ತು ಸಿಬ್ಬಂದಿ ವರ್ಗದವರು ಹಾಜರಿದ್ದರು.

## ನಮೋ ನಮಃ ಸಾಮಾನ್ಯ ಕಾರ್ಯಕರ್ತರಿಗೇ ಮನ್ನಣೆ

## ನವ ಭಾರತದ ಈ ಬದಲಾವಣೆಯ ಪಯಣ ಕರ್ನಾಟಕದಲ್ಲೂ ಮುಂದುವರಿಯಲಿ; ಸಿ. ಮಲ್ಲು ಕೋಲಿವಾಡ.

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಒಂದು ಕಾಲದಲ್ಲಿ ಮನೆಮನೆಗಳಲ್ಲಿ ದುಡಿದು ಬದುಕು ಸಾಗಿಸುತ್ತಿದ್ದ ಸಾಮಾನ್ಯ ಮಹಿಳೆ, ಇಂದು ಶಾಸಕಿಯಾಗಿ ಮತ್ತು ರಾಜ್ಯದ ಸಚಿವೆಯಾಗಿ ಅಧಿಕಾರ ಸ್ವೀಕರಿಸಿದ್ದಾರೆ. 2021ರಲ್ಲಿ ಬಂಗಾಳದ ಅಸುಗ್ರಾಮ ಕ್ಷೇತ್ರದಿಂದ ಸ್ಪರ್ಧಿಸಿ ಸೋಲಿನ ನಂತರವೂ ಎದೆಗುಂದದೆ ಹೋರಾಡಿದ ಈಕೆ, 2026ರಲ್ಲಿ ಭರ್ಜರಿ ಜಯ ಸಾಧಿಸುವ ಮೂಲಕ ಬಿಜೆಪಿ ಸಿದ್ಧಾಂತದ ಶಕ್ತಿಯನ್ನು ಸಾಬೀತುಪಡಿಸಿದ್ದಾರೆ.



ಬಿಜೆಪಿ ಪಕ್ಷವು ವಂಶಪಾರಂಪರ್ಯ ರಾಜಕಾರಣಕ್ಕೆ ಸೀಮಿತವಾಗದೆ, ತಳಮಟ್ಟದ ಕಾರ್ಯಕರ್ತರ ಪ್ರತಿಭೆಯನ್ನು ಗುರುತಿಸುವ ವಿಶಿಷ್ಟ ಸಂಸ್ಕೃತಿಯನ್ನು ಹೊಂದಿದೆ. ಇಲ್ಲಿ ಬಡತನ ಅಥವಾ ಹಿನ್ನೆಲೆ ಅಡ್ಡಿಯಾಗುವುದಿಲ್ಲ ಬದಲಾಗಿ, 'ರಾಷ್ಟ್ರ ಸೇವೆ' ಮತ್ತು 'ನಿಷ್ಠೆ' ಮಾತ್ರವೇ ಅರ್ಹತೆಯ ಮಾನದಂಡಗಳಾಗುತ್ತವೆ, ಸಾಮಾನ್ಯ ಕಾರ್ಯಕರ್ತರಿಗೆ ಉನ್ನತ ಸ್ಥಾನಮಾನಗಳನ್ನು ನೀಡುವ ಮೂಲಕ ನಿಜವಾದ ಪ್ರಜಾಪ್ರಭುತ್ವವನ್ನು ಸಾಬೀತುಪಡಿಸಿದೆ.

ಬಿಜೆಪಿ ವಿಭಿನ್ನವಾದ ಪಕ್ಷ (ಕಚಿಡಿಣಥಿ ತಿಣು ಚಿ ಜುಜಿಜಿಜಡಿಜಟಿಛಿಜ – ಪಾರ್ಟಿ ವಿತ್ ಡಿಫರೆನ್ಸ್) ಮೋದಿಜಿ ಮತ್ತು ಅಮಿತ್ ಶಾ ಜಿ ಮತ್ತು ನಿತಿನ್ ನಬಿನ್ ಜೀ ಅವರ ನೇತೃತ್ವದಲ್ಲಿ 'ಕುಟುಂಬದ ಹಿನ್ನೆಲೆಗಿಂತ ಪಕ್ಷದ ಕೆಲಸ', 'ಸಾಮಾಜಿಕ ಸೇವೆ' ಮತ್ತು 'ಸಾರ್ವಜನಿಕ ನಂಬಿಕೆ'ಗೆ, ಹೆಚ್ಚಿನ ಆದ್ಯತೆ ನೀಡಲಾಗುತ್ತದೆ. ಇದರಿಂದಾಗಿ, ಯಾವುದೇ ರಾಜಕೀಯ ರಕ್ತಸಂಬಂಧವಿಲ್ಲದಿದ್ದರೂ, ಶ್ರಮಜೀವಿಗಳಿಗೆ ರಾಷ್ಟ್ರ ಮಟ್ಟದಲ್ಲಿ ಅವಕಾಶ ಸಿಗುತ್ತಿದೆ. ಮೋದಿಯವರ ದೂರದೃಷ್ಟಿಯ 'ಸಬ್ ಕಾ ಸಾಥ್, ಸಬ್ ಕಾ ವಿಕಾಸ್' ಮಂತ್ರಕ್ಕೆ ಇಂದು ದೊಡ್ಡ ಜಯ ಸಿಕ್ಕಿದೆ. ಮಹಿಳಾ ಸಬಲೀಕರಣವು ಕೇವಲ ಘೋಷಣೆಗಳಿಗೆ ಸೀಮಿತವಾಗದೆ, ಅಧಿಕಾರದ ಚುಕ್ಕಾಣಿಯನ್ನು ಮಹಿಳೆಯರ ಕೈಗೆ ನೀಡುವ ಮೂಲಕ, ಬಿಜೆಪಿ ಅವರ ಪಾಲಿನ ನಿಜವಾದ ಉತ್ತೇಜಕವಾಗಿ ಹೊರಹೊಮ್ಮಿದೆ.

ಗೌರವಾನ್ವಿತ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಜಿಯವರ 'ನವ ಭಾರತ'ದ ಭವ್ಯ ಸಂಕಲ್ಪ ದೇಶಾದ್ಯಂತ ಹೊಸ ಕ್ರಾಂತಿಯನ್ನು ಸೃಷ್ಟಿಸುತ್ತಿದೆ. ಅವರ ಈ ನವ ಭಾರತದ ಸಂಕಲ್ಪ ಇನ್ನಷ್ಟು ವ್ಯಾಪಕವಾಗಲು, ಮುಂದಿನ ದಿನಗಳಲ್ಲಿ ಕರ್ನಾಟಕದಲ್ಲಿಯೂ ಶ್ರೀ ವಿಜಯೇಂದ್ರ ಯಡಿಯೂರಪ್ಪ ಅಣ್ಣಾಜೀ ಅವರ ನೇತೃತ್ವದಲ್ಲಿ ಸಾಮಾನ್ಯ ಕಾರ್ಯಕರ್ತರಿಗೇ ಮನ್ನಣೆ ನೀಡುವ ಮೂಲಕ ನವ ಭಾರತದ ಈ ಬದಲಾವಣೆಯ ಪಯಣದಲ್ಲಿ ಕರ್ನಾಟಕ ಹೊಸ ಇತಿಹಾಸ ಬರೆಯಲಿ.

## ಸಚಿವ ಲಾಡಗೆ ಉಪಮುಖ್ಯಮಂತ್ರಿ ಸ್ಥಾನ ನೀಡಲು ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಕಲಘಟಗಿ ನಿರಂತರ ಜನ ಸೇವೆಯಲ್ಲಿ ತೊಡಗಿ ರಾಜ್ಯದ ಜನತೆಗೆ ಹಗಲಿರಳು ಸೇವೆ ಸಲ್ಲಿಸುತ್ತಿರುವ ಸಚಿವ ಸಂತೋಷ ಲಾಡಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ಬ್ಲಾಕ ಕಾಂಗ್ರೆಸ ಅಧ್ಯಕ್ಷ ಮಂಜುನಾಥಗೌಡ ಮುರಳ್ಳಿ ಹೇಳಿದರು.



ಅವರು ಪಟ್ಟಣದ ಕಾಂಗ್ರೆಸ ಪಕ್ಷದ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕಲಘಟಗಿ ತಾಲೂಕು ನಂಜುಡಸ್ವಾಮಿ ವರದಿಯಲ್ಲಿ ಹಿಂದುಳಿದ ತಾಲೂಕು ಎಂದು ಪರಿಗಣಿಸಿದ್ದನ್ನು ನಿರಂತರ ಅಭಿವೃದ್ಧಿ ಮೂಲಕ ಪ್ರಗತಿಯ ಹಾದಿಯಲ್ಲಿ ತಂದು ನಿಲ್ಲಿಸಿದ್ದಾರೆ ಎಂದರು.

ಮುಖಂಡ ಎಸ್.ವಿ ತಡಸಮಠ ಮಾತನಾಡಿ ಸಂತೋಷ ಲಾಡರವರು ಉಪಮುಖ್ಯ ಮಂತ್ರಿಸ್ಥಾನಕ್ಕೆ ಸೂಕ್ತವ್ಯಕ್ತಿಯಾಗಿದ್ದು ಕಾರ್ಮಿಕ ಇಲಾಖೆಯನ್ನು ಕೂಡ ಸೂಕ್ತವಾಗಿ ನಿರ್ವಹಿಸಿದ್ದಾರೆ ಎಂದರು.

ಇ ಸಂಧರ್ಬದಲ್ಲಿ ಬಾಬು ಅಂಚಟಗೇರಿ, ಬಸವರಾಜ ಬಾವಕರ, ',ನಿಂಗಪ್ಪ ಬೆಳ್ಳಿವಾಲೆ, ಬಸವರಾಜ ದಾಸನಕೊಪ್ಪ, ವೃಷ್ಬೇಂದ್ರ ಪಟ್ಟಣಶೆಟ್ಟಿ, ಶಾಂತಲಿಂಗ ಬೆರಡುಗಿ, ಗುರು ಕಂಪ್ಲಿ, ಸಿದ್ದು ತಲೆಬಾಗಿಲು ಹನಮಂತ ಕಾಳೆ ಶಿವಪುತ್ರಪ್ಪ ಆಲದಕಟ್ಟಿ ಕುಮಾರ ಖಂಡೆಕರ, ವಿಜಯ ಮುರಾರಿ, ಹನಮಂತ ಚವರಗುಡ್ಡ, ಮಂಜುನಾಥ ಧನಿಗೊಂಡ, ಶಿವಲಿಂಗಪ್ಪ ಮೂಗಣ್ಣವರ, ಪ್ರಭುರಾಮನಾಳ, ಗಣೇಶ ಕೋಳೇಣವರ, ಲಕ್ಷ್ಮಣ ಲವಾಣಿ, ಚನ್ನಬಸಯ್ಯ ಹೆಬ್ಬಳ್ಳಿಮಠ, ಸಾಯಿನಾಥ ಯಲ್ಲಾಪೂರಕರ, ಗುರುಪಾದ ಉಳ್ಳಾಗಡ್ಡಿ, ಪ್ರಬಂರಘುನ ಹುಲ್ಲಿಕಟ್ಟಿ, ಅರ್ಜುನ ಅಂಗಡಿ, ಕುಬೇರ ಲಮಾಣಿ, ಶಕುಂತಲಾ ಬೋಳಾರ, ಮಾಲಾ ತುರಿಹಾಳ, ಮಂಜುಳಾ ದೇವಲಾಪುರ, ಸೋಮಣ್ಣ ಬೆನ್ನೂರ, ಬಾಳು ಖಾನಪೂರ ರಫೀಕ ಸುಕಂದ ಇದ್ದರು.

## ಚಿನ್ನ- ಬೆಳ್ಳಿ ದರ ಏರಿಕೆ

ನವದೆಹಲಿ,ಜೂ.2–ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಉದ್ವಿಗ್ನತೆಯ ನಡುವೆ, ಭಾರತೀಯ ಬುಲಿಯನ್ ಮಾರುಕಟ್ಟೆಯಲ್ಲಿ ಇಂದು ಭಾರಿ ಏರಿಕೆ ಕಂಡುಬಂದಿದೆ. ಜೂನ್ 2 ರಂದು, ಚಿನ್ನ ಮತ್ತು ಬೆಳ್ಳಿಯ ಬೆಲೆಗಳು ಮತ್ತೊಮ್ಮೆ ಏರಿಕೆಯಾದವು. ಚಿನ್ನದ ಬೆಲೆ 1220 ರೂ. ಜಿಗಿತದೊಂದಿಗೆ ವಹಿವಾಟು ನಡೆಯುತ್ತಿದೆ. ಆದರೆ ಬೆಳ್ಳಿಯ ಬೆಲೆ 4270 ರೂ. ಜಿಗಿತವನ್ನು ದಾಖಲಿಸಿದೆ. ಅದರ ನಂತರ, 22 ಕ್ಯಾರೆಟ್ ಚಿನ್ನದ ಬೆಲೆ 10 ಗ್ರಾಂಗೆ 147,043 ರೂ. ತಲುಪಿದೆ. 24 ಕ್ಯಾರೆಟ್ ಚಿನ್ನದ ಬೆಲೆ 10 ಗ್ರಾಂಗೆ 160,410 ರೂ. ತಲುಪಿದೆ. ಆದರೆ ಬೆಳ್ಳಿಯ ಬೆಲೆ ಕೆಜಿಗೆ 271,660 ರೂ.ಗೆ ಏರಿಕೆ–ಯಾಗಿದೆ. ಮಲ್ಟಿ ಕಮಾಡಿಟಿ ಎಕ್ಸೇಂಜ್ ಮತ್ತು ಯುಎಸ್ ಕಾಮೆಕ್ಸ್ ಮಾರುಕಟ್ಟೆಯಲ್ಲಿ ಇಂದು ಚಿನ್ನ ಮತ್ತು ಬೆಳ್ಳಿ ಬೆಲೆಗಳು ತೀವ್ರ ಏರಿಕೆಯನ್ನು ಕಾಣುತ್ತಿವೆ. ಪ್ರಸ್ತುತ, ಮಲ್ಟಿ ಕಮಾಡಿಟಿ ಎಕ್ಷೇಂಜ್ ನಲ್ಲಿ ಚಿನ್ನದ ಬೆಲೆ 10 ಗ್ರಾಂಗೆ 160,511 ರೂ.ಗಳಲ್ಲಿ ವಹಿವಾಟು ನಡೆಸುತ್ತಿದ್ದು, ಶೇ. 0.80 ಅಥವಾ 1270 ರೂ.ಗಳಲ್ಲಿ ವಹಿವಾಟು ನಡೆಸುತ್ತಿದೆ. ಬೆಳ್ಳಿ ಬೆಲೆ ಶೇ. 1.63 ಅಥವಾ 4342 ರೂ. ಗಳಲ್ಲಿ ಏರಿಕೆಯಾಗಿ ಪ್ರತಿ ಕಿಲೋಗ್ರಾಂಗೆ 270,505 ರೂ. ಗಳಲ್ಲಿ ವಹಿವಾಟು ನಡೆಸುತ್ತಿದೆ. ಯುಎಸ್ ಕಾಮೆಕ್ಸ್‌ನಲ್ಲಿ ಚಿನ್ನ ಔನ್ಸ್‌ಗೆ $4563.10 ರಂತೆ ವಹಿವಾಟು ನಡೆಸುತ್ತಿದೆ, ಶೇ. 1.26 ಅಥವಾ 56.80 ಡಾಲರ್‌ಗಳಲ್ಲಿ ವಹಿವಾಟು ನಡೆಸುತ್ತಿದೆ. ಬೆಳ್ಳಿ ಬೆಲೆ ಶೇ. 2.34 ಅಥವಾ 1.76 ಡಾಲರ್‌ಗಳಲ್ಲಿ ಏರಿಕೆಯಾಗಿ ಪ್ರತಿ ಔನ್ಸ್‌ಗೆ $77.02 ತಲುಪಿದೆ.

## ಹೂ ಮಳೆ ಸುರಿಸಿ ವಿದ್ಯಾರ್ಥಿಗಳಿಗೆ ಸ್ವಾಗತ



ಮಲ್ಲಮ್ಮ ನುಡಿ ವಾರ್ತೆ

ಬೀದರ್: ಜೂ.2:ಶಾಲಾ ಆರಂಭೋತ್ಸವ ದಿನವಾದ ಸೋಮವಾರ ಇಲ್ಲಿಯ ಅರುಣೋದಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳನ್ನು ಹೂ ಮಳೆ ಸುರಿಸಿ ಸ್ವಾಗತಿಸಿ ಬರಮಾಡಿಕೊಳ್ಳಲಾಯಿತು.

ವಿದ್ಯಾರ್ಥಿಗಳು ಶಾಲೆಯ ಪ್ರವೇಶ ದ್ವಾರಕ್ಕೆ ಬರುತ್ತಲೇ ಗಣ್ಯರು, ಶಿಕ್ಷಕರು ಹಾಗೂ ಸಿಬ್ಬಂದಿ ವಿದ್ಯಾರ್ಥಿಗಳ ಮೇಲೆ ಪುಷ್ಪ ವೃಷ್ಟಿ ಮಾಡಿದರು. ಶಿಕ್ಷಕಿಯರು ಆರತಿ ಬೆಳಗಿದರು.

ಸಾಮೂಹಿಕ ಸರಸ್ವತಿ ಮಂತ್ರ ಪಠಣದ ನಂತರ ವಿದ್ಯಾರ್ಥಿಗಳಿಗೆ ಸಿಹಿ ವಿತರಿಸಲಾಯಿತು.

ಶಾಲೆಯ ಮುಖ್ಯದ್ವಾರಕ್ಕೆ ತಳಿರು ತೋರಣಗಳಿಂದ ಅಲಂಕರಿಸಲಾಗಿತ್ತು. ಬಲೂನ್‌ಗಳನ್ನು ಕಟ್ಟಲಾಗಿತ್ತು. ಸರಸ್ವತಿ ದೇವಿಯ ಪಾತ್ರ ಧರಿಸಿದ್ದ ವಾರಿಧಿ ಮಂಗಳೂರೆ, ಗಣಪತಿ ವೇಷ ಧರಿಸಿದ್ದ ಪ್ರಜ್ವಲ್ ವೀರಶೆಟ್ಟಿ ಗಮನ ಸೆಳೆದರು.

ಸಾಹಿತಿ ಭಾರತಿ ವಸ್ತ್ರದ್ ಅವರು ಸರಸ್ವತಿ ದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಶಾಲಾ ಆರಂಭೋತ್ಸವಕ್ಕೆ ಚಾಲನೆ ನೀಡಿದರು.

ಶಾಲೆಯ ಆಡಳಿತಾಧಿಕಾರಿ ಸಂತೋಷಕುಮಾರ ಮಂಗಳೂರೆ, ಶಿಕ್ಷಕರಾದ ಅಲ್ಕಾವತಿ, ನೀಲಮ್ಮ, ಪೂಜಾ, ಜ್ಯೋತಿ, ಮಾರುತೆಪ್ಪ, ಸುಮೀತ್, ಪ್ರಶಾಂತ, ಗಣಪತಿ, ರೇಣುಕಾ, ಸುನೀತಾ, ಸುಜಾತಾ, ಸುಗಂಧಾ, ಅಶ್ವಿನಿ, ಸವಿತಾ, ಪೂನಂ, ಶೈಲಜಾ ಇದ್ದರು.

## ಶೆಟಕಾರ್ ಶಾಲೆ: ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕ ವಿತರಣೆ

ಬೀದರ:ಜೂ.2:ಚಿದಂಬರ ಶಿಕ್ಷಣ ಸಂಸ್ಥೆಯ ಸಂಚಾಲಿತ ಇಲ್ಲಿಯ ಶ್ರೀಮತಿ ಇಂದಿರಾಬಾಯಿ ಗುರುತಪ್ಪ ಶೆಟಕಾರ್ ಪ್ರೌಢಶಾಲೆಯಲ್ಲಿ ಸೋಮವಾರ ನಡೆದ ಶಾಲಾ ಆರಂಭೋತ್ಸವದಲ್ಲಿ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ವಿತರಿಸಲಾಯಿತು.

ಪ್ರೌಢಶಾಲಾ ಹಂತವು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಹಂತವಾಗಿದೆ. ಹೀಗಾಗಿ ವಿದ್ಯಾರ್ಥಿಗಳು ಚೆನ್ನಾಗಿ ವ್ಯಾಸಂಗ ಮಾಡಿ, ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು. ಶಿಕ್ಷಕರು ಹಾಗೂ ಶಾಲೆಗೆ ಕೀರ್ತಿ ತರಬೇಕು ಎಂದು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಸದ್ಗುರು ಸಿದ್ಧಾರೂಢ ಮಹಿಳಾ ಪದವಿ ಕಾಲೇಜು ಪ್ರಾಚಾರ್ಯ ನಾಗಪ್ಪ ಜಾನಕನೋರ ಹೇಳಿದರು.

ವಿದ್ಯಾರ್ಥಿಗಳು ಮೊಬೈಲ್‌ನಿಂದ ದೂರವಿರಬೇಕು. ಕಲಿಕೆಯತ್ತಲೇ ಗಮನ ಕೇಂದ್ರೀಕರಿಸಬೇಕು. ಶಿಕ್ಷಕರು ಹಾಗೂ ಪಾಲಕರು ಹೆಮ್ಮೆ ಪಡುವಂಥ ಸಾಧನೆ ಮಾಡಬೇಕು ಎಂದು ಅಧ್ಯಕ್ಷತೆ ವಹಿಸಿದ್ದ ಮುಖ್ಯಶಿಕ್ಷಕ ಲಕ್ಷ್ಮಣ ಎಂ. ಪೂಜಾರಿ ತಿಳಿಸಿದರು.

ಶಿಕ್ಷಕರಾದ ನಿರ್ಮಲಾ ಕುಲಕರ್ಣಿ, ಸತ್ಯವಾನ್ ಭೋಸ್ಲೆ, ಗೋಪಾಲ್ ಕುಲಕರ್ಣಿ, ಶರಣಪ್ಪ ಪೂಜಾರಿ, ಶರಣಪ್ಪ ಸಾಗರ್, ಧೂಳಪ್ಪ ಸಿದ್ದೇಶ್ವರ, ನಾಗಪ್ಪ ಮೋಟಾ, ಅಮೀತ್ ಸೋಲಪುರ, ಸತ್ಯವತಿ, ಮೀನಾಕ್ಷಿ ಮತ್ತಿತರರು ಇದ್ದರು. ಶಿಕ್ಷಕ ನಾಗನಾಥ ಬಿರಾದಾರ ನಿರೂಪಿಸಿದರು.

## ಕೃಷಿ ಪರಿಕರ ಮಾರಾಟಗಾರರ ಸಭೆ: ರೈತರಿಗೆ ಸಕಾಲಕ್ಕೆ ಗುಣಮಟ್ಟದ ಕೃಷಿ ಪರಿಕರಗಳನ್ನು ವಿತರಿಸಿ: ಎಪಿ ಬಿರಾದಾರ

ಮಲ್ಲಮ್ಮ ನುಡಿ ವಾರ್ತೆ

ಬಸವನಬಾಗೇವಾಡಿ:ತಾಲೂಕಾ ಎಲ್ಲ ಕೃಷಿ ಪರಿಕರ ಮಾರಾಟಗಾರರು ರೈತರಿಗೆ ಸಕಾಲಕ್ಕೆ ಗುಣಮಟ್ಟದ ಪರಿಕರಗಳನ್ನು ವಿತರಿಸುವಂತೆ ಹಾಗೂ ಮಾರಾಟ್ಗಾರರು ಕೆಲವು ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಪಟ್ಟಣದ ಸಹಾಯಕ ಕೃಷಿ ನಿರ್ದೇಶಕ ಅಮಗೊಂಡ ಪಿ ಬಿರಾದಾರ ಕರೆ ನೀಡಿದರು.




ಪಟ್ಟಣದ ಸಹಾಯಕ ಕೃಷಿ ನಿರ್ದೇಶಕರ ಕಛೇರಿಯ ಸಭಾಂಗಣದಲ್ಲಿ ಮಂಗಳವಾರ ಬಸವನ ಬಾಗೇವಾಡಿ ಹೋಬಳಿ, ಹೂವಿನಹಿಪ್ಪರಗಿ ಹೋಬಳಿ ಮತ್ತು ಮನಗೂಳಿ ಹೋಬಳಿ ವ್ಯಾಪ್ತಿಯ ಕೃಷಿ ಪರಿಕರ ಮಾರಾಟಗಾರರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

2026ರ ಮುಂಗಾರು ಹಂಗಾಮು ಪ್ರಾರಂಭವಾಗಿದ್ದು. ರೈತರಿಗೆ ಸಮಯಕ್ಕೆ ಸರಿಯಾಗಿ ಮತ್ತು ಗುಣಮಟ್ಟದ ಪರಿಕರಗಳನ್ನು ವಿತರಿಸುವುದು ಪ್ರಮುಖ ಕಾರ್ಯವಾಗಿದೆ. ಕೃಷಿ ಪರಿಕರ ಮಾರಾಟಗಾರರು ಕಡ್ಡಾಯವಾಗಿ ಈ ಕೆಳಕಾಣಿಸಿದ ನಿಯಮಗಳನ್ನು ಮತ್ತು ಕಾರ್ಯಗಳನ್ನು ಪಾಲಿಸಲು ಸೂಚಿಸಲಾಯಿತು. ರಸಗೊಬ್ಬರಗಳ ದರಪಟ್ಟಯನ್ನು ರೈತರಿಗೆ ಕಾಣುವ ಹಾಗೆ ಕಡ್ಡಾಯವಾಗಿ ಪ್ರದರ್ಶಿಸಬೇಕು. ರೈತರಿಗೆ ಪರಿಕರಗಳ ಖರೀದಿ ರಶೀದಿಯನ್ನು ನೀಡಬೇಕು. ದಾಸ್ತಾನು ವಿವರವನ್ನು ಅಂಗಡಿಯಲ್ಲಿ ನಿರ್ವಹಿಸಬೇಕು. ಪರಿಕರಗಳನ್ನು ಅಧಿಕೃತ ಕಂಪನಿಗಳಿಂದ ಅಥವಾ ಸಗಟು ಮಾರಾಟಗಾರರಿಂದ ಖರೀದಿಸಬೇಕು. ರೈತರಿಗೆ ಸಮತೋಲನ ಪೋಷಕಾಂಶಗಳ ರಸಗೊಬ್ಬರಗಳನ್ನು ವಿತರಿಸುವುದು. ಯುರಿಯಾ ಗೊಬ್ಬರವನ್ನು ಕಡ್ಡಾಯವಾಗಿ ಕೆ ಕಿಸಾನ್ ಮತ್ತು ಪಾಸ್ ಮೂಲಕ ರೈತರಿಗೆ ಆಧ್ಯತೆ ಮೇರೆಗೆ

## ನಿಧನ ವಾರ್ತೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ ತಾಲ್ಲೂಕಿನ ಬೋಳೆಗಾಂವ ಗ್ರಾಮದ ಹಿರಿಯ ಜೀವಿ ನಾಗಶೆಟ್ಟಿ ಬುಳ್ಳಾ (85) ಮಂಗಳವಾರ ನಿಧನರಾಗಿದ್ದಾರೆ. ಹೆಂಡತಿ, ಮೂವರು ಪುತ್ರಿಯರು ನಿವೃತ್ತ ಪ್ರಾಚಾರ್ಯರ ಪ್ರಬುಶೆಟ್ಟಿ ಬುಳ್ಳಾ ಸೇರಿದಂತೆ ಇಬ್ಬರು ಪುತ್ರರು ಹಾಗೂ ಅಪಾರ ಬಂಧು ಬಳಗ ಬಿಟ್ಟು ಅಗಲಿದ್ದಾರೆ.



ಮೃತರ ಅಂತ್ಯಕ್ರಿಯೆ ಬುಧವಾರ ಮಧ್ಯಾಹ್ನ 12.30 ಗಂಟೆಗೆ ಸ್ವಗ್ರಾಮ ಭಾಲ್ಕಿ ತಾಲ್ಲೂಕಿನ ಬೋಳೆಗಾಂವ ಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.


**LOST & FOUND**


Thorat Ankita Changdev Diploma 1st Year (Marks Card) (A58657) Reg No. B832258 Lost From Tuljapur To Hum-nabad while Reaching College jour-ney if any one Found Please Contact No.9860386275, 9740413741


## ಡಿ.ಕೆ.ಶಿವಕುಮಾರ್ ಅವರಿಂದ ನಾಡಿನ ಅಭಿವೃದ್ಧಿ ಆಗಲಿ – ಡಾ.ಸಿದ್ಧರಾಮ ವಾಘಮಾರೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ನಾಯಕರಾಗಿ ಸರ್ವಾನುಮತದಿಂದ ಆಯ್ಕೆಯಾಗಿ, ಇದೀಗ ಕರ್ನಾಟಕದ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಳ್ಳಲಿರುವ ಡಿ.ಕೆ.ಶಿವಕುಮಾರ್ ಅವರಿಂದ ನಾಡಿನ ಸರ್ವತೋಮುಖ ಅಭಿವೃದ್ಧಿ ಆಗಲಿ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಪಕ್ಷದ ಹಿಂದುಳಿದ ವರ್ಗಗಳ ರಾಜ್ಯ ಉಪಾಧ್ಯಕ್ಷರಾಗಿರುವ ಡಾ.ಸಿದ್ಧರಾಮ ವಾಘಮಾರೆ ಅವರು ಶುಭ ಹಾರೈಸಿದ್ದಾರೆ.

ನಿಯೋಜಿತ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿಯಾದ ಬಳಿಕ ಡಾ.ಸಿದ್ಧರಾಮ ವಾಘಮಾರೆ ಅವರು ಈ ಕುರಿತು ಪತ್ರಿಕೆಯೊಂದಿಗೆ ಮಾತನಾಡಿ, ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಅವರು ಜೋಡೆತ್ತುಗಳಂತೆ ರಾಜ್ಯದ ಅಭಿವೃದ್ಧಿಗಾಗಿ ಪಂಚ ಗ್ಯಾರಂಟಿಗಳನ್ನು ನೀಡಿದ್ದರು. ಇದರಿಂದ ಕೋಟ್ಯಾಂತರ ಫಲಾನುಭವಿಗಳಿಗೆ ಅನುಕೂಲವಾಗಿದೆ. ಬಡವರು ಮತ್ತು ಮಧ್ಯಮ ವರ್ಗದವರು ಕಳೆದ ಮೂರು ವರ್ಷಗಳಲ್ಲಿ ಆರ್ಥಿಕವಾಗಿ ಪ್ರಗತಿ ಸಾಧಿಸಲು ಸಾಧ್ಯವಾಗಿದೆ. ಕಾಂಗ್ರೆಸ್ ಪಕ್ಷ ಈ ಇಬ್ಬರು ನಾಯಕರ ನೇತೃತ್ವದಲ್ಲಿ ಸಾಮಾಜಿಕ ನ್ಯಾಯ ದೊರಕಿಸಿಕೊಡುವಲ್ಲಿ ದೇಶಕ್ಕೆ ಮಾದರಿಯಾಗಿದೆ ಎಂದು ಹೇಳಿದ್ದಾರೆ.



ಸಿದ್ದರಾಮಯ್ಯ ಅವರು ಹಿಂದುಳಿದ ಸಮಾಜಗಳ ನೇತಾರರು ಎನ್ನುವುದರಲ್ಲಿ ಎರಡು ಮಾತಿಲ್ಲ. ಮೈಕ್ರೋ ಸಮುದಾಯಗಳ ಅಭಿವೃದ್ಧಿಗಾಗಿ, ಅಲೆಮಾರಿ ಸಮುದಾಯಗಳ ಮತ್ತು ಹಿಂದುಳಿದ ಸಮುದಾಯಗಳ ನಿಗಮ, ಮಂಡಳಿಗೆ ತಮ್ಮನ್ನು ಅಧ್ಯಕ್ಷರನ್ನಾಗಿಸುವ ನಿಯೋಜಿಸುವ ಭರವಸೆ ನೀಡಿದ್ದರು. ಅಧಿವೇಶನ ಮುಗಿದ ಬಳಿಕ ನಿಗಮ, ಮಂಡಳಿಗೆ ಅಧ್ಯಕ್ಷ ಸ್ಥಾನ ಅಥವಾ ಎಂ.ಎಲ್.ಸಿ. ಹುದ್ದೆಗೆ ನಿಯೋಜಿಸುವುದಾಗಿ ಹೇಳಿದ್ದರು. ದಾವಣಗೆರೆ ಮತ್ತು ಬಾಗಲಕೋಟೆ ಉಪ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳ ಪರವಾಗಿ ಕೆಲಸ ಮಾಡಲು ಕೆಪಿಸಿಸಿ ವತಿಯಿಂದ ನನ್ನನ್ನು ನಿಯೋಜಿಸಿದ್ದು, ಒಂದು ವಾರಗಳ ಕಾಲ ಉಪ ಚುನಾವಣೆಯಲ್ಲಿ ಪಕ್ಷಕ್ಕಾಗಿ ದುಡಿದಿದ್ದೇನೆ. ಇಬ್ಬರು ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಿದ್ದೇನೆ. ಬದಲಾದ ರಾಜಕೀಯ ಬೆಳವಣಿಗೆಯಲ್ಲಿ ನಿಗಮ, ಮಂಡಳಿಯ ಉಳಿದ ಸ್ಥಾನಗಳ ಭರ್ತಿ ಪ್ರಕ್ರಿಯೆ ನೆನೆಗುದಿಗೆ ಬಿದ್ದಂತಾಗಿದೆ. ಎಂ.ಎಲ್.ಸಿ. ಸ್ಥಾನಗಳು, ನಿಗಮ, ಮಂಡಳಿಗಳ ಅಧ್ಯಕ್ಷರು, ಉಪಾಧ್ಯಕ್ಷರು, ನಿರ್ದೇಶಕರ ಸ್ಥಾನಗಳಿಗೆ ನನ್ನನ್ನು ಒಳಗೊಂಡಂತೆ ಪಕ್ಷಕ್ಕಾಗಿ ದುಡಿದ ಹಿಂದುಳಿದ ಅರ್ಹ ಹಿರಿಯ ಮತ್ತು ಕಿರಿಯ ಕಾರ್ಯಕರ್ತರಿಗೆ ಸಾಮಾಜಿಕ ನ್ಯಾಯದಡಿ ಸ್ಥಾನ ಮಾನ ನೀಡುವ ಮೂಲಕ ಕಾಂಗ್ರೆಸ್ ಪಕ್ಷ ಹಿಂದುಳಿದವರ ಧ್ವನಿಯಾಗಿದೆ ಎನ್ನುವುದನ್ನು ನಿರೂಪಿಸಬೇಕೆಂದು ಮನವಿ ಮಾಡಿದ್ದಾರೆ.

ಈಗಾಗಲೇ ಸಚಿವರಾದ ಈಶ್ವರ್ ಬಿ.ಖಂಡ್ರೆ, ರಹೀಂ ಖಾನ್, ಮಾಜಿ ಸಚಿವರಾದ ರಾಜಶೇಖರ ಪಾಟೀಲ್ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿತ್ತು. ವಿಧಾನಪರಿಷತ್ ಸದಸ್ಯರಾಗಿದ್ದ ಡಾ.ಚಂದ್ರಶೇಖರ ಪಾಟೀಲ್ ಮತ್ತು ಭೀಮರಾವ್ ಪಾಟೀಲ್ ಅವರೂ ಸಹ ನಿಗಮ, ಮಂಡಳಿ ಅಧ್ಯಕ್ಷ ಸ್ಥಾನಕ್ಕೆ ನನ್ನನ್ನು ನಿಯೋಜಿಸಲು ಪ್ರೋತ್ಸಾಹಿಸಿದ್ದಾರೆ. ಮುಖ್ಯಮಂತ್ರಿಗಳಾಗಿದ್ದ ಸಿದ್ದರಾಮಯ್ಯನವರೂ ಭರವಸೆ ನೀಡಿದ್ದರು. ಬದಲಾದ ರಾಜಕೀಯ ಬೆಳವಣಿಗೆಯಿಂದ ಮತ್ತು ಹೈಕಮಾಂಡ್ ವರಿಷ್ಠರು ತೆಗೆದುಕೊಂಡಿರುವ ನಿರ್ಣಯಗಳಿಂದಾಗಿ ಹೊಸ ಮುಖ್ಯಮಂತ್ರಿಯಾಗುತ್ತಿರುವ ಡಿ.ಕೆ.ಶಿವಕುಮಾರ್ ಅವರು ತಮ್ಮನ್ನು ಸೇರಿದಂತೆ ಅರ್ಹ ಕಾರ್ಯಕರ್ತರನ್ನು ನಿಗಮ, ಮಂಡಳಿಗೆ ಅಧ್ಯಕ್ಷರನ್ನಾಗಿ ಅಥವಾ ವಿಧಾನ ಪರಿಷತ್ ನಾಮ ನಿರ್ದೇಶಿತ ಸದಸ್ಯರನ್ನಾಗಿ ತಮ್ಮನ್ನು ಆಯ್ಕೆ ಮಾಡುವ ಭರವಸೆ ಇದೆ. ಕಳೆದ ಹಲವಾರು ದಶಕಗಳಿಂದ ಪಕ್ಷದ ಕಾರ್ಯಕರ್ತನಾಗಿ ದುಡಿದ ತಮಗೆ ಹಾಗೂ ಅರ್ಹ ಕಾರ್ಯಕರ್ತರಿಗೆ ಡಿ.ಕೆ.ಶಿವಕುಮಾರ್ ಅವರು ನಮ್ಮ ಆಶಯದಂತೆ ಸ್ಥಾನ ಮಾನ ನೀಡುವರೆಂಬ ನಿರೀಕ್ಷೆ ಇದೆ ಎಂದು ಡಾ.ಸಿದ್ಧರಾಮ ವಾಘಮಾರೆ ತಿಳಿಸಿದ್ದಾರೆ

### ಮುಂಗಾರು ಹಂಗಾಮು ಸಿದ್ಧತೆ: ಬಳ್ಳಾರಿ ಜಿಲ್ಲೆಯಲ್ಲಿ ಚುರುಕುಗೊಂಡ ಕೃಷಿ ಚಟುವಟಿಕೆಗಳು

## ಸಹಾಯಧನದಲ್ಲಿ ಬಿತ್ತನೆ ಬೀಜ ವಿತರಣೆಗೆ ಕೃಷಿ ಇಲಾಖೆ ಸಜ್ಜು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.02–ಜಿಲ್ಲೆಯಲ್ಲಿ ಮುಂಗಾರು ಪೂರ್ವದಲ್ಲಿ ಹಲವೆಡೆ ಉತ್ತಮ ಮಳೆಯಾಗುತ್ತಿರುವುದರಿಂದ ಕೃಷಿ ಚಟುವಟಿಕೆಗಳು ಸಾಗರೋತ್ತರ ವೇಗವನ್ನು ಪಡೆದುಕೊಂಡಿದ್ದು, ರೈತ ಸಮುದಾಯದಲ್ಲಿ ಮಂದಹಾಸ ಮೂಡಿಸಿದೆ. ಪ್ರಸ್ತುತ ಲಭ್ಯವಿರುವ ಉತ್ತಮ ಮಳೆಯ ಹಿನ್ನೆಲೆಯಲ್ಲಿ ಜಿಲ್ಲೆಯ ರೈತರು ತಮ್ಮ ಕೃಷಿಭೂಮಿಯನ್ನು ಹದಗೊಳಿಸುವ ಕಾರ್ಯಗಳಲ್ಲಿ ಬಿಡುವಿಲ್ಲದೆ ತೊಡಗಿಸಿಕೊಂಡಿದ್ದಾರೆ. ರಂಟೆ–ಕುಂಟೆ ಹೊಡೆಯುವುದು, ರೋಟವೇಟರ್ ಹಾಗೂ ಎತ್ತುಗಳ ನೇಗಿಲು ಬಳಸಿ ಭೂಮಿಯನ್ನು ಹದಗೊಳಿಸುವ ದೃಶ್ಯಗಳು ಜಿಲ್ಲೆಯಾದ್ಯಂತ ಸಾಮಾನ್ಯವಾಗುತ್ತಿವೆ.

ಜಿಲ್ಲೆಯ ವಾರ್ಷಿಕ ವಾಡಿಕೆ ಮಳೆಯು 599.0 ಮಿ.ಮೀ ಆಗಿರುತ್ತದೆ. ಮೇ 31ರ ಅಂತ್ಯಕ್ಕೆ ಸರಾಸರಿ ವಾಡಿಕೆ ಮಳೆಯು 74.4 ಮಿ.ಮೀ ಇರಬೇಕಾಗಿದ್ದು, ಪ್ರಸ್ತುತ 72.4 ಮಿ.ಮೀ ನಷ್ಟು ಉತ್ತಮ ಮಳೆಯಾಗಿರುತ್ತದೆ ಎಂದು ಜಂಟಿ ಕೃಷಿ ನಿರ್ದೇಶಕ ಟಿ. ಸೋಮಸುಂದರ್ ಅವರು ತಿಳಿಸಿದ್ದಾರೆ.

*1.59 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ:*

ಪ್ರಸ್ತಕ ಸಾಲಿನ ಮುಂಗಾರು ಹಂಗಾಮಿಗೆ ಜಿಲ್ಲೆಯಲ್ಲಿ ಒಟ್ಟು 1,59,546 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡುವ ಗುರಿಯನ್ನು ಹೊಂದಲಾಗಿದೆ. ಪ್ರಮುಖ ಬೆಳೆಗಳ ನಿರೀಕ್ಷಿತ ಬಿತ್ತನೆ ವಿಸ್ತೀರ್ಣದ ವಿವರ ಹೀಗಿದೆ.

ಭತ್ತ– 87,741 ಹೆಕ್ಟೇರ್, ಮೆಕ್ಕಜೋಳ–26,000 ಹೆಕ್ಟೇರ್, ಹತ್ತಿ– 20,000 ಹೆಕ್ಟೇರ್, ಸಜ್ಜೆ– 10,000 ಹೆಕ್ಟೇರ್, ತೊಗರಿ–7,224 ಹೆಕ್ಟೇರ್, ತೃಣಧಾನ್ಯಗಳು–2,508 ಹೆಕ್ಟೇರ್, ಶೇಂಗಾ (ನೆಲಕಡಲೆ)– 1,500 ಹೆಕ್ಟೇರ್, ಸೂರ್ಯಕಾಂತಿ– 1,200 ಹೆಕ್ಟೇರ್, ಕಬ್ಬು– 800 ಹೆಕ್ಟೇರ್.

*15 ಕೇಂದ್ರಗಳ ಮೂಲಕ ರಿಯಾಯಿತಿ ದರದಲ್ಲಿ ಬೀಜ ವಿತರಣೆ:*

ರೈತರ ಕೃಷಿ ಚಟುವಟಿಕೆಗಳಿಗೆ ಪೂರಕವಾಗಿ ಕೃಷಿ ಇಲಾಖೆಯು ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಪೂರೈಸಲು ಸಂಪೂರ್ಣ ಸಜ್ಜಾಗಿದೆ. ಜಿಲ್ಲೆಯ 13 ರೈತ ಸಂಪರ್ಕ ಕೇಂದ್ರಗಳು ಮತ್ತು 02 ಹೆಚ್ಚುವರಿ ಕೇಂದ್ರಗಳು ಸೇರಿದಂತೆ ಒಟ್ಟು 15 ಕೇಂದ್ರಗಳ ಮೂಲಕ ವಿವಿಧ ಬೆಳೆಗಳ ಬಿತ್ತನೆ ಬೀಜಗಳನ್ನು ಸಹಾಯಧನದಲ್ಲಿ ವಿತರಿಸಲು ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಜಿಲ್ಲೆಗೆ ಮುಂಗಾರು ಹಂಗಾಮಿನಲ್ಲಿ ಒಟ್ಟು 7,115 ಕ್ವಿಂಟಾಲ್ ಬಿತ್ತನೆ ಬೀಜದ ಬೇಡಿಕೆ ಇದ್ದು, ಸದ್ಯ 10,415 ಕ್ವಿಂಟಾಲ್‌ನಷ್ಟು ದೊಡ್ಡ ಪ್ರಮಾಣದ ದಾಸ್ತಾನು ಲಭ್ಯವಿದೆ.

*ಬಿತ್ತನೆ ಬೀಜಗಳ ಬೇಡಿಕೆ ಮತ್ತು ದಾಸ್ತಾನು ವಿವರ (ಕ್ವಿಂ. ಗಳಲ್ಲಿ):*

ಭತ್ತ: 2,003 ಕ್ವಿಂ(ಬೇಡಿಕೆ), 3,000 ಕ್ವಿಂ(ದಾಸ್ತಾನು).

ಮೆಕ್ಕಜೋಳ: 2,493 ಕ್ವಿಂ(ಬೇಡಿಕೆ), 3,000 ಕ್ವಿಂ(ದಾಸ್ತಾನು).

ತೊಗರಿ: 477 ಕ್ವಿಂ(ಬೇಡಿಕೆ), 1,000 ಕ್ವಿಂ(ದಾಸ್ತಾನು).

ನೆಲಕಡಲೆ: 1,770 ಕ್ವಿಂ(ಬೇಡಿಕೆ), 2,900 ಕ್ವಿಂ(ದಾಸ್ತಾನು).

ಜೋಳ: 96 ಕ್ವಿಂ(ಬೇಡಿಕೆ), 150 ಕ್ವಿಂ(ದಾಸ್ತಾನು).

ಇತರೆ: 276 ಕ್ವಿಂ(ಬೇಡಿಕೆ), 365 ಕ್ವಿಂ(ದಾಸ್ತಾನು).

ಒಟ್ಟು: 7,115 ಕ್ವಿಂ(ಬೇಡಿಕೆ), 10,415 ಕ್ವಿಂ(ದಾಸ್ತಾನು).

ರೈತ ಬಾಂಧವರು ಕೇವಲ ಮಣ್ಣಿನಲ್ಲಿ ಅವಶ್ಯಕ ತೇವಾಂಶ ಲಭ್ಯವಿದ್ದಾಗ ಹಾಗೂ ಮುಂದಿನ 3–4 ದಿನಗಳಲ್ಲಿ ಮಳೆ ಬರುವ ಮುನ್ಸೂಚನೆ ಇರುವ ಸಂಭವವಿದ್ದಲ್ಲಿ ಮಾತ್ರ ಬಿತ್ತನೆಗೆ ಮುಂದಾಗಬೇಕು ಎಂದು ಅವರು ಕೋರಿದ್ದಾರೆ.

*ಸಮರ್ಪಕ ರಸಗೊಬ್ಬರ ದಾಸ್ತಾನು; ಎಫ್‌ಐಡಿ ಮೂಲಕ ಯೂರಿಯಾ ವಿತರಣೆ:*

ಜಿಲ್ಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ದಾಸ್ತಾನು ಸಮರ್ಪಕವಾಗಿದೆ. ಮುಂಗಾರು ಹಂಗಾಮಿಗೆ ಒಟ್ಟು 1,03,778 ಮೆಟ್ರಿಕ್ ಟನ್ ರಸಗೊಬ್ಬರ ಬೇಡಿಕೆಯಿದ್ದು, ಸದ್ಯ 47,533.23 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನಿರುತ್ತದೆ.

ಪಾಶ್ಚಾತ್ಯ ದೇಶಗಳಲ್ಲಿ ನಡೆಯುತ್ತಿರುವ ಯುದ್ಧದ ಹಿನ್ನೆಲೆಯಲ್ಲಿ ಮುಂಬರುವ ದಿನಗಳಲ್ಲಿ ರಸಗೊಬ್ಬರದ ಪೂರೈಕೆಯಲ್ಲಿ ಸ್ವಲ್ಪ ಮಟ್ಟಿನ ಏರುಪೇರಾಗುವ ಸಂಭವವಿರುತ್ತದೆ. ಇದನ್ನು ಗಮನದಲ್ಲಿಟ್ಟುಕೊಂಡು ಎಲ್ಲಾ ರೈತರಿಗೆ ಯೂರಿಯಾ ರಸಗೊಬ್ಬರವನ್ನು ಸಮರ್ಪಕವಾಗಿ ಒದಗಿಸಲು ಹಾಗೂ ಕಾಳಸಂತೆಯಲ್ಲಿ ಮಾರಾಟವಾಗುವುದನ್ನು ತಡೆಗಟ್ಟಲು ಸರ್ಕಾರದ ಆದೇಶದನ್ವಯ ಯೂರಿಯಾವನ್ನು ಕಡ್ಡಾಯವಾಗಿ ಎಫ್‌ಐಡಿ (ಫಾರ್ಮರ್ ಐಡಿ) ಮೂಲಕವೇ ವಿತರಿಸಲಾಗುವುದು.

ಅಲ್ಲದೆ, ರೈತರು ಕೇವಲ ಯೂರಿಯಾ ರಸಗೊಬ್ಬರ ಒಂದನ್ನೇ ಅವಲಂಬಿಸದೆ ಸಾರಜನಕ ಒದಗಿಸುವ ಇತರೆ ರಸಗೊಬ್ಬರಗಳಾದ ಕಾಂಪ್ಲೆಕ್ಸ್ ಗೊಬ್ಬರಗಳು, ನ್ಯಾನೋ ಯೂರಿಯಾ ಹಾಗೂ ನ್ಯಾನೋ ಡಿ.ಎ.ಪಿ ಗಳನ್ನೂ ಸಹ ಬಳಸಬೇಕೆಂದು ಜಂಟಿ ಕೃಷಿ ನಿರ್ದೇಶಕರು ಮನವಿ ಮಾಡಿದ್ದಾರೆ.

*ರಸಗೊಬ್ಬರ ಬೇಡಿಕೆ (ಏಪ್ರಿಲ್ 2026 ರಿಂದ ಸೆಪ್ಟೆಂಬರ್ 2026 ರವರೆಗೆ) ಮತ್ತು ದಾಸ್ತಾನು ವಿವರ (ಮೇ 31 2026 ರವರೆಗೆ) (ಮೆಟ್ರಿಕ್ ಟನ್‌ಗಳಲ್ಲಿ):*

ಡಿ.ಎ.ಪಿ: 13,915(ಬೇಡಿಕೆ), 6,093.72(ದಾಸ್ತಾನು).

ಎಂ.ಓ.ಪಿ: 3,567(ಬೇಡಿಕೆ), 2,156.10(ದಾಸ್ತಾನು).

ಕಾಂಪ್ಲೆಕ್ಸ್: 50,554(ಬೇಡಿಕೆ), 25,029.54(ದಾಸ್ತಾನು).

ಯೂರಿಯಾ: 34,641(ಬೇಡಿಕೆ), 13,633.40(ದಾಸ್ತಾನು)

ಎಸ್.ಎಸ್.ಪಿ/ಇತರೆ: 1,101(ಬೇಡಿಕೆ), 599.52(ದಾಸ್ತಾನು)

ಒಟ್ಟು: 1,03,778(ಬೇಡಿಕೆ), 47,533.23(ದಾಸ್ತಾನು).

*ಅಕ್ರಮ ತಡೆಗೆ ಕಟ್ಟುನಿಟ್ಟಿನ ನಿಗಾ:*

ಜಿಲ್ಲೆಯಲ್ಲಿ ಕೃಷಿ ಪರಿಕರಗಳ ಪರಿವೀಕ್ಷಕರ ವಿಶೇಷ ತಂಡಗಳನ್ನು ರಚಿಸಲಾಗಿದ್ದು, ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳ ಗುಣಮಟ್ಟ ಮತ್ತು ಬೆಲೆ ನಿಯಂತ್ರಣದ ಮೇಲೆ ಕಟ್ಟುನಿಟ್ಟಿನ ನಿಗಾ ಇರಿಸಲಾಗಿದೆ.

ಖಾಸಗಿ ಕೃಷಿ ಪರಿಕರ ಮಾರಾಟಗಾರರು ಕಡ್ಡಾಯವಾಗಿ ಗುಣಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳನ್ನೇ ಮಾರಾಟ ಮಾಡಬೇಕು ಹಾಗೂ ಯೂರಿಯಾವನ್ನು ಎಫ್‌ಐಡಿ ಮೂಲಕವೇ ವಿತರಿಸಬೇಕು. ನಿಯಮ ಉಲ್ಲಂಘಿಸಿ ಕಾಳಸಂತೆ ಅಥವಾ ಹೆಚ್ಚಿನ ಬೆಲೆಗೆ ಮಾರಾಟ ಮಾಡಲು ಯತ್ನಿಸಿದರೆ ಕಾನೂನು ರೀತ್ಯಾ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಜಂಟಿ ಕೃಷಿ ನಿರ್ದೇಶಕರು ಎಚ್ಚರಿಸಿದ್ದಾರೆ.

ರೈತರು ಸಹ ಯಾವುದೇ ಅನಧಿಕೃತ ಮೂಲಗಳಿಂದ ಪರಿಕರಗಳನ್ನು ಖರೀದಿಸದೇ, ಕೇವಲ ಅಧಿಕೃತ ಪರಿಕರ ಮಾರಾಟಗಾರರಿಂದಲೇ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳನ್ನು ಖರೀದಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಹೊಸ ಬಂಡಿಹರ್ಲಾಪುರ ಗ್ರಾಮದ ಶಾಲಾ ಮಕ್ಕಳಿಂದ ಋತುಚಕ್ರ ನೈರ್ಮಲ್ಯ ದಿನಾಚರಣೆ




ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :–ಪ್ರತಿಯೊಬ್ಬ ಮಹಿಳೆ ಮಾಸಿಕ ಋತುಚಕ್ರ ಸಂದರ್ಭದಲ್ಲಿ ವೈಯಕ್ತಿಕ ಶುಚಿತ್ವಕ್ಕೆ ಆದ್ಯತೆ ನೀಡಿ ಸ್ಯಾನಿಟರಿ ಪ್ಯಾಡ್ ಬಳಕೆಗೆ ಒತ್ತು ನೀಡಬೇಕೆಂದು ಜಿಲ್ಲಾ ಪಂಚಾಯತಿಯ ಸ್ವಚ್ಛ ಭಾರತ ಮಿಷನ್ ಯೋಜನೆಯ ಸ್ಯಾನಿಟೇಷನ್ & ಹೈಜಿನ್ ಸಮಾಲೋಚಕಿ ಬಸಮ್ಮ ಹುಡೇದ ಕರೆ ನೀಡಿದರು.

ಬಂಡಿಹರ್ಲಾಪುರ ಗ್ರಾಮ ಪಂಚಾಯತಿವತಿಯಿಂದ ಗ್ರಾಮ ಪಂಚಾಯತಿಯ ಆವರಣದಲ್ಲಿ ಶಾಲಾ ಮಕ್ಕಳಿಂದ "ಮೇ–28 ಋತುಚಕ್ರ ನೈರ್ಮಲ್ಯ ದಿನಾಚರಣೆ"*ಕುರಿತು ಜಾಗೃತಿ ಕಾರ್ಯಕ್ರಮ ಜರುಗಿತು.

ಮುಟ್ಟಿನ ಸಮಯದಲ್ಲಿ ಮಾಸಿಕ ಋತುಚಕ್ರ ನಿರ್ವಹಣೆ, ಶುಚಿಯಾದ ಬಟ್ಟೆ ಬಳಕೆ ಹಾಗು ಸ್ಯಾನಿಟರಿ ಪ್ಯಾಡ್ ಬಳಕೆಯಿಂದ ಆಗುವ ಅನುಕೂಲಗಳು, ವೈಯಕ್ತಿಕ ಶುಚಿತ್ವ ಕುರಿತು ಮಹತ್ವದ ಮಾಹಿತಿ ನೀಡಿದರು. ಮಹಿಳೆಯರ ವೈಯಕ್ತಿಕ ಶುಚಿತ್ವ ಹಾಗೂ ಸ್ಯಾನಿಟರಿ ಪ್ಯಾಡ್ಗಳ ಬಳಕೆ ಹಾಗೂ ಬಳಸಿದ ಪ್ಯಾಡ್ ಗಳನ್ನು ಇನ್ಸಿನರೇಟರ್ ಮೂಲಕ ವೈಜ್ಞಾನಿಕ ನಿರ್ವಹಣೆ ಕುರಿತು ಮಾಹಿತಿ ನೀಡಲಾಯಿತು. ಇತ್ತೀಚಿನ ದಿನಗಳಲ್ಲಿ ನಾವು ಆರೋಗ್ಯದ ಬಗ್ಗೆ ನಾವು ಕಾಳಜಿವಹಿಸದೇ ಇರುವದರಿಂದ ಅನಾರೋಗ್ಯಕ್ಕೆ ಒಳಗಾಗುತ್ತಿದ್ದೇವೆ. ಮುಟ್ಟನ್ನು ಗುಟ್ಟನ್ನಾಗಿಸದೇ ಮುಟ್ಟನ್ನು ಒಗ್ಗೂಡಿಕೊಂಡು ಆರೋಗ್ಯದ ಬದಲಾವಣೆಗೆ ಮುನ್ನುಡಿ ಬರೆಯೋಣ ಎಂದು ಕರೆ ನೀಡಿದರು. ಮಹಿಳೆಯರು ಋತುಚಕ್ರ ಸಂದರ್ಭದಲ್ಲಿ ವೈಯಕ್ತಿಕ ಶುಚಿತ್ವಕ್ಕೆ ಹೆಚ್ಚಿನ ಆದ್ಯತೆ ನೀಡಲು ಪ್ರತಿ ಗ್ರಾಮ ಪಂಚಾಯತಿಯಲ್ಲಿ ಬಳಕೆ–ಯಾದ ಪ್ಯಾಡ್ಗಳನ್ನು ಸಂಗ್ರಹಿಸಿ ವೈಜ್ಞಾನಿಕ ನಿರ್ವಹಣೆ ಮಾಡಲು ಇನ್ಸಿನರೆಟರ್ ಅಳವಡಿಸಲಾಗುತ್ತಿದ್ದು ಎಲ್ಲಾ ಮಹಿಳೆಯರು ಅವುಗಳಿಗೆ ನೀಡಬೇಕು. ಎಲ್ಲಿ ಬೇಕಾದಲ್ಲಿ ಬಿಸಾಡದೇ ಗ್ರಾಮ ಪಂಚಾಯತಿ ವಾಹನಕ್ಕೆ ನೀಡಬೇಕು ಅಥವಾ ನಿಗದಿಪಡಿಸಿದ ಸ್ಥಳದಲ್ಲಿ ಅವುಗಳನ್ನು ವಿಲೆವಾರಿ ಮಾಡತಕ್ಕದ್ದು. ಬಯಲು ಶೌಚಕ್ಕೆ ಹೋಗುವದರಿಂದ ಅನೇಕ ರೋಗಗಳು ಹರಡುವ ಸಾಧ್ಯತೆ ಶೇ.80%ರಷ್ಟು ಇರುತ್ತದೆ. ಹಸಿ ಕಸ ಮತ್ತು ಒಣ ಕಸ ಪ್ರತ್ಯೇಕಿಸಿ ವಾಹನಕ್ಕೆ ನೀಡಬೇಕೆಂದು ಕರೆ ನೀಡಿದರು.

ಪಂಚಾಯತ ಅಭಿವೃದ್ಧಿ ಅಧಿಕಾರಿ ಅಶೋಕ ರಾಂಪುರ ಮಾತನಾಡಿ ಮಹಿಳೆಯರಿಗೆ ವೈಯಕ್ತಿಕ ಶುಚಿತ್ವ ಎನ್ನುವದು ಆರೋಗ್ಯದ ಮೂಲಕ ಬುನಾದಿ, ಹಾಗಾಗಿ ಮಹಿಳೆಯರು ಸ್ವಚ್ಛತೆಗೆ ಹಾಗು ಶುಚಿತ್ವ–ಕ್ಕೆ ಆದ್ಯತೆ ನೀಡಬೇಕೆಂದು ಕರೆ ನೀಡಿದರು. ಇಂದಿನ ಒತ್ತಡದ ಜೀವನದಲ್ಲಿ ನಾವುಗಳು ಬದುಕುತ್ತಿದ್ದು ಆರೋಗ್ಯದ ಸಲಹೆಗಳನ್ನು ನಾವುಗಳು ಅಳವಡಿಸಿಕೊಂಡಲ್ಲಿ ಸುಂದರ ಬದುಕನ್ನು ಸಾಗಿಸಲು ಅನುಕೂಲವಾಗುತ್ತದೆ ಎಂದರು.

ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ತಮ್ಮಣ್ಣ, ಕಲ್ಪನಾ, ಕೆಎಚ್ಪಿಟಿ ಸಂಯೋಜಕಿ ಪುಷ್ಪಾ, ಗ್ರಾಮ ಪಂಚಾಯತಿ ಕಾರ್ಯದರ್ಶಿ ನಾಗಪ್ಪ ಕುರುಬಡಗಿ, ಶಾಲಾ ಮಕ್ಕಳು, ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

## ನಾಗರಾಜ ಮಂಜಗುಣಿ



ಮಲ್ಲಮ್ಮ ನುಡಿ ವಾರ್ತೆ

ಅಂಕೋಲಾ : ಇಂದಿನ ಆಧುನೀಕರಣದಲ್ಲಿ ಮೊಬೈಲ್ ಸಂಪರ್ಕ ಅತ್ಯಮೂಲ್ಯವಾದುದು. ಅರಣ್ಯಭಾಗದಿಂದಲೇ ಕೂಡಿರುವ ಉತ್ತರ ಕನ್ನಡ ಜಿಲ್ಲೆಯಲ್ಲಿ ಸುಮಾರು 196 ಹಳ್ಳಿಗಳಲ್ಲಿ ಸಂಪರ್ಕ ಕ್ರಾಂತಿ ಬಲಪಡಿಸಲು ಟವರ್ ನಿರ್ಮಿಸಿದ್ದಾರೆ. ಆದ–ರೆ ಅವುಗಳಲ್ಲಿ ಬಹುತೇಕ ಟವರ್‌ಗಳಲ್ಲಿ ನೆಟ್‌ವರ್ಕ್ ಬರದೇ ಜನರು ಪರದಾಡುವಂತಾಗಿದೆ. ಅವುಗಳಲ್ಲಿ ತಾಲೂಕಿನ ಹಟ್ಟಿಕೇರಿ ಗ್ರಾ.ಪಂ. ವ್ಯಾಪ್ತಿಯ ಕೆಂದಿಗೆ ಗ್ರಾಮವು ಒಂದು.

ಕೆಂದಿಗೆ ಗ್ರಾಮದಲ್ಲಿ ಬಿಎಸ್‌ಎನ್‌ಎಲ್ ಟವರ್ ನಿರ್ಮಿಸಿದ್ದಾರೆ. ಆದರೆ ನೆಟ್‌ವರ್ಕ್ ಸಂಪರ್ಕಿಸುವ ಯಂತ್ರ ಪರಿಕರವನ್ನು ಟವರ್ ಬುಡದಲ್ಲಿ ಇಟ್ಟಿದ್ದಾರೆ. 4 ದಿನ ಈ ಭಾಗದಲ್ಲಿ ನೆಟ್‌ವರ್ಕ್ ಬಂದ ನಂತರ ಸಂಪೂರ್ಣ ನೆಟ್‌ವರ್ಕ್ ನಾಪತ್ತೆಯಾಗಿದೆ. ಟವರ್ ನಿರ್ಮಿಸಿ ಆ ಮೂಲಕ ಅದಕ್ಕೆ ನೆಟ್‌ವರ್ಕ್ ಸಂಪರ್ಕಿಸುವ ಉಪಕರಣ ಟವರ್ ಮೇಲೆ ನಿರ್ಮಿಸುವುದರ ಬದಲು ಇದನ್ನು ಎಳೆದಿಡಲು ಕಾರಣವೇನು ಎನ್ನುವುದು ಸಂಬಂಧಿಸಿದ ಇಲಾಖೆಯವರೇ ಉತ್ತರಿಸಬೇಕಾಗಿದೆ.

ಅಂದಿನ ಸಂಸದ ಅನಂತಕುಮಾರ ಹೆಗಡೆ ನೆಟ್‌ವರ್ಕ್ ಸಮಸ್ಯೆಗಳಿರುವ ಗ್ರಾಮಗಳನ್ನು ಗುರುತಿಸಿ ಕೇಂದ್ರ ಸರಕಾರದ ಗಮನಕ್ಕೆ ತಂದಿದ್ದರು. ಅದಕ್ಕೆ ಸ್ಪಂದಿಸಿದ ಕೇಂದ್ರ ಸರಕಾರ 196 ಗ್ರಾಮಗಳನ್ನು ಗುರುತಿಸಿ ಅಲ್ಲಿ ಟವರ್ ನಿರ್ಮಿಸಿತ್ತು. ಆದರೆ ಕೆಂದಿಗೆ ಗ್ರಾಮದಲ್ಲಿ ವಿಚಿತ್ರ ರೀತಿಯಲ್ಲಿ ಟವರ್ ನಿರ್ಮಿಸಿರುವುದು ನಿಜಕ್ಕೂ ಜನರನ್ನು ಅಚ್ಚರಿಗೊಳಿಸಿದೆ. ಈ ಭಾಗದಲ್ಲಿ ಮೊಬೈಲ್ ನೆಟ್‌ವರ್ಕ್ ಸಿಗದೇ ಜನರು ಪರಿತಪಿಸುವಂತಾಗಿದೆ. ಇನ್ನು ವಿದ್ಯಾರ್ಥಿಗಳಿಗೆ ಆನ್‌ಲೈನ್ ಅಧ್ಯಯನ, ಬ್ಯಾಂಕಿಂಗ್ ವ್ಯವಹಾರ ಹಾಗೂ ದೈನಂದಿನ ತುರ್ತು ಸಂಪರ್ಕಕ್ಕೆ ತೊಡಕಾಗಿದೆ. ಹೀಗಾಗಿ ಸಂಬಂಧಪಟ್ಟವರು ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

## ಮುರನಾಳದಲ್ಲಿ ಶಾಲಾ ಪ್ರಾರಂಭೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,2–ಸಮಿಪದ ಮುರನಾಳ ಪುನರ್ವಸತಿ ಕೇಂದ್ರದಲ್ಲಿರುವ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ಶಾಲಾ ಪ್ರಾರಂಭೋತ್ಸವನ್ನು ಅತ್ಯಂತ ವಿಜೃಂಬಣೆಯಿಂದ ಅರ್ಥ ಪೂರ್ಣವಾಗಿ ಆರಂಭಿಸಲಾಯಿತು.

ಈ ವರ್ಷದ ಶಿಕ್ಷಣದ ಧ್ಯೇಯ ವಾಕ್ಯದಂತೆ ಉತ್ತಮ ಕಲಿಕೆ, ಉಜ್ವಲ ಭವಿಷ್ಯದ ಆಶಯದಂತೆ ಕಲಿಕೆಗೆ ಸೂಕ್ತ ವಾತಾವರಣವನ್ನು ಕಲ್ಪಿಸಲು ಶಾಲೆಯನ್ನು ತಳಿರು ತೋರಣಗಳಿಂದ ಶೃಂಗರಿಸಿ ಚಿತ್ತಾಕರ್ಷವಾದ ರಂಗೋಲಿಯನ್ನು ಬಿಡಿಸಿ ಶಾಲೆಯನ್ನು ಮದುವಣಗಿತ್ತೆಯಂತೆ ಅಲಂಕರಿಸಲಾಗಿತ್ತು.

ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು, ಸರ್ವದಸದ್ಯರು, ಮುಖ್ಯ ಗುರುಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಸೇರಿ ಗ್ರಾಮದಲ್ಲಿ ಪ್ರಭಾತ ಪೇರಿ ನಡೆಸಿದರು. ಮುಖ್ಯವಾಗಿ ಇಲಾಖೆ ನೂತನವಾಗಿ ಅನುಷ್ಠಾನಗೊಳಿಸಿರುವ ದ್ವಿಭಾಷಾ ಭೋಧನೆಯ ಬಗ್ಗೆ ಸರ್ಕಾರದ ಸೌಲಭ್ಯಗಳ ಕುರಿತು ಪ್ರಚಾರ ಮಾಡಲಾಯಿತು.

ದಾಖಲಾತಿ ಆಂದೋಲನದ ಮೂಲಕ ಶಾಲೆಗೆ ದಾಖಲಾಗುವ ಎಲ್ಲ ಮಕ್ಕಳನ್ನು ಹೂಮಳೆ ಸುರಿಸುವ ಮೂಲಕ ಸ್ವಾಗತಿಸಿ, ಉಚಿತ ಪಠ್ಯ ಪುಸ್ತಕವನ್ನು ವಿತರಿಸಲಾಯಿತು. ಇದೇ ಸಂದರ್ಭದಲ್ಲಿ ಮುಖ್ಯ ಗುರು ಎಸ್.ಎಮ್.ಪಲ್ಲೇದ ಸ್ಕೂಲ್ ಬ್ಯಾಗ್, ನೋಟ್ ಬುಕ್, ಪೆನ್, ಪೆನ್ಸಿಲ್ ನ್ನು ನೀಡಿದರು.

ಶಾಲಾ ಪ್ರಾರಂಭೋತ್ಸವದ ಪ್ರಯುಕ್ತ ಎಲ್ಲ ಮಕ್ಕಳಿಗೂ ಪಾಲಕರಿಗೂ ಸಿಹಿ ಹಂಚಿ ಶಾಲಾ ಪ್ರಾರಂಭೋತ್ಸವನ್ನು ಅರ್ಥಪೂರ್ಣವಾಗಿ ಆಚರಿಸಿದರು.

## ಸಂಘರ್ಷದಿಂದ ನಾಯಕತ್ವದ ಶಿಖರದವರೆಗೆ: ಜಿಲ್ಲಾ ಗೊಂಡ ನೌಕರರ ಸಂಘದ ಅಧ್ಯಕ್ಷರಾಗಿ ನಿರಂಜಪ್ಪ ಪಾತ್ರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ : ಜಿಲ್ಲಾ ಗೊಂಡ ನೌಕರರ ಸಂಘದ ಅಧ್ಯಕ್ಷರಾಗಿ ಆಯ್ಕೆಯಾಗಿರುವ ನಿರಂಜಪ್ಪ ಪಾತ್ರೆ ಅವರ ಆಯ್ಕೆ ಕೇವಲ ಒಂದು ಸಂಘಟನೆಯ ಹುದ್ದೆಯಲ್ಲ, ಹೋರಾಟ, ತ್ಯಾಗ, ನಿಷ್ಠೆ ಮತ್ತು ಸೇವಾ ಮನೋಭಾವಕ್ಕೆ ದೊರೆತ ಗೌರವವಾಗಿದೆ.

ಶಿಕ್ಷಕರಾಗಿ ತಮ್ಮ ವೃತ್ತಿ ಜೀವನವನ್ನು ಆರಂಭಿಸಿದ ನಿರಂಜಪ್ಪ ಪಾತ್ರೆ ಅವರು ಹಲವು ವರ್ಷಗಳಿಂದ ಶಿಕ್ಷಣ ಕ್ಷೇತ್ರದಲ್ಲಿ ಪ್ರಾಮಾಣಿಕತೆ, ಶಿಸ್ತು ಮತ್ತು ಬದ್ಧತೆಯೊಂದಿಗೆ ಸೇವೆ ಸಲ್ಲಿಸಿದ್ದಾರೆ. ಶಿಕ್ಷಕರ ಹಕ್ಕುಗಳ ರಕ್ಷಣೆ, ಸಮಸ್ಯೆಗಳ ಪರಿಹಾರ ಮತ್ತು ಸಂಘಟನೆಯ ಬಲವರ್ಧನೆಗಾಗಿ ಅವರು ನಿರಂತರವಾಗಿ ಶ್ರಮಿಸಿದ್ದಾರೆ. ಇದರಿಂದ ಅವರು ಶಿಕ್ಷಕರ ವಲಯದಲ್ಲಿ ವಿಶ್ವಾಸಾರ್ಹ ನಾಯಕನಾಗಿ ಗುರುತಿಸಿಕೊಂಡಿದ್ದಾರೆ.

ಸಾಮಾನ್ಯ ಕುಟುಂಬದ ಹಿನ್ನೆಲೆಯಿಂದ ಬಂದ ಅವರು ಜೀವನದಲ್ಲಿ ಅನೇಕ ಕಷ್ಟ–ಸಂಕಷ್ಟಗಳನ್ನು ಎದುರಿಸಿದರೂ, ಎಂದಿಗೂ ಹೋರಾಟದ ಹಾದಿಯನ್ನು ತೊರೆದಿಲ್ಲ. ಪ್ರತಿಯೊಂದು ಸವಾಲನ್ನು ಆತ್ಮವಿಶ್ವಾಸದಿಂದ ಎದುರಿಸುತ್ತಾ, ತಮ್ಮ ತತ್ವ ಮತ್ತು ಸಿದ್ಧಾಂತಗಳಿಗೆ ಬದ್ಧರಾಗಿ ಸಾಗಿರುವುದು ಅವರ ವ್ಯಕ್ತಿತ್ವದ ವಿಶೇಷತೆಯಾಗಿದೆ.

ನಿರಂಜಪ್ಪ ಪಾತ್ರೆ ಅವರ ಸಂಘಟನಾ ಕೌಶಲ್ಯ, ಸರಳತೆ, ನಿಸ್ವಾರ್ಥ ಸೇವೆ ಹಾಗೂ ಎಲ್ಲರನ್ನು ಒಗ್ಗೂಡಿಸಿಕೊಂಡು ಸಾಗುವ ಗುಣದಿಂದ ವಿವಿಧ ವರ್ಗದ ನೌಕರರು ಮತ್ತು ಶಿಕ್ಷಕರು ಅವರ ಮೇಲೆ ಅಪಾರ ವಿಶ್ವಾಸ ಇಟ್ಟಿದ್ದಾರೆ. ಜಾತಿ, ಧರ್ಮ ಮತ್ತು ರಾಜಕೀಯ ಭೇದಗಳನ್ನು ಮೀರಿ ಅವರು ಗಳಿಸಿರುವ ಜನಪ್ರಿಯತೆ ಅವರ ನಾಯಕತ್ವದ ಸಾಮರ್ಥ್ಯಕ್ಕೆ ಸಾಕ್ಷಿಯಾಗಿದೆ.

ಇತ್ತೀಚೆಗೆ ನಡೆದ ಭಾಲ್ಕಿ ತಾಲೂಕು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಚುನಾವಣೆಯಲ್ಲಿ ಅವರ ನೇತೃತ್ವದ ತಂಡದ ಭರ್ಜರಿ ಗೆಲುವು, ನೌಕರ ಸಮುದಾಯದಲ್ಲಿ ಅವರ ಪ್ರಭಾವ ಮತ್ತು ವಿಶ್ವಾಸದ ಪ್ರತಿಬಿಂಬವಾಗಿತ್ತು. ಇದೀಗ ಜಿಲ್ಲಾ ಗೊಂಡ ನೌಕರರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾಗಿರುವುದು ಅವರ ಹೋರಾಟಮಯ ಪಯಣದ ಮತ್ತೊಂದು ಮಹತ್ವದ ಮೈಲಿಗಲ್ಲಾಗಿದೆ.

ಅವರ ಆಯ್ಕೆ ನೌಕರರ ಹಿತಾಸಕ್ತಿಗಳ ರಕ್ಷಣೆ, ಸಂಘಟನೆಯ ಬಲವರ್ಧನೆ ಹಾಗೂ ಸಮಾಜಮುಖಿ ಕಾರ್ಯಗಳಿಗೆ ಹೊಸ ಚೈತನ್ಯ ತುಂಬಲಿದೆ ಎಂಬ ವಿಶ್ವಾಸ ವ್ಯಕ್ತವಾಗುತ್ತಿದೆ. ಜಿಲ್ಲಾ ಗೊಂಡ ನೌಕರರ ಸಂಘವು ಅವರ ನೇತೃತ್ವದಲ್ಲಿ ಇನ್ನಷ್ಟು ಕ್ರಿಯಾಶೀಲವಾಗಿ ಬೆಳೆಯಲಿ ಹಾಗೂ ನೌಕರರ ಧ್ವನಿಯಾಗಿ ಕಾರ್ಯನಿರ್ವಹಿಸಲಿ ಎಂಬುದು ಎಲ್ಲರ ಆಶಯವಾಗಿದೆ.

ಹೋರಾಟವನ್ನು ಜೀವನದ ಮಾರ್ಗವನ್ನಾಗಿ, ಸೇವೆಯನ್ನು ಧ್ಯೇಯವನ್ನಾಗಿ ಮಾಡಿಕೊಂಡಿರುವ ನಿರಂಜಪ್ಪ ಪಾತ್ರೆ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು ಹಾಗೂ ಅವರ ಮುಂದಿನ ಸಾರ್ವಜನಿಕ ಜೀವನಕ್ಕೆ ಶುಭ ಹಾರೈಕೆಗಳು ಎಂದು ದತ್ತು ಕಾಟ್ಕರ್ ತಿಳಿಸಿದ್ದಾರೆ.

## ಕ್ಷೇತ್ರದಲ್ಲಿ ಮೂಲಭೂತ ಸೌಕರ್ಯಕ್ಕೆ ಹೆಚ್ಚು ಒತ್ತು ನೀಡಿರುವೆ



ಮಲ್ಲಮ್ಮ ನುಡಿ ವಾರ್ತೆ

ಬಸವನಬಾಗೇವಾಡಿ: ದೇವರಹಿಪ್ಪರಗಿ ಮತಕ್ಷೇತ್ರದ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು, ಶಿಕ್ಷಣ ಹಾಗೂ ಆರೋಗ್ಯ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳಿಗೆ ಹೆಚ್ಚಿನ ಆಧ್ಯತೆ ನೀಡುವುದರೊಂದಿಗೆ ಕ್ಷೇತ್ರದ ಜನತೆಗೆ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸುತ್ತಿರುವೆ ಎಂದು ದೇವರಹಿಪ್ಪರಗಿ ಮತಕ್ಷೇತ್ರದ ಶಾಸಕ ರಾಜುಗೌಡ ಪಾಟೀಲ ಹೇಳಿದರು.

ತಾಲೂಕಿನ ಅಗಸಬಾಳ ಗ್ರಾಮದಲ್ಲಿ ಮಂಗಳವಾರ ಪಿ.ಎಂ.ಎ.ಬಿ.ಎಚ್.ಆಯ್.ಎಂ ಯೋಜನೆಯ ಅನುದಾನದ ಅಡಿಯಲ್ಲಿ ನಿರ್ಮಿಸುತ್ತಿರುವ ಆಯುಷ್ಮಾನ್ ಆರೋಗ್ಯ ಮಂದಿರ ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಗ್ರಾಮದ ಜನತೆಗೆ ಸಾಂಕ್ರಾಮಿಕ ಹಾಗೂ ಅಸಾಂಕ್ರಾಮಿಕ ರೋಗಗಳಿಗೆ ತಪಾಸಣೆ ಹಾಗೂ ಸೂಕ್ತ ಚಿಕಿತ್ಸೆಗೆಂದು 65 ಲಕ್ಷ ರೂಗಳ ವೆಚ್ಚದಲ್ಲಿ ನಿಮ್ಮೂರಿನಲ್ಲಿ ಆರೋಗ್ಯ ಮಂದಿರ ನಿರ್ಮಾಣವಾಗುತ್ತಿದ್ದು. ಕ್ಷೇತ್ರದಲ್ಲಿ ದೇವಸ್ಥಾನ ಹಾಗೂ ರಸ್ತೆಗಳ ನಿರ್ಮಾಣಕ್ಕೂ ಹಂತ ಹಂತವಾಗಿ ಆಧ್ಯತೆ ಕೊಡುವೆ ಎಂದ ಶಾಸಕರು ಉತ್ತಮ ಕಟ್ಟಡಕ್ಕೆ ನಿರ್ಮಾಣಕ್ಕೆ ಸಾರ್ವಜನಿಕರ ಸಹಕಾರ ಅಗತ್ಯ ಎಂದರು. ಈ ಸಂದರ್ಭದಲ್ಲಿ ತಾಲೂಕಾ ಆರೋಗ್ಯಾಧಿಕಾರಿ ಡಾ. ಪ್ರಕಾಶ ಗೊಡಗುಂಡಕಿ, ಮಹೇಶ ಜಾಧವ, ರಾಜಶೇಖರ ಚಿಂಚೊಳ್ಳಿ, ತೋರಪ್ಪಗೌಡ ಪಾಟೀಲ, ಮುರುಗೇಶ ತಾಳಿಕೊಟಿ, ಚಂದು ಗುಂಡಾನವರ ಡಾ. ಪ್ರದೀಪ, ಸುಭಾಸ ಹುನಗುಂದ, ಮಲ್ಲಯ್ಯ ಶ್ರೀಗಳು, ಮಾದೇವಪ್ಪ ಸಂಪಂಜಿ, ಪುಂಡಪ್ಪ ಹಳೆಗೌಡರ, ಮಾದೇವಪ್ಪ ಸಣತಂಗಿ, ಹಣಮಂತ ಹಂಗೆ, ರುದ್ರಗೌಡ ಪಾಟೀಲ, ಹೀನಾ ಕೌಸರ ಸೇರಿದಂತೆ ಅನೇಕರು ಹಾಜರಿದ್ದರು.

## ಶಾಲಾ ಪ್ರಾರಂಭೋತ್ಸವ ಸಂಭ್ರಮ: ವಿದ್ಯಾರ್ಥಿಗಳಿಗೆ ಪುಷ್ಪವೃಷ್ಟಿಯೊಂದಿಗೆ ಸ್ವಾಗತ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ 2: ನಗರದ ಸರಸ್ವತಿ ಶಿಕ್ಷಣ ವಿಕಾಸ ಸಮಿತಿ (ರಿ) ಸಂಚಾಲಿತ ಸರಸ್ವತಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ಶಾಲಾ ಪ್ರಾರಂಭೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು. ಶಾಲೆಯ ಮುಖ್ಯ ದ್ವಾರದಲ್ಲಿ ಘೋಷವಾದ್ಯದೊಂದಿಗೆ ವಿದ್ಯಾರ್ಥಿಗಳಿಗೆ ಪುಷ್ಪವೃಷ್ಟಿ ಮಾಡಿ, ಆರತಿ ಬೆಳಗಿ ಆತ್ಮೀಯ ಸ್ವಾಗತ ಕೋರಲಾಯಿತು. ಶಾಲಾ ಆವರಣವನ್ನು ಪುಷ್ಪಗಳು ಹಾಗೂ ತಳಿರು–ತೋರಣಗಳಿಂದ ಅಲಂಕರಿಸಲಾಗಿದ್ದು, ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ವಿದ್ಯಾರಣ್ಯ ಪ್ರೌಢಶಾಲೆಯ ಮುಖ್ಯಗುರು ಶ್ರೀಮತಿ ಪ್ರತಿಭಾ ಚಾಮಾ ಅವರು ಮಾತನಾಡಿ, “ಉತ್ತಮ ಕಲಿಕೆ ಉತ್ತಮ ಭವಿಷ್ಯ” ಎಂಬ ಧ್ಯೇಯ ವಾಕ್ಯದ ಮಹತ್ವವನ್ನು ತಿಳಿಸಿದರು. ಶಾಲೆಯು ಕೇವಲ ಶಿಕ್ಷಣ ನೀಡುವುದಲ್ಲದೆ, ಸಂಸ್ಕೃತಿ, ಸಂಸ್ಕಾರ, ಶಿಸ್ತು, ಸಮಯಪಾಲನೆ ಹಾಗೂ ಏಕಾಗ್ರತೆಯಂತಹ ಜೀವನ ಮೌಲ್ಯಗಳನ್ನು ಬೆಳೆಸುವ ಕೇಂದ್ರವಾಗಿದೆ ಎಂದು ಹೇಳಿದರು. ಗುರುಹಿರಿಯರಿಗೆ ಗೌರವ ನೀಡುವುದು ಹಾಗೂ ಉತ್ತಮ ಅಭ್ಯಾಸಗಳನ್ನು ರೂಢಿಸಿಕೊಳ್ಳುವುದು ಯಶಸ್ಸಿನ ಮೆಟ್ಟಿಲುಗಳಾಗಿವೆ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸರಸ್ವತಿ ಶಿಕ್ಷಣ ವಿಕಾಸ ಸಮಿತಿ (ರಿ) ಅಧ್ಯಕ್ಷ ಪ್ರೊ.ಎಸ್.ಬಿ. ಸಜ್ಜನಶೆಟ್ಟಿ ಅವರು ಮಾತನಾಡಿ, ರೈತರಿಗೆ ಮುಂಗಾರು ಹೇಗೆ ಹೊಸ ವರ್ಷವೋ, ವಿದ್ಯಾರ್ಥಿಗಳಿಗೆ ಜೂನ್ ತಿಂಗಳು ಹೊಸ ವರ್ಷದ ಆರಂಭದಂತಿದೆ ಎಂದು ಹೇಳಿದರು. ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಶಾಲೆಯ ಪಾತ್ರ ಮಹತ್ವದ್ದಾಗಿದ್ದು, ಸ್ವಂತ ತಿಳುವಳಿಕೆ, ಹಿರಿಯರ ಮಾರ್ಗದರ್ಶನ ಮತ್ತು ಭಯಭಕ್ತಿಯಿಂದ ಜೀವನದಲ್ಲಿ ಯಶಸ್ಸು ಸಾಧಿಸಬಹುದು ಎಂದು ತಿಳಿಸಿದರು. ಶಿಸ್ತುಬದ್ಧ ಜೀವನದಿಂದ ಸಮಾಜದಲ್ಲಿ ಗೌರವಯುತ ಸ್ಥಾನ ಗಳಿಸಬಹುದು ಎಂದು ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಿದರು. ವೇದಿಕೆಯಲ್ಲಿ ಪ್ರೊ.. ಎಸ್.ಬಿ. ಸಜ್ಜನಶೆಟ್ಟಿ, ಶ್ರೀಮತಿ ಪ್ರತಿಭಾ ಚಾಮಾ ಹಾಗೂ ಶಾಲೆಯ ಮುಖ್ಯಗುರು ಶ್ರೀಮತಿ ಊರ್ಮಿಳಾ ಬಕ್ಷಿ ಉಪಸ್ಥಿತರಿದ್ದರು. ಶಿಕ್ಷಕ ನಾಮದೇವ ರಾಠೋಡ್ ಸ್ವಾಗತ ಹಾಗೂ ಪರಿಚಯ ನೆರವೇರಿಸಿದರು. ರೇಖಾ ಸಾಳೆ ವೈಯಕ್ತಿಕ ಗೀತೆ ಹಾಡಿದರು. ಶ್ರೀದೇವಿ ಮಾಣಿಕರಾವ ವಂದನಾರ್ಪಣೆ ಮಾಡಿದರು. ವೈಶಾಲಿ ಮಣಗೀರೆ ಕಾರ್ಯಕ್ರಮ ನಿರೂಪಿಸಿದರು. ಸಾಮೂಹಿಕ ಶಾಂತಿಮಂತ್ರದೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿತು.

## ಮಂಜುನಾಥ ಸುಣಗಾರರನ್ನು ವಿಧಾನಪರಿಷತ್ತಿಗೆ ಆಯ್ಕೆ ಮಾಡುವಂತೆ ಮೀನುಗಾರರ ಸಮುದಾಯದ ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,:ಕೆಪಿಸಿಸಿ ಮೀನುಗಾರರ ವಿಭಾಗಕ್ಕೆ ಹೊಸ ಚೈತನ್ಯ ತುಂಬಿ, ರಾಜ್ಯದ ಮೀನುಗಾರರ ಸಮುದಾಯದ ಧ್ವನಿಯಾಗಿ ಕಾರ್ಯನಿರ್ವಹಿಸಿರುವ ಹಾಗೂ ಮೀನುಗಾರರ ಮಕ್ಕಳ ಶಿಕ್ಷಣ, ಉದ್ಯೋಗ ಮತ್ತು ಸಾಮಾಜಿಕ ಅಭಿವೃದ್ಧಿಗಾಗಿ ಹಲವು ಯೋಜನೆಗಳನ್ನು ರೂಪಿಸಿರುವ ಹಿರಿಯ ಕಾಂಗ್ರೆಸ್ ಮುಖಂಡ ಮಂಜುನಾಥ ಸುಣಗಾರ ಅವರನ್ನು ವಿಧಾನಪರಿಷತ್ ಸದಸ್ಯರಾಗಿ (ಎಂಎಲ್‌ಸಿ) ಆಯ್ಕೆ ಮಾಡಬೇಕು ಎಂದು ಬಳ್ಳಾರಿ ಜಿಲ್ಲೆಯ ಮೀನುಗಾರರ ಸಮುದಾಯ ಒತ್ತಾಯಿಸಿದೆ.

ಬಳ್ಳಾರಿಯ ಸಾಮಾಜಿಕ ಕಾರ್ಯಕರ್ತ ಹಾಗೂ ಮೀನುಗಾರರ ಸಮುದಾಯದ ಮುಖಂಡ ಆಧೀನಾರಾಯಣ ಎಂ ಗೋನಾಳ್, ಗಾದಿಲಿಂಗಪ್ಪ ಕೊರ್ಲಗುಂದಿ, ಮಸೀದಿಪುರ ಚಂದ್ರಶೇಖರ್, ಪ್ರಮೋದ್, ಆನಂದ, ಹಾಗೂ ಹೊಸಪೇಟೆ ಜಿಲ್ಲೆಯ ಮೀನುಗಾರರ ಸಮುದಾಯ ಅವರು ಈ ಕುರಿತು ಮಾತನಾಡಿ, ರಾಜ್ಯದ ಮೀನುಗಾರರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವಲ್ಲಿ ಮಂಜುನಾಥ ಸುಣಗಾರರು ನಿರಂತರವಾಗಿ ಶ್ರಮಿಸಿದ್ದಾರೆ ಎಂದು ಹೇಳಿದರು. ಮೀನುಗಾರರ ಕಲ್ಯಾಣ, ಮೀನುಗಾರಿಕೆ ಕ್ಷೇತ್ರದ ಅಭಿವೃದ್ಧಿ, ಯುವಜನರ ಸಬಲೀಕರಣ ಮತ್ತು ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣಕ್ಕಾಗಿ ಅವರು ಹಲವಾರು ಕಾರ್ಯಕ್ರಮಗಳನ್ನು ರೂಪಿಸಿ ಜಾರಿಗೆ ತರಲು ಮುಂದಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮೀನುಗಾರರ ಸಮುದಾಯದ ಹಿತಾಸಕ್ತಿಗಾಗಿ ಹೋರಾಟ ನಡೆಸಿರುವ ಮಂಜುನಾಥ ಸುಣಗಾರರಿಗೆ ವಿಧಾನಪರಿಷತ್ ಸದಸ್ಯಸ್ಥಾನ ನೀಡುವುದರಿಂದ ಸಮುದಾಯದ ಧ್ವನಿ ಇನ್ನಷ್ಟು ಪರಿಣಾಮಕಾರಿಯಾಗಿ ರಾಜ್ಯ ಮಟ್ಟದಲ್ಲಿ ಪ್ರತಿನಿಧಿಸಲ್ಪಡಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ಬಳ್ಳಾರಿ ಜಿಲ್ಲೆಯ ವಿವಿಧ ಭಾಗಗಳ ಮೀನುಗಾರರ ಮುಖಂಡರು ಮತ್ತು ಸಮುದಾಯದ ಸದಸ್ಯರು ಕೂಡ ಇದೇ ಬೇಡಿಕೆಯನ್ನು ವ್ಯಕ್ತಪಡಿಸಿದ್ದು, ಕಾಂಗ್ರೆಸ್ ಪಕ್ಷದ ನಾಯಕತ್ವವು ಮೀನುಗಾರರ ಸಮುದಾಯದ ಆಶಯವನ್ನು ಪರಿಗಣಿಸಿ ಮಂಜುನಾಥ ಸುಣಗಾರರಿಗೆ ವಿಧಾನಪರಿಷತ್ ಅವಕಾಶ ಕಲ್ಪಿಸಬೇಕು ಎಂದು ಮನವಿ ಮಾಡಿದ್ದಾರೆ.

ಮೀನುಗಾರರ ಸಮುದಾಯದ ಪ್ರತಿನಿಧಿಗಳು, "ಸಮುದಾಯದ ಅಭಿವೃದ್ಧಿ, ಶಿಕ್ಷಣ, ಉದ್ಯೋಗ ಹಾಗೂ ಸಾಮಾಜಿಕ ನ್ಯಾಯಕ್ಕಾಗಿ ನಿರಂತರವಾಗಿ ದುಡಿಯುತ್ತಿರುವ ಮಂಜುನಾಥ ಸುಣಗಾರರಿಗೆ ವಿಧಾನಪರಿಷತ್ ಸದಸ್ಯತ್ವ ನೀಡಿದರೆ ರಾಜ್ಯದ ಲಕ್ಷಾಂತರ ಮೀನುಗಾರ ಕುಟುಂಬಗಳಿಗೆ ನ್ಯಾಯ ಸಿಗಲಿದೆ" ಎಂದು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಬಳ್ಳಾರಿ ಜಿಲ್ಲೆಯ ಮೀನುಗಾರರ ಸಮುದಾಯವು ಒಗ್ಗಟ್ಟಾಗಿ ಮಂಜುನಾಥ ಸುಣಗಾರರನ್ನು ವಿಧಾನಪರಿಷತ್ತಿಗೆ ನಾಮನಿರ್ದೇಶನ ಅಥವಾ ಆಯ್ಕೆ ಮಾಡುವಂತೆ ರಾಜ್ಯ ಸರ್ಕಾರ ಹಾಗೂ ಕಾಂಗ್ರೆಸ್ ಹೈಕಮಾಂಡ್‌ಗೆ ಆಗ್ರಹಿಸಿದೆ.

## ಬ್ರಾಹ್ಮಣ ಮಹಾಸಭಾದ ವತಿಯಿಂದ ಪ್ರತಿಭಾ ಪುರಸ್ಕಾರ, ಸದಸ್ಯತ್ವ ಅಭಿಯಾನ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ವತಿಯಿಂದ ಸಮುದಾಯದ ಸಂಘಟನೆಗೆ ಒತ್ತು ಕೊಡಲಾಗುತ್ತಿದೆ. ಜಿಲ್ಲೆ, ತಾಲ್ಲೂಕು ಹಾಗೂ ಹೋಬಳಿ ಹಂತದಲ್ಲಿಯೂ ಸಂಘಟನೆ ಮಾಡಬೇಕು, ಸದಸತ್ವನೋಂದಣಿ ಅಭಿಯಾನ ಹೆಚ್ಚಿಸಬೇಕು' ಎಂದು ಮಹಾಸಭಾದ ರಾಜ್ಯಾಧ್ಯಕ್ಷ ಎಸ್. ರಘುನಾಥ ಹೇಳಿದರು.

ಇಲ್ಲಿನ ಕಿನ್ನಾಳ ರಸ್ತೆಯಲ್ಲಿರುವ ವಿಠ್ಠಲ ಕೃಷ್ಣ ವಾಣಿಜ್ಯ ಸಂಕೀರ್ಣ ಹಿಂಭಾಗದ ಸಭಾಂಗಣದಲ್ಲಿ ಶನಿವಾರ ನಡೆದ ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸದಸ್ಯತ್ವ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು 'ಸಮುದಾಯದ ಜನರ ಭಾವನೆಗಳಿಗೆ ಧಕ್ಕೆ ತರುವ ಘಟನೆಗಳು ನಡೆದರೆ ಹೋರಾಡಬೇಕು. ಚುನಾವಣೆಯ ಸಮಯದಲ್ಲಿ ಸ್ಪರ್ಧೆ–ಪ್ರತಿಸ್ಪರ್ಧೆ ಇದ್ದೇ ಇರುತ್ತದೆ. ಅದರ ಬಳಿಕ ಸಮಾಜದ ಎಲ್ಲರೂ ಸೇರಿ ಅಭಿವೃದ್ಧಿಗಾಗಿ ಕೆಲಸ ಮಾಡಬೇಕು. ರಾಜ್ಯದಲ್ಲಿ 90 ಸಾವಿರ ಜನರ ಸದಸ್ಯತ್ವ ಮಾಡಿಸಲಾಗಿದ್ದು, ಇದನ್ನು ಇನ್ನಷ್ಟು ಹೆಚ್ಚಿಸಬೇಕು' ಎಂದರು. ಮಹಾಸಭಾದ ಕೊಪ್ಪಳ ಜಿಲ್ಲಾ ಘಟಕ ಉತ್ತಮವಾಗಿ ಕೆಲಸ ಮಾಡುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ವೇಣುಗೋಪಾಲಚಾರ್ ಜಹಗೀರದಾರ 'ಜಿಲ್ಲೆಯಲ್ಲಿ ಐದು ವರ್ಷದಲ್ಲಿ ಐದು ಸಾವಿರಕ್ಕಿಂತಲೂ ಹೆಚ್ಚು ಸದಸ್ಯತ್ವ ಮಾಡಿಸುವ ಗುರಿ ಹೊಂದಲಾಗಿದ್ದು, ಈಗಾಗಲೇ ಮೂರೂವರೆ ಸಾವಿರ ಸದಸ್ಯತ್ವ ಮಾಡಿಸಲಾಗಿದೆ' ಎಂದು ಹೇಳಿದರು. ಪ್ರಭಾಕರ ಪಟವಾರಿ, ಅನನ್ಯಾ ದೇಸಾಯಿ ಅವರಿಂದ ಸಂಗೀತ ಕಾರ್ಯಕ್ರಮ ಜರುಗಿತು. ಸಮುದಾಯದ ವಿದ್ಯಾರ್ಥಿಗಳ ಓದಿಗೆ ಅನುಕೂಲಕ್ಕಾಗಿ ಮಹಾಸಭಾದ ವತಿಯಿಂದ ಆರ್ಥಿಕ ನೆರವು ಒದಗಿಸಲಾಯಿತು. ಮಹಾಸಭಾದ ಮಹಿಳಾ ಘಟಕಕ್ಕೆ ಸಾಕ್ಷಿ ಶ್ರೀಕಾಂತ್ ತಿಕೋಟಿಕರ ಅವರನ್ನು ಜಿಲ್ಲಾ ಸಂಚಾಲಕಿಯಾಗಿ ನೇಮಿಸಲಾಯಿತು.

ಮಹಾಸಭಾದ ಜಿಲ್ಲಾ ಚುನಾಯಿತ ಪ್ರತಿನಿಧಿ ಗುರುರಾಜ ಎನ್. ಜೋಶಿ, ರಾಜ್ಯ ಉಪಾಧ್ಯಕ್ಷ ಪ್ರಾಣೇಶ ಮಾದಿನೂರು, ರಾಜ್ಯ ಸಂಘಟನಾ ಕಾರ್ಯದರ್ಶಿ ಪ್ರಾಣೇಶ ಕುಲಕರ್ಣಿ, ರಾಜ್ಯ ಕಾರ್ಯಕಾರಿಣಿ ಸದಸ್ಯ ಹನುಮಂತರಾವ್ ಬಿ. ದೇಶಪಾಂಡೆ, ಜಿಲ್ಲಾ ಯುವ ಘಟಕದ ಸಂಚಾಲಕ ಪ್ರಶಾಂತ ಕುಲಕರ್ಣಿ, ಬ್ರಾಹ್ಮಣ ಸಮಾಜದ ಮಾಜಿ ಜಿಲ್ಲಾಧ್ಯಕ್ಷ ಡಾ. ಕೆ.ಜಿ. ಕುಲಕರ್ಣಿ, ಶಂಕರ ಸೇವಾ ಸಮಿತಿ ಅಧ್ಯಕ್ಷ ಡಿ.ವಿ. ಜೋಶಿ, ಬ್ರಾಹ್ಮಣ ಸದಾಚಾರ ಸದನದ ಅಧ್ಯಕ್ಷ ರಾಘವೇಂದ್ರ ನರಗುಂದ, ನಿಕಟಪೂರ್ವ ಜಿಲ್ಲಾ ಮಹಿಳಾ ಸಂಚಾಲಕಿ ವೈಷ್ಣವಿ ಹುಲಗಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಮುನಿಯಪ್ಪ, ಲಾಡ್, ನಾಗೇಂದ್ರಗೆ ಸಚಿವ ಸ್ಥಾನ ನೀಡಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅಧಿಕಾರ ಸ್ವೀಕರಿಸುತ್ತಿರುವ ಹಿನ್ನೆಲೆಯಲ್ಲಿ ಮಾಜಿ ಸಚಿವರಾದ ಕೆ.ಎಚ್. ಮುನಿಯಪ್ಪ, ಸಂತೋಷ್ ಎಸ್. ಲಾಡ್ ಹಾಗೂ ಬಿ. ನಾಗೇಂದ್ರ ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕು ಎಂದು ಲಿಡ್ಕರ್ ಅಧ್ಯಕ್ಷ ಮುಂಡ್ರಿಗಿ ನಾಗರಾಜ್ ಮನವಿ ಮಾಡಿದ್ದಾರೆ.

ಈ ಕುರಿತು ಸೋಮವಾರ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ದಲಿತ ಸಮುದಾಯದ ಪ್ರಭಾವಿ ನಾಯಕರು ಹಾಗೂ ಕರ್ನಾಟಕ ಮಾದರ ಮಹಾಸಭಾದ ರಾಜ್ಯಾಧ್ಯಕ್ಷರಾಗಿರುವ ಕೆ.ಎಚ್. ಮುನಿಯಪ್ಪ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ಹಾಗೆಯೇ, ಕಾರ್ಮಿಕ ಇಲಾಖೆಯ ಸಚಿವರಾಗಿ ಕಾರ್ಯನಿರ್ವಹಿಸಿದ್ದ ವೇಳೆ ಹಲವು ಜನಪರ ಯೋಜನೆಗಳನ್ನು ರೂಪಿಸಿ ಯಶಸ್ವಿಯಾಗಿ ಜಾರಿಗೊಳಿಸಿದ್ದ ಸಂತೋಷ್ ಎಸ್. ಲಾಡ್ ಅವರಿಗೂ ಸಂಪುಟದಲ್ಲಿ ಅವಕಾಶ ಕಲ್ಪಿಸಬೇಕು ಎಂದು ತಿಳಿಸಿದ್ದಾರೆ.

ಇದೇ ವೇಳೆ, ಮಾಜಿ ಸಚಿವ ಹಾಗೂ ಬಳ್ಳಾರಿ ಜಿಲ್ಲೆಯ ಹಿರಿಯ ಕಾಂಗ್ರೆಸ್ ಮುಖಂಡ ಬಿ. ನಾಗೇಂದ್ರ ಅವರಿಗೂ ಸಚಿವ ಸ್ಥಾನ ನೀಡುವ ಮೂಲಕ ಜಿಲ್ಲೆಗೆ ಸಮರ್ಪಕ ಪ್ರಾತಿನಿಧ್ಯ ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ.

ಈ ಮೂವರು ನಾಯಕರ ಅನುಭವ ಮತ್ತು ಸೇವೆಯನ್ನು ಪರಿಗಣಿಸಿ ಸಚಿವ ಸಂಪುಟದಲ್ಲಿ ಸ್ಥಾನ ನೀಡುವಂತೆ ಕಾಂಗ್ರೆಸ್ ಹೈಕಮಾಂಡ್ ಹಾಗೂ ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಮುಂಡ್ರಿಗಿ ನಾಗರಾಜ್ ಮನವಿ ಮಾಡಿದ್ದಾರೆ.

## ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.02–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–2 ರ ಫೀಡರ್ 11 ಮತ್ತು 12 ರ ವ್ಯಾಪ್ತಿಯಲ್ಲಿ ರಸ್ತೆ ಅಗಲೀಕರಣ ಕೆಲಸಕ್ಕೆ ಕಂಬಗಳ ಸ್ಥಳಾಂತರ ಕೆಲಸ ಕಾರ್ಯ ಕೈಗೊಳ್ಳುತ್ತಿರುವುರಿಂದ ಜೂ.03 ರಂದು ಬೆಳಿಗ್ಗೆ 10 ರಿಂದ ಸಂಜೆ 05 ಗಂಟೆಯವರೆಗೆ ನಗರದ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

ಎಫ್–11 ರ ರಾಘವೇಂದ್ರ ಕಾಲೋನಿ 2ನೇ ಹಂತ, ಅಯ್ಯಪ್ಪ ಸ್ವಾಮಿ ಕಾಲೋನಿ, ಇಂ–ಟೋರಿ ನಗರ, ಅನಂತಪುರ ರಸ್ತೆ, ಶೇಕ್ಷಾವಲಿ ದರ್ಗಾ, ತಾರಾನಾಥ ಆಸ್ಪತ್ರೆ ಮತ್ತು ಎಫ್–12 ರ ನಿಜಲಿಂಗಪ್ಪ ಕಾಲೋನಿ, ಲಲಿತಾ ಲೇಔಟ್, ಗೊಲ್ಲರ ನರಸಪ್ಪ ಕಾಲೋನಿ, ರಾಘವೇಂದ್ರ ಕಾಲೋನಿ 2ನೇ ಹಂತ, ದೀಪಕ್ ಕಾಲೋನಿ, ಕೆವಿಟಿ ನಗರ, ವೆಂಕಟೇಶ್ವರ ನಗರ, ಅನಂತಪುರ ರಸ್ತೆ, ಶೇಕ್ಷಾವಲಿ ದುರ್ಗಾ, ಕುಬೇರ ಲೇಔಟ್. ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಪಾಲಿಟೆಕ್ನಿಕ್ ಡಿಪ್ಲೋಮಾ ಪ್ರಥಮ ವರ್ಷ ಪ್ರವೇಶಾತಿಗೆ ಆಫ್ ಲೈನ್ ಅರ್ಜಿ ಆಹ್ವಾನ

ಬಳ್ಳಾರಿ,ಜೂ.02–ನಗರದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 2026–27ನೇ ಸಾಲಿಗೆ ಡಿಪ್ಲೋಮಾ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಕೋರ್ಸ್ ಪ್ರವೇಶಾತಿಗೆ ಆಫ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಕಾಲೇಜಿನಲ್ಲಿ ಪಡೆದುಕೊಂಡು ಭರ್ತಿ ಮಾಡಿದ ಅಗತ್ಯ ದಾಖಲೆಗಳೊಂದಿಗೆ ಅರ್ಜಿಗಳನ್ನು ಇದೇ ಪಾಲಿಟೆಕ್ನಿಕ್ ಕಾಲೇಜ್‌ನ ಪ್ರಾಂಶುಪಾಲರ ಕಚೇರಿಗೆ ಜೂನ್ 6 ಸಂಜೆ 05 ಗಂಟೆಯೊಳಗೆ ಸಲ್ಲಿಸಬಹುದು.

ಜೂನ್ 8 ರಂದು ಬೆಳಿಗ್ಗೆ 11 ಗಂಟೆಗೆ ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಿಸಲಿದ್ದು, ಜೂನ್ 9 ರ ಸಂಜೆ 04 ರ ವರೆಗೆ ತಿದ್ದುಪಡಿಗೆ ಅವಕಾಶ ನೀಡಲಾಗಿದೆ. ಜೂನ್ 10 ರಂದು ಸಂಜೆ 05 ಗಂಟೆಗೆ ಅಂತಿಮ ಮೆರಿಟ್ ಪಟ್ಟಿ ಪ್ರಕಟಿಸಲಾಗುವುದು. ಜೂನ್ 11 ರಿಂದ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಲಿದೆ. ಹೆಚ್ಚಿನ ಮಾಹಿತಿಗಾಗಿ ನಗರದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್ ನ ಪ್ರಾಚಾರ್ಯರ ಕಚೇರಿ ಅಥವಾ ದೂ.08392–294371 ಗೆ ಸಂಪರ್ಕಿಸಬಹುದು ಎಂದು ಸರ್ಕಾರಿ ಪಾಲಿಟೆಕ್ನಿಕ್ ನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗೋರುಂಡ ಪತ್ತೆ ಪ್ರಕರಣ: ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ಬಿಜೆಪಿ ಆರೋಪ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ನಗರದ ಕಪ್ಪಗಲ್ಲು ರಸ್ತೆಯಲ್ಲಿ ಇತ್ತೀಚೆಗೆ ಹಸುವಿನ ರುಂಡಗಳನ್ನು ಎಸೆದಿರುವ ಘಟನೆ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವುದಕ್ಕೆ ಉದಾಹರಣೆಯಾಗಿದೆ ಎಂದು ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಅನಿಲ್‌ಕುಮಾರ್ ಮೋಕಾ ಆರೋಪಿಸಿದರು.

ನಗರದ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಸಾರ್ವಜನಿಕರ ಶಾಂತಿ ಕದಡಿ, ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟುಮಾಡುವ ಉದ್ದೇಶದಿಂದ ಕಿಡಿಗೇಡಿಗಳು ಈ ಕೃತ್ಯ ಎಸಗಿದ್ದಾರೆ. ಇಂತಹ ಘಟನೆಗಳನ್ನು ತಡೆಯುವಲ್ಲಿ ಪೊಲೀಸ್ ಇಲಾಖೆ ಹಾಗೂ ಗುಪ್ತಚರ ವಿಭಾಗ ವಿಫಲವಾಗಿದೆ' ಎಂದು ದೂರಿದರು.

ಹಿಂದೂಗಳು ಹೆಚ್ಚಾಗಿ ವಾಸಿಸುವ 22ನೇ ವಾರ್ಡ್ ವ್ಯಾಪ್ತಿಯಲ್ಲಿ ಹಸುವಿನ ತಲೆಬುರುಡೆಗಳನ್ನು ಪ್ಲಾಸ್ಟಿಕ್ ಚೀಲದಲ್ಲಿ ತಂದು ಬಿಸಾಡಲಾಗಿತ್ತು. ಪ್ರಕರಣದ ಕುರಿತು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ ಬಳಿಕ ಅಧಿಕಾರಿಗಳು ಮರಣೋತ್ತರ ಪರೀಕ್ಷೆ ಪೂರ್ಣಗೊಳಿಸಿ ರುಂಡಗಳನ್ನು ಹಸ್ತಾಂತರಿಸುವುದಾಗಿ ತಿಳಿಸಿದ್ದರು. ಆದರೆ ಬಳಿಕ ಅವುಗಳನ್ನು ಸಾರ್ವಜನಿಕರಿಗೆ ನೀಡದೆ ಸ್ಮಶಾನಕ್ಕೆ ಸಾಗಿಸಲು ಯತ್ನಿಸಿದ ಕ್ರಮ ಜನರ ಅಸಮಾಧಾನಕ್ಕೆ ಕಾರಣವಾಯಿತು ಎಂದು ಹೇಳಿದರು.

ನಗರ ಹಾಗೂ ಗ್ರಾಮಾಂತರ ಪ್ರದೇಶಗಳಿಂದ ನೂರಾರು ಹಸುಗಳು ನಾಪತ್ತೆಯಾಗಿರುವ ಬಗ್ಗೆ ಈಗಾಗಲೇ ಸಾಕ್ಷ್ಯಾಧಾರಗಳೊಂದಿಗೆ ಮಾಹಿತಿ ನೀಡಲಾಗಿದೆ. ಹಸುಗಳ ಕಳವು ಹಾಗೂ ಅಕ್ರಮ ಸಾಗಾಣಿಕೆಯನ್ನು ತಡೆಯಲು ಜಿಲ್ಲಾಡಳಿತ ಮತ್ತು ಸಂಬಂಧಿತ ಇಲಾಖೆಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕೌಲ್ ಬಜಾರ್ ಪ್ರದೇಶದ ಕಸಾಯಿಖಾನೆಯೊಂದರಲ್ಲಿ ಹಸುಗಳನ್ನು ಅಕ್ರಮವಾಗಿ ಇರಿಸಲಾಗಿದೆ ಎಂಬ ಆರೋಪದ ಕುರಿತು ದೂರು ನೀಡಿದ್ದರೂ, ನೈಜ ಆರೋಪಿಗಳ ವಿರುದ್ಧ ಕ್ರಮ ಕೈಗೊಳ್ಳುವಲ್ಲಿ ಪೊಲೀಸರು ವಿಫಲರಾಗಿದ್ದಾರೆ. ಬದಲಾಗಿ, ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಕೆಲ ಹಿಂದೂ ಸಂಘಟನೆಗಳ ಕಾರ್ಯಕರ್ತರು ಹಾಗೂ ಬಿಜೆಪಿ ಮುಖಂಡರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಗೋರುಂಡಗಳನ್ನು ಎಸೆದವರನ್ನು ಹಾಗೂ ಹಸುಗಳ ಕಳವೆಯಲ್ಲಿ ಭಾಗಿಯಾಗಿರುವವರನ್ನು ಶೀಘ್ರ ಪತ್ತೆಹಚ್ಚಿ ಬಂಧಿಸಬೇಕು. ಅಕ್ರಮ ಕಸಾಯಿಖಾನೆಗಳು ಮತ್ತು ಕಾನೂನುಬಾಹಿರ ಮಾಂಸ ಮಾರಾಟ ಚಟುವಟಿಕೆಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರೊಂದಿಗೆ ಸೇರಿ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಪಾಲಿಕೆ ವಿರೋಧ ಪಕ್ಷದ ನಾಯಕ ಶ್ರೀನಿವಾಸ್ ಮೊತ್ಕರ್, ಸ್ಥಾಯಿ ಸಮಿತಿ ಅಧ್ಯಕ್ಷ ಹನುಮಂತಪ್ಪ, ಪಾಲಿಕೆ ಸದಸ್ಯರಾದ ಹನುಮಂತ ಗುಡಿಗಂಟಿ, ಕೆ.ಎಸ್. ಅಶೋಕ್, ಬಿಜೆಪಿ ವಕ್ತಾರ ಬಿ.ಕೆ. ಸುಂದರ್ ಹಾಗೂ ಎಸ್. ಮಲ್ಲನಗೌಡ ಉಪಸ್ಥಿತರಿದ್ದರು.

## ಸಾರ್ವಜನಿಕರಿಂದ ಅಭಿಪ್ರಾಯಕ್ಕೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.02–ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಈ ಹಿಂದೆ ಪ್ರಕಟಿಸಿ, ಪ್ರಸ್ತುತ ಮಾರುಕಟ್ಟೆಯಲ್ಲಿ ಲಭ್ಯವಿಲ್ಲದ ಕೆಲವು ಅತ್ಯಂತ ಅಮೂಲ್ಯ ಹಾಗೂ ಪ್ರಮುಖ ಸಾಹಿತ್ಯಿಕ ಕೃತಿಗಳನ್ನು ಮರು ಮುದ್ರಣ ಮಾಡಲು ಬೃಹತ್ ಯೋಜನೆಯೊಂದನ್ನು ಸಿದ್ಧಪಡಿಸಿದೆ. ಈ ಮಹತ್ವದ ಯೋಜನೆಗಾಗಿ ಇಲಾಖೆಯು ಈಗಾಗಲೇ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾರಂಭಿಸಿದೆ.

ಇಲಾಖೆಯು ಮರು ಮುದ್ರಿಸಲಿರುವ ಕೃತಿಗಳ ಆಯ್ಕೆಗೆ ಸಂಬಂಧಿಸಿದಂತೆ ಕೇವಲ ಆಡಳಿತಾತ್ಮಕ ನಿರ್ಧಾರ ಕೈಗೊಳ್ಳದೆ, ಸಾರ್ವಜನಿಕರು, ಓದುಗರು ಹಾಗೂ ಸಾಹಿತ್ಯಾಸಕ್ತರ ಪಾಲ್ಗೊಳ್ಳುವಿಕೆಗೆ ಮುಕ್ತ ಅವಕಾಶ ನೀಡಿದೆ. ಸಾಹಿತ್ಯಾಸಕ್ತರಿಂದ ನೇರವಾಗಿ ಕೋರಿಕೆ ಮತ್ತು ಉಪಯುಕ್ತ ಅಭಿಪ್ರಾಯಗಳನ್ನು ಪಡೆದು ಕೃತಿಗಳನ್ನು ಮರು ಮುದ್ರಣ ಮಾಡಲು ನಿರ್ಧರಿಸಲಾಗಿದೆ.

***ಅಭಿಪ್ರಾಯ ಸಲ್ಲಿಸುವುದು ಹೇಗೆ?***

ಯಾವ ಕೃತಿಗಳು ಮರು ಮುದ್ರಣಗೊಳ್ಳಬೇಕು ಎಂಬ ಬಗ್ಗೆ ಸಾಹಿತ್ಯಾಸಕ್ತರು ಹಾಗೂ ಸಾರ್ವಜನಿಕರು ತಮ್ಮ ಅನಿಸಿಕೆ, ಸಲಹೆ ಮತ್ತು ಕೋರಿಕೆಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್ ಆದ ಇಚಿಟಿಟಿಚಿಜಭುಡು. ಇಚಿಡಿಟಚಿಣಚಿಞಚಿ.ರಠತ.ಟಿ ಗೆ ಭೇಟಿ ನೀಡುವ ಮೂಲಕ ಆನ್‌ಲೈನ್‌ನಲ್ಲಿ ದಾಖಲಿಸಬಹುದಾಗಿದೆ.

ಸಾರ್ವಜನಿಕರು ತಮ್ಮ ನೆಚ್ಚಿನ ಕೃತಿಗಳ ಮರು ಮುದ್ರಣಕ್ಕಾಗಿ ವೆಬ್‌ಸೈಟ್ ಮೂಲಕ ಹೆಚ್ಚಿನ ಸಂಖ್ಯೆಯಲ್ಲಿ ಅಭಿಪ್ರಾಯ ಹಂಚಿಕೊಳ್ಳಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಆಟದ ಸಾಮಗ್ರಿಗಳು ಕಳುವು

ಭಾಲ್ಕಿ:ಜೂ.2:ತಾಲ್ಲೂಕಿನ ಹಾಲಹಳ್ಳಿ (ಕೆ) ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಕೋಣೆಯೊಂದರ ಬಾಗಿಲು, ಕಿಟಕಿ ಮುರಿದ ಕಳ್ಳರು ಆಟದ ಸಾಮಗ್ರಿಗಳನ್ನು ಕಳವು ಮಾಡಿದ ಘಟನೆ ಭಾನುವಾರ ನಡೆದಿದೆ.

## ಬಳ್ಳಾರಿ ಜಿಲ್ಲೆಯನ್ನು ಬಾಲಕಾರ್ಮಿಕ ಮುಕ್ತಗೊಳಿಸಲು ಹಠಾತ್ ದಾಳಿ ಹಾಗೂ ಕಟ್ಟುನಿಟ್ಟಿನ ಕ್ರಮ ಜಾರಿಗೊಳಿಸಲು ಡಿಸಿ ನಾಗೇಂದ್ರ ಪ್ರಸಾದ್.ಕೆ ಸೂಚನೆ



ಬಳ್ಳಾರಿ,ಜೂ.02–ಜಿಲ್ಲೆಯಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ಬೇರುಸಹಿತ ಕಿತ್ತೆಸೆಯಲು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ನಿರಂತರ ಹಠಾತ್ ದಾಳಿ ನಡೆಸುವ ಮೂಲಕ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಅಧಿಕಾರಿಗಳಿಗೆ ಸೂಚಿಸಿದರು. ಮಂಗಳವಾರ ನೂತನ ಜಿಲ್ಲಾಡಳಿತ ಭವನದ ವಿಡಿಯೋ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಟಾಸ್ಕ್ ಫೋರ್ಸ್ ಸಮಿತಿ ಸಭೆ ಹಾಗೂ ಜಿಲ್ಲಾ ಮಟ್ಟದ ಕಾರ್ಯಪಡೆ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಕಾರ್ಯಪಡೆಯು ತನ್ನ ಇಲಾಖೆಯ ನಿಯಮಿತ ಕೆಲಸಗಳ ಜೊತೆಗೆ, ಬಾಲಕಾರ್ಮಿಕ ವ್ಯವಸ್ಥೆಯ ವಿರುದ್ಧ ವ್ಯಾಪಕ ಜನಜಾಗೃತಿ ಮೂಡಿಸಬೇಕು ಎಂದು ಹೇಳಿದರು. ತಹಶೀಲ್ದಾರರ ಅಧ್ಯಕ್ಷತೆಯಲ್ಲಿರುವ ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿಗಳು ಮತ್ತಷ್ಟು ಪರಿಣಾಮಕಾರಿಯಾಗಿ ಕೆಲಸ ಮಾಡಬೇಕಿದೆ. ಕಳೆದ ಸಾಲಿನಲ್ಲಿ 33 ತಾಲೂಕು ಮಟ್ಟದ ಸಭೆಗಳನ್ನು ನಡೆಸಲಾಗಿದ್ದು, ಇನ್ಮುಂದೆ ತಾಲೂಕು ಮಟ್ಟದ ಸಭೆ ಹಾಗೂ ಹಠಾತ್ ದಾಳಿಗಳಲ್ಲಿ ತಾಲೂಕು ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸುವಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಮೌನೇಶ್.ಎ ಅವರು ಮಾತನಾಡಿ, ರಾಷ್ಟ್ರೀಯ ಮಕ್ಕಳ ಹಕ್ಕುಗಳ ಆಯೋಗದ ನಿರ್ದೇಶನದಂತೆ ಪ್ರತಿ ತಿಂಗಳು ತಾಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿಗಳ ಮೂಲಕ ಇಲ್ಲಿಯವರೆಗೆ (2025–26 ನೇ ಸಾಲಿನಲ್ಲಿ) 20 ಆಕಸ್ಮಿಕ ದಾಳಿಗಳನ್ನು ನಡೆಸಲಾಗಿದೆ. ಈ ಕಾರ್ಯಾಚರಣೆಯಲ್ಲಿ ಒಟ್ಟು 58 ಬಾಲಕಾರ್ಮಿಕರನ್ನು ರಕ್ಷಿಸಿ, ಮಕ್ಕಳ ಕಲ್ಯಾಣ ಸಮಿತಿ ಮತ್ತು ಪೋಷಕರ ವಶಕ್ಕೆ ಒಪ್ಪಿಸಲಾಗಿದೆ. ಮಕ್ಕಳನ್ನು ದುಡಿಸಿಕೊಳ್ಳುತ್ತಿದ್ದ ಮಾಲೀಕರ ವಿರುದ್ಧ ವಿವಿಧ ಪೊಲೀಸ್ ಠಾಣೆಗಳಲ್ಲಿ 31 ಎಫ್.ಐ.ಆರ್ ದಾಖಲಿಸಲಾಗಿದ್ದು, ಕರಪತ್ರಗಳ ಮೂಲಕ ಕಟ್ಟುನಿಟ್ಟಿನ ಎಚ್ಚರಿಕೆ ನೀಡಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು. ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ನಿರಂತರವಾಗಿ ನಡೆಯುವ ಆಕಸ್ಮಿಕ ದಾಳಿಗಳ ಸಂದರ್ಭದಲ್ಲಿ ರಕ್ಷಿಸಲಾಗುವ ಬಾಲಕಾರ್ಮಿಕರನ್ನು ಮಕ್ಕಳ ಕಲ್ಯಾಣ ಸಮಿತಿಯ (ಸಿಡಬ್ಲ್ಯೂಸಿ) ಮುಂದೆ ಹಾಜರುಪಡಿಸಲು ಹಾಗೂ ಅವರನ್ನು ಮುಖ್ಯವಾಹಿನಿ ಶಾಲೆಗಳಿಗೆ ದಾಖಲಿಸಲು ವಾಹನದ ಅವಶ್ಯಕತೆ ಇದ್ದು, ದಾಳಿ ಮತ್ತು ರಕ್ಷಣಾ ಕಾರ್ಯಗಳಿಗಾಗಿ ಪ್ರತ್ಯೇಕ ವಾಹನವನ್ನು ಒದಗಿಸುವ ಕುರಿತು ಸಭೆಗೆ ತಿಳಿಸಿದರು. ಸಮೀಕ್ಷೆ ಹಾಗೂ ಮಾಸಿಕ ಆಕಸ್ಮಿಕ ದಾಳಿಗಳ ಮೂಲಕ ಗುರುತಿಸಲ್ಪಡುವ ಮಕ್ಕಳಿಗೆ ತಾತ್ಕಾಲಿಕವಾಗಿ ವಿಶೇಷ ತರಬೇತಿ ನೀಡಿ, ಅವರ ಕಲಿಕಾ ಮಟ್ಟವನ್ನು ಸುಧಾರಿಸಿದ ನಂತರ ಮುಖ್ಯವಾಹಿನಿ ಶಾಲೆಗಳಿಗೆ ಸೇರಿಸಲು ಯೋಜಿಸಲಾಗಿದೆ. ಇದಕ್ಕಾಗಿ ಕೆ.ಎಂ.ಇ.ಆರ್.ಸಿ ಅಡಿಯಲ್ಲಿ ಈಗಾಗಲೇ ಅನುಮೋದನೆ ಪಡೆದಿರುವ ಬಾಲಕಾರ್ಮಿಕರ ವಿಶೇಷ ತರಬೇತಿ ಕೇಂದ್ರವನ್ನು ಶೀಘ್ರದಲ್ಲೇ ಪ್ರಾರಂಭಿಸುವ ಕುರಿತು ಸಭೆಯಲ್ಲಿ ಪ್ರಸ್ತಾಪಿಸಿದರು.

***ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ:***

ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಅಧ್ಯಕ್ಷರೂ ಆದ ನಾಗೇಂದ್ರಪ್ರಸಾದ್.ಕೆ ಅವರು ಮಾತನಾಡಿ, ಇದೇ ಜೂನ್ 12 ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಜಂಟಿ ಸಹಯೋಗದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ 'ಅಂತರಾಷ್ಟ್ರೀಯ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ' ಕಾರ್ಯಕ್ರಮ ಆಯೋಜಿಸಲಾಗುತ್ತಿದ್ದು, ಇದಕ್ಕೂ ಶಾಲಾ ಮಕ್ಕಳಿಂದ ಜನಜಾಗೃತಿ ಜಾಥಾ ನಡೆಯಲಿದೆ. ಇದಕ್ಕೆ ಬೇಕಾದ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಹಾಗೂ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲೂ ಹಮ್ಮಿಕೊಳ್ಳಬೇಕು ಎಂದು ಹೇಳಿದರು. ಬಾಲಕಾರ್ಮಿಕ ಕಾಯ್ದೆ 1986ರ ಕಲಂ 17ರಡಿ ಕಂದಾಯ, ಪಂಚಾಯತ್ ರಾಜ್, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸೇರಿದಂತೆ ಒಟ್ಟು 11 ಇಲಾಖೆಗಳ ಅಧಿಕಾರಿಗಳಿಗೆ ಇನ್ಸ್‌ಪೆಕ್ಟರ್ ಅಧಿಕಾರ ನೀಡಲಾಗಿದೆ. ಈ ಅಧಿಕಾರಿಗಳು ತಾಲೂಕು ಮಟ್ಟದ ಟಾಸ್ಕ್ ಫೋರ್ಸ್ ಹಾಗೂ ಆಕಸ್ಮಿಕ ದಾಳಿಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ, ತಪ್ಪು ಮಾಡಿದವರ ವಿರುದ್ಧ ಮೊಕದ್ದಮೆ ಹೂಡುವಂತೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಬಾಲಕಾರ್ಮಿಕತೆಯಿಂದ ಮುಕ್ತಗೊಂಡು ಸರ್ಕಾರಿ ಶಾಲೆಗೆ ದಾಖಲಾದ ಬಡ ಮತ್ತು ವಲಸೆ ಕಾರ್ಮಿಕರ ಮಕ್ಕಳಿಗೆ ಮುಂದಿನ ವಿದ್ಯಾಭ್ಯಾಸಕ್ಕಾಗಿ ಎಸ್‌ಸಿ/ಎಸ್‌ಟಿ/ಬಿಸಿಎಂ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಲಿ ವಸತಿ ಸೌಲಭ್ಯ ಕಲ್ಪಿಸಬೇಕು ಎಂದು ಕಲ್ಯಾಣ ಇಲಾಖೆಗಳ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಸ್ಥಳೀಯ ಕಿರಾಣಿ ಅಂಗಡಿ ಹಾಗೂ ವಿವಿಧ ಉದ್ದಿಮೆಗಳ ಮಾಲೀಕರಿಗೆ ಬಾಲಕಾರ್ಮಿಕ (ನಿಷೇಧ ಹಾಗೂ ನಿಯಂತ್ರಣ) ತಿದ್ದುಪಡಿ ಕಾಯ್ದೆ ಮತ್ತು ಮಕ್ಕಳ ಹಕ್ಕುಗಳ ರಕ್ಷಣೆ ಕುರಿತು ವಿಶೇಷ ಕಾರ್ಯಾಗಾರ ಹಮ್ಮಿಕೊಳ್ಳಬೇಕು.

ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯನ್ನು 2025–26 ನೇ ಸಾಲಿಗೆ ಸಹಕಾರ ಸಂಘಗಳ ನೋಂದಣಿ ಕಾಯ್ದೆಯನ್ವಯ ನವೀಕರಿಸುವ ಕುರಿತು ಹಾಗೂ ಕಾರ್ಮಿಕ ಆಯುಕ್ತರ ನಿರ್ದೇಶನದಂತೆ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಯ ಜಾಗೃತಿ ಕಾರ್ಯಕ್ರಮಗಳಿಗಾಗಿ ಪ್ರಸಿದ್ಧ ಕಂಪನಿಗಳಿಂದ ಸಿ.ಎಸ್.ಆರ್ ಅನುದಾನ ಮತ್ತು ಗಣ್ಯ ವ್ಯಕ್ತಿಗಳಿಂದ ದೇಣಿಗೆ ಸಂಗ್ರಹ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷ್ಮೀ ಮೈದೂರು ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಎಲ್ಲಾ ತಾಲ್ಲೂಕು ತಹಶೀಲ್ದಾರರು ಹಾಜರಿದ್ದರು.

# ಬಡ ಮಕ್ಕಳ ತಂದೆ ತಾಯಿಯಾಗಿ ಸೇವೆ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಗ್ರಾಮೀಣ ಭಾಗದ ಬಡ ಮಕ್ಕಳ ತಂದೆ ತಾಯಿಯಾಗಿ ಪರಮ ಪೂಜ್ಯ ಡಾ.ಬಸವಲಿಂಗ ಪಟ್ಟದ್ದೇವರು ಸೇವೆ ಸಲ್ಲಿಸುತ್ತಿದ್ದಾರೆ ಎಂದು ನಗರದ ಜೆಎಂಎಫ್‌ಸಿ ನ್ಯಾಯಾಲಯದ ಹಿರಿಯ ಶ್ರೇಣಿ ನ್ಯಾಯಾಧೀಶ ರಾಜಶೇಖರ ಹರಸೂರ್ ಹೇಳಿದರು.

ನಗರದ ಹಿರೇಮಠ ಸಂಸ್ಥಾನದಲ್ಲಿ ಮಂಗಳವಾರ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಈ ಭಾಗದಲ್ಲಿ ಪರಮ ಪೂಜ್ಯರು ಬಡ ಮಕ್ಕಳ ಭವಿಷ್ಯದ ಬೆಳಕಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಬಡಮಕ್ಕಳಿಗೆ ಅನ್ನ, ಅಕ್ಷರ, ಆಶ್ರಯ ಕಲ್ಪಿಸಿ ದೇಶದ ಪ್ರಜ್ಞಾವಂತ ನಾಗರಿಕರನ್ನಾಗಿ ಬೆಳೆಸುತ್ತಿದ್ದಾರೆ.

ಈ ಭೂಮಿ ಮೇಲೆ ಸೂರ್ಯ, ಚಂದ್ರ ಇರುವ ವರೆಗೂ ಶ್ರೀಮಠದ ಸೇವೆ ಹೀಗೆ ಮುಂದುವರೆಯಲಿದೆ ಎಂದು ವಿಶ್ವಾಸ ವ್ಯಕ್ತ ಪಡಿಸಿದರು.

ಸಾನ್ನಿಧ್ಯ ವಹಿಸಿದ್ದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಸಮಾಜದಲ್ಲಿ ನ್ಯಾಯಾಧೀಶರ ಕೊಡುಗೆಯು ಅತ್ಯಮೂಲ್ಯ ಬಾಗಿದೆ. ಈ ಭಾಗಕ್ಕೆ ನೂತನ ನ್ಯಾಯಾಧೀಶರಾಗಿ ನೇಮಕ ಆಗಿರುವ ರಾಜಶೇಖರ ಹರಸೂರ ಅವರು ಉತ್ತಮ ಸೇವೆ ಸಲ್ಲಿಸಲಿ ಎಂದು ಆಶಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಅಧ್ಯಕ್ಷ ಶಶಿಧರ ಕೋಸಂಬೆ, ಸಂಸ್ಥೆಯ ಆಡಳಿತಾಧಿಕಾರಿ ಮೋಹನ ರೆಡ್ಡಿ, ನಿವೃತ್ತ ಪ್ರಾಚಾರ್ಯ ಅಶೋಕ ರಾಜೋಳೆ, ಹಿರಿಯ ಪತ್ರಕರ್ತ ವಿಜಯಕುಮಾರ ಪರ್ಮಾ ಸೇರಿದಂತೆ ಹಲವರು ಇದ್ದರು. ಮುಖ್ಯಗುರು ಬಾಬು ಬೆಲ್ದಾಳ ನಿರೂಪಿಸಿ, ವಂದಿಸಿದರು.

# ಎಸ್‌ಎಲ್‌ಎಓ ಹುದ್ದೆ ಭರ್ತಿ ಸೇರಿದಂತೆ ನಾಲ್ಕು ಬೇಡಿಕೆಗಳಿಗೆ ಕಾರಂಜ ಮುಳುಗಡೆ ಸಂತ್ರಸ್ತ ರೈತರ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಜೂ 2: ಬೀದರ ಜಿಲ್ಲೆಯಲ್ಲಿ ಖಾಲಿ ಇರುವ ವಿಶೇಷಭೂಸ್ವಾಧೀನ ಅಧಿಕಾರಿ ಹುದ್ದೆಗೆ ತಕ್ಷಣ ಹಿರಿಯ ಹಾಗೂ ಸಮರ್ಥ ಅಧಿಕಾರಿಯನ್ನು ನೇಮಕ ಮಾಡಬೇಕು, ಅಗತ್ಯ ಸಿಬ್ಬಂದಿಯನ್ನು ನಿಯೋಜಿಸಬೇಕು ಹಾಗೂ ಖಐಂಔ ಕಚೇರಿಯನ್ನು ಬೀದರ ನಗರದಲ್ಲೇ ಸ್ಥಾಪಿಸಬೇಕು ಎಂದು ಕಾರಂಜ ಮುಳುಗಡೆ ಸಂತ್ರಸ್ತರ ಹಿತ ರಕ್ಷಣಾ ಸಮಿತಿ ಜಿಲ್ಲಾಡಳಿತವನ್ನು ಒತ್ತಾಯಿಸಿದೆ.

ಈ ಕುರಿತು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದ ಮನವಿಯಲ್ಲಿ, ಕಳೆದ ಹಲವು ತಿಂಗಳುಗಳಿಂದ ಖಐಂಔ ಹುದ್ದೆ ಖಾಲಿ ಇರುವುದರಿಂದ ಜಿಲ್ಲೆಯ ನೂರಾರು ರೈತರು ಮತ್ತು ಭೂಸ್ವಾಧೀನ ಸಂತ್ರಸ್ತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ತಿಳಿಸಲಾಗಿದೆ. ಭೂಸ್ವಾಧೀನ ಪರಿಹಾರ, ಪ್ರಕರಣಗಳ ವಿಚಾರಣೆ, ದಾಖಲೆಗಳ ಪರಿಶೀಲನೆ ಹಾಗೂ ಪರಿಹಾರ ವಿತರಣೆಯಂತಹ ಹಲವು ಕಾರ್ಯಗಳು ಸ್ಥಗಿ–ತಗೊಂಡು ರೈತರು ಕಚೇರಿಯಿಂದ ಕಚೇರಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ದೂರಲಾಗಿದೆ. ಕಾರಂಜ ಜಲಾಶಯಕ್ಕಾಗಿ ಭೂಮಿ ನೀಡಿರುವ ರೈತರಿಗೆ ಬಾಕಿ ಇರುವ ಪರಿಹಾರ ಹಾಗೂ ಇತರ ನ್ಯಾಯಸಮ್ಮತ ಬೇಡಿಕೆಗಳ ಕುರಿತು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಅವರಿಗೆ ಮನವಿ ಸಲ್ಲಿಸಲಾಗಿದ್ದು, ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯೊಂದನ್ನು ರಚಿಸಿ ಸಮಸ್ಯೆಗಳನ್ನು ಪರಿಹರಿಸುವಂತೆ ರೈತರು ಆಗ್ರಹಿಸಿದ್ದಾರೆ. ಆದರೆ ಸಮಿತಿಯಲ್ಲಿ ವಿಶೇಷಭೂಸ್ವಾಧೀನ ಅಧಿಕಾರಿ ಹುದ್ದೆ ಅವರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಹುದ್ದೆ ಖಾಲಿ ಇರುವುದರಿಂದ ಸಮಸ್ಯೆಗಳ ಪರಿಹಾರ ವಿಳಂಬವಾಗುತ್ತಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.



ರೈತರು ಹಾಗೂ ಸಮಿತಿ ಸದಸ್ಯರು ಜಿಲ್ಲಾಡಳಿತದ ಮುಂದೆ ನಾಲ್ಕು ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟಿದ್ದಾರೆ. ಖಾಲಿ ಇರುವ ವಿಶೇಷ ಭೂಸ್ವಾಧೀನ ಅಧಿಕಾರಿ ಹುದ್ದೆಗೆ ತಕ್ಷಣ ದಕ್ಷ ಅಧಿಕಾರಿಯನ್ನು ನೇಮಕ ಮಾಡುವುದು, ಕಚೇರಿ ಕಾರ್ಯನಿರ್ವಹಣೆಗೆ ಕನಿಷ್ಠ ಇಬ್ಬರು ಸಹಾಯಕ ಅಧಿಕಾರಿಗಳನ್ನು ನಿಯೋಜಿಸುವುದು, ಪ್ರಸ್ತುತ ರೇಷ್ಮೆ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶೇಷ ಭೂಸ್ವಾಧೀನ ಅಧಿಕಾರಿ ಹುದ್ದೆ ಕಚೇರಿಯನ್ನು ಬೀದರ ನಗರದಲ್ಲಿ ಪ್ರತ್ಯೇಕ ಕಚೇರಿಯಾಗಿ ಸ್ಥಾಪಿಸುವುದು ಹಾಗೂ ಕಾರಂಜ ಮುಳುಗಡೆ ಸಂತ್ರಸ್ತ ರೈತರ ಸಮಸ್ಯೆಗಳ ಪರಿಹಾರಕ್ಕಾಗಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ವಿಶೇಷ ಸಮಿತಿಯನ್ನು ರಚಿಸುವಂತೆ ಒತ್ತಾಯಿಸಿದ್ದಾರೆ.

ಮನವಿಗೆ ಐದು ದಿನಗಳೊಳಗೆ ಸ್ಪಂದಿಸಿ ಅಗತ್ಯ ಕ್ರಮ ಕೈಗೊಳ್ಳದಿದ್ದಲ್ಲಿ, ಕಾರಂಜ ಮುಳುಗಡೆ ಸಂತ್ರಸ್ತ ರೈತರು ಹಾಗೂ ಹಿತ ರಕ್ಷಣಾ ಸಮಿತಿಯ ಸದಸ್ಯರು ಜಿಲ್ಲಾಧಿಕಾರಿಗಳ ಕಚೇರಿ ಎದುರು ನಿರಂತರ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಕಾರಂಜ ಮುಳುಗಡೆ ಸಂತ್ರಸ್ತರ ಹಿತರಕ್ಷಣಾ ಸಮಿತಿ ಅಧ್ಯಕ್ಷ ಚಂದ್ರಶೇಖರ ಪಾಟೀಲ್ ಹೊಚಕನಳ್ಳಿ, ರಾಜಪ್ಪ ಕೋಸಂ, ರಾಜಶೇಖರ ಕೇಣಿ (ರಂಜೋಳ), ವಿನಯ್ ಕುಮಾರ್ ಮಾಳಗೆ, ಮಹೇಶ ನೆಲವಾಲ, ಮಾದಪ್ಪ ಸಂಗೋಳಗಿ, ಲಕ್ಷ್ಮಿ ಮಾದಪ್ಪ, ನಾಗಶೆಟ್ಟಿ ಹಚ್ಚೆ ಸೇರಿದಂತೆ ನೂರಾರು ಸಂತ್ರಸ್ತ ರೈತರು ಉಪಸ್ಥಿತರಿದ್ದರು.

# ಪ್ರಮಾಣ ವಚನ ಸ್ವೀಕರಿಸುವ ಮುನ್ನ ಡಿಕೆಶಿ ರೈತರ ಸಾಲ ಮನ್ನಾ ಮಾಡಲಿ: ಮಲ್ಲಿಕಾರ್ಜುನ ಸ್ವಾಮಿ


ಮಲ್ಲಮ್ಮ ನುಡಿ ವಾರ್ತೆ ಬೀದರ

ಜೂ 02: ಜೂ.3 ರಂದು ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸುವ ಮುನ್ನ ರೈತರ ಸಾಲ ಮನ್ನಾ ಮಾಡಿ ರೈತರಿಗೆ ಶುಭಸುದ್ದಿ ನೀಡಲಿ ಎಂದು ಕರ್ನಾಟಕ ರಾಜ್ಯ ರೈತ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಸ್ವಾಮಿ ತಿಳಿಸಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಮಂಗಳವಾರ ಕರೆದ ಪತ್ರಿಕಾ ಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಕಬ್ಬು ಬೆಳೆಗಾರ ರೈತರಿಗೆ ಕಾರ್ಖಾನೆಯಿಂದ ಹಣ ಪಾವತಿ ಮಾಡದೇ ಇರುವುದರಿಂದ ಕೂಡಲೇ ಜಿಲ್ಲಾಡಳಿತ ಹಣ ಪಾವತಿ ಮಾಡಿಸಬೇಕು. ಜಿಲ್ಲೆಯಲ್ಲಿ ಮುಂಗಾರು–ಹಂಗಾಮು ಪ್ರಾರಂಭವಾಗಿದ್ದು, ರಸಗೊಬ್ಬರದ ಕೊರತೆ ಎದ್ದು ಕಾಣಿಸುತ್ತಿದೆ. ಇದರಿಂದ ರೈತರು ಆತಂಕಕ್ಕೆ ಒಳಗಾಗಿದ್ದಾರೆ. ಪಿ.ಕೆ.ಪಿ.ಎಸ್. ಗಳಲ್ಲಿ ಹಾಗೂ ಮಾರುಕಟ್ಟೆಯಲ್ಲಿ ಗೊಬ್ಬರ ಸಿಗುವ ಹಾಗೆ ಕ್ರಮಕೈಗೊಳ್ಳಬೇಕು. ದೇಶಕ್ಕೆ ಅನ್ನ ಬೆಳೆಯುವ ಅನ್ನದಾತರಿಗೆ ಎಫ್.ಐ.ಡಿ. ಹಾಗೂ ಇತರೆ ತಾಂತ್ರಿಕ ತೊಂದರೆ ಕೊಡದೇ ನೇರವಾಗಿ ವಿತರಣೆ ಮಾಡಲು ಅನುವು ಮಾಡಿಕೊಡಬೇಕು. ಏಕೆಂದರೆ, ಇದು ದೇಶದ ಆಹಾರ ಭದ್ರತೆ ವಿಷಯವಾಗಿರುವುದರಿಂದ ಇದನ್ನು ಗಂಭೀರವಾಗಿ ಪರಿಗಣಿಸಬೇಕು. ಜಿಲ್ಲೆಯ ರೈತರಿಗೆ ಕೃಷಿ ಚಟುವಟಿಕೆ ಕೈಗೊಳ್ಳಲು ಬ್ಯಾಂಕಿನ ಸಾಲದ ನೀತಿಯಲ್ಲಿ ಸಿವಿಲ್ ಸ್ಕೋರ್ ನೆಪದಲ್ಲಿ ರೈತರಿಗೆ ಸಾಲ ಸಿಗದೇ ಒದ್ದಾಡುತ್ತಿದ್ದಾರೆ. ಸರಳ ರೀತಿಯಲ್ಲಿ ಕೃಷಿ ಆಧಾರಿತ ಸಾಲವಾಗಿರುವುದರಿಂದ ರೈತರಿಗೆ ಸಿವಿಲ್ ಸ್ಕೋರ್ ವ್ಯವಸ್ಥೆಯಿಂದ ಹೊರಗಿಟ್ಟು ಸರಳ ಸಾಲ ವಿತರಣೆ ಮಾಡಬೇಕು. ಜಿಲ್ಲೆಯ ಜೀವನಾಡಿಯಾಗಿರುವ ಬಿ.ಎಸ್.ಎಸ್.ಕೆ. ಸಕ್ಕರೆ ಕಾರ್ಖಾನೆಯನ್ನು ಸರ್ಕಾರವು ರೈತರ ಹಾಗೂ ಕಾರ್ಮಿಕರ ಹಿತದೃಷ್ಟಿಯಿಂದ ಯಾವುದಾದರೂ ವ್ಯವಸ್ಥೆ ಮಾಡಿ ಬರುವ ಹಂಗಾಮಿಗೆ ಕಾರ್ಖಾನೆಗೆ ಪುನರ್ ಪ್ರಾರಂಭ ಮಾಡಲು ಕ್ರಮಕೈಗೊಳ್ಳಬೇಕು. ಇದಕ್ಕೆ ಜಿಲ್ಲೆಯ ಎಲ್ಲಾ ಶಾಸಕರು ಮತ್ತು ಸಂಸದರು ವಿಶೇಷ ಕಾಳಜಿ ವಹಿಸಿ ಜಿಲ್ಲೆಯ ರೈತರ ಹಿತದೃಷ್ಟಿಯಿಂದ ಪಕ್ಷಭೇದ ಮರೆತು ಒಂದಾಗಿ ಕೈಜೋಡಿಸಿ ಪ್ರಾರಂಭಿಸಬೇಕು. ಜೂ.3 ರಂದು ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸುತ್ತಿರುವ ಸನ್ಮಾನ್ಯ ಶ್ರೀ ಡಿ.ಕೆ. ಶಿವಕುಮಾರ ಅವರಿಗೆ ಬೀದರ ಜಿಲ್ಲೆಯ ರೈತರ ಪರವಾಗಿ ಅಭಿನಂದನೆ ಸಲ್ಲಿಸುತ್ತೇವೆ. ಮತ್ತು ಪ್ರಮಾನ ವಚನ ಸ್ವೀಕರಿಸಿದ ಮೊದಲನೇ ಆದ್ಯತೆ ರೈತರ ಸಂಪೂರ್ಣ ಸಾಲಮನ್ನಾ ಮಾಡಿ ಧೀಮಂತ ರೈತ ನಾಯಕನಾಗಿ ರೂಪಗೊಳ್ಳಬೇಕು ಎಂದು ಮಲ್ಲಿಕಾರ್ಜುನ ಸ್ವಾಮಿ ತಿಳಿಸಿದರು.



ಪತ್ರಿಕಾ ಗೋಷ್ಠಿಯಲ್ಲಿ ಪ್ರಮುಖ ರೈತ ಮುಖಂಡರಾದ ಬಾಬುರಾವ ಹೊನ್ನಾ, ಭಾರತೀಯ ಕಿಸಾನ ಮೋರ್ಚಾ ಬೀದರ ಇವರು ಮಾತನಾಡಿದರು. ಇದೇ ವೇಳೆ ಬಸವರಾಜ ಅಷ್ಟೂರ, ಶಿವರಾಜ ಪಾಟೀಲ ಅತಿವಾಳ, ವೀರಾರೆಡ್ಡಿ ಪಾಟೀಲ್, ಕೋಂಡಿಬಾರಾವ ಪಾಂಡ್ರೆ, ವಿಠಲರೆಡ್ಡಿ ಅಣದೂರು, ಧೂಳಪ್ಪಾ ಸೊರಳೆ, ಶಿವರಾಯ ಮುಧಾಳೆ, ಮಲ್ಲಿಕಾರ್ಜುನ ಬಿರಾದಾರ ಸಂಗಮ, ಬಾಬುರಾವ ಭೋಸ್ಥೆ ಭಾಲ್ಕಿ, ವಿಶ್ವನಾಥ ಧರಣೆ, ವಿಜಯಕುಮಾರ ಬಾವಗಿ, ನಜೀರ ಅಹ್ಮದ, ರಾಜಕುಮಾರ ಸ್ವಾಮಿ ಬೀದರ, ಶಫೀಯೋದ್ದೀನ್ ಸೇರಿದಂತೆ ಅನೇಕ ರೈತರು ಭಾಗವಹಿಸಿದರು

# ಅನಗತ್ಯ ವಸ್ತು ಪರಿಸರಕ್ಕೆ ಹಾನಿಕಾರಕ : ಪ್ರವೀಣ್ ಬೋಗಾರ್



• ಮಲ್ಲಮ್ಮ ನುಡಿ ವಾರ್ತೆಮುದಗಲ್

ತ್ಯಾಜ್ಯ ವಿಲೇವಾರಿ ಅಥವಾ ಅನಗತ್ಯ ವಸ್ತುಗಳಿಂದ ಪರಿಸರಕ್ಕೆ ಹಾನಿಯಾಗದಂತೆ ಜಾಗೃತರಾಗಬೇಕು ಎಂದು ಪುರಸಭೆ ಮುಖ್ಯ ಅಧಿಕಾರಿ ಪ್ರವೀಣ್ ಬೋಗಾರ್ ಸೋಮವಾರ ಹೇಳಿದರು.

ಪಟ್ಟಣದ ಪುರಸಭೆ ಸಭಾ ಭವನದಲ್ಲಿ ಹಮ್ಮಿಕೊಂಡಿದ್ದ ಮಹಿಳಾ ಸ್ವಸಹಾಯ ಗುಂಪು ಕಾರ್ಯಗಾರದಲ್ಲಿ ಮಾತನಾಡಿದ

ತ್ಯಾಜ್ಯ ವಿಲೇವಾರಿ ಮಾಡುವ ವಿಧಾನದ ಜಾಗೃತಿ ಮಹಿಳೆಯರಿಗೆ ಮೂಡಿಸಲಾಯಿತು. ತ್ಯಾಜ್ಯ ನಿರ್ವಹಣೆಯಲ್ಲಿ ಮಹಿಳೆಯರ ಪಾತ್ರ ಅತಿ ಮುಖ್ಯವಾದುದು. ಹಸಿಕಸ, ಒಣಕಸ ಹಾಗೂ ಅಪಾಯಕಾರಿವಸ್ತು ಮತ್ತು ಇ–ತ್ಯಾಜ್ಯ ಗಳನ್ನು ಬೇರ್ಪಡಿಸಬೇಕು. ಬೇರ್ಪಡಿಸಿದ ತ್ಯಾಜ್ಯ ವಸ್ತುಗಳನ್ನು ಪುರಸಭೆ ವಾಹನಗಳಿಗೆ ನೀಡಲು ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ, ಕಸದ ಸಂಗ್ರಹ, ಸಾಗಣೆ, ಸಂಸ್ಕರಣೆ, ಮರುಬಳಕೆ ಅಥವಾ ವಿಲೇವಾರಿ ಹಾಗು ತ್ಯಾಜ್ಯ ವಸ್ತುಗಳ ನಿರ್ವಹಣೆಯನ್ನು ತಾಜ್ಯ ನಿರ್ವಹಣೆಯಾಗಿದೆ. ನಾವು ಬಳಸಿ ವಸ್ತುಗಳ ಉಳಿದ ಭಾಗದ ಈ ವ್ಯರ್ಥ ವಸ್ತುಗಳು ಮನುಷ್ಯನ ಆರೋಗ್ಯ, ಪರಿಸರ ಸೌಂದರ್ಯದ ಮೇಲೆ ಕೆಟ್ಟ ಪ್ರಭಾವ ಬೀರುತ್ತವೆ. ಇದರ ಜೊತೆಯಲ್ಲಿ ಕಸದೊಳಗಿನ ರಸ ತೆಗೆಯಲು ಕೂಡಾ ಇವು ಸಂಪನ್ಮೂಲಗಳಾಗಿ ಬಹುಮುಖ್ಯ ಪಾತ್ರ ನಿರ್ವಹಿಸಬಹುದು. ತ್ಯಾಜ್ಯ ವಸ್ತು ಹಾಗೇ ಬಿಟ್ಟರೆ ಹವಾಮಾನ ಬದಲಾವಣೆಯಾಗಬಹುದು. ತ್ಯಾಜ್ಯ ವಸ್ತುಗಳನ್ನು ಸಾಮಾನ್ಯ ಕಸದೊಂದಿಗೆ ಬೆರೆಸದೆ ಪ್ರತ್ಯೇಕವಾಗಿ ಸಂಗ್ರಹಿಸಬೇಕು. ಒಣ ಮತ್ತು ಹಸಿ ತ್ಯಾಜ್ಯವನ್ನು ವಿಂಗಡಣೆ ಮಾಡಿ ಪುರಸಭೆಯ ವಾಹನಗಳಿಗೆ ನೀಡುವ ಮೂಲಕ ಸ್ವಚ್ಛ ಹಾಗೂ ಆರೋಗ್ಯಕರ ಪರಿಸರ ನಿರ್ಮಾಣಕ್ಕೆ ಸಾರ್ವಜನಿಕರು ಸಹಕರಿಸಬೇಕು, ಸ್ವಸಹಾಯ ಸಂಘ ಸದಸ್ಯರು ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಪುರಸಭೆ ನೈರ್ಮಲ್ಯ ಅಧಿಕಾರಿ ಆರೀಫ್ ಉನ್ನಿಸ್ಸಾ , ರಹಿಮತ್ ಉನ್ನಿಸ್ಸಾ , ಸಂಘಟನಾಧಿಕಾರಿ ಚೆನ್ನಮ್ಮ ದಳವಾಯಿ ಮಠ, ಸಂಪನ್ಮೂಲ ವ್ಯಕ್ತಿ ದೀಪಾ, ರೇಣುಕಾ, ಪುರಸಭೆ ಸಿಬ್ಬಂದಿ, ಮಹಿಳಾ ಸ್ವಸಹಾಯ ಸಂಘಗಳ ಪದಾಧಿಕಾರಿಗಳು ಸೇರಿದಂತೆ ಇತರರಿದ್ದರು.

# 19ರಂದು ರಾಜ್ಯಮಟ್ಟದ 2ನೇ ಗಡಿನಾಡು ಕನ್ನಡ ಜಾಗೃತಿ ಸಮಾವೇಶದ ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ ಬೀದರ

ಜೂ 02: ಕನ್ನಡ ಸೇನೆ ಕರ್ನಾಟಕ ವತಿಯಿಂದ ಇದೆ 19ರಂದು ನಡೆಯಲಿರುವ ರಾಜ್ಯಮಟ್ಟದ 2ನೇ ಗಡಿನಾಡು ಕನ್ನಡ ಜಾಗೃತಿ ಸಮಾವೇಶದ ಅಂಗವಾಗಿ ಪೂರ್ವಭಾವಿ ಸಭೆಯು ಬೀದರ ನಗರದ ಪ್ರತಿಷ್ಠಿತ ಹೋಟೆಲ್ ಗೇಟವೆ ನಲ್ಲಿ ಮಂಗಳವಾರ ಕನ್ನಡ ಸೇನೆ ಕರ್ನಾಟಕ ರಾಜ್ಯಾಧ್ಯಕ್ಷರಾದ ಕೆ ಆರ್ ಕುಮಾರ ಅವರ ನೇತೃತ್ವದಲ್ಲಿ ಯಶಸ್ವಿಯಾಗಿ ನಡೆಯಿತು.



ರಾಜ್ಯಮಟ್ಟದ 2ನೇ ಗಡಿನಾಡು ಕನ್ನಡ ಜಾಗೃತಿ ಸಮಾವೇಶ ಹೆಚ್ಚಿನ ಸಂಖ್ಯೆಯಲ್ಲಿ ಕನ್ನಡಾಭಿಮಾನಿಗಳು, ಸಂಘಟನೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಲಾಯಿತು

ರವಿ ಸ್ವಾಮಿ ನಿರ್ಣಾ
ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯ ಉಪಾಧ್ಯಕ್ಷರು

ಸಭೆಯಲ್ಲಿ ಸಮಾವೇಶದ ಸಿದ್ಧತೆಗಳು, ಕಾರ್ಯಕ್ರಮದ ರೂಪುರೇಷೆಗಳು ಹಾಗೂ ವಿವಿಧ ಸಮಿತಿಗಳ ಜವಾಬ್ದಾರಿಗಳ ಕುರಿತು ಚರ್ಚಿಸಲಾಯಿತು.

ಗಡಿನಾಡು ಪ್ರದೇಶಗಳಲ್ಲಿ ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯ ಸಂರಕ್ಷಣೆ ಹಾಗೂ ಅಭಿವೃದ್ಧಿಗೆ ಸಮಾವೇಶವು ಮಹತ್ವದ ವೇದಿಕೆಯಾಗಲಿದೆ ಎಂದು ಕನ್ನಡ ಸೇನೆ ಕರ್ನಾಟಕ ರಾಜ್ಯಾಧ್ಯಕ್ಷರಾದ ಕೆ ಆರ್ ಕುಮಾರ ಅಭಿಪ್ರಾಯಪಟ್ಟರು.

ಇದೆ ಸಂದರ್ಭದಲ್ಲಿ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ಜಿಲ್ಲಾಧ್ಯಕ್ಷರಾದ ಸುಭಾಷ ಕೆನಡೆ, ಬೀದರ್ ತಾಲೂಕ ಅಧ್ಯಕ್ಷರಾದ ರಾಜು ಮಂಗಲಪೇಟ್ , ಕಲ್ಯಾಣ ಕರ್ನಾಟಕ ಕಾರ್ಯದರ್ಶಿ ಡಾಕ್ಟರ್ ಮಾರುತಿ, ಜಿಲ್ಲಾ ಕಾರ್ಯದರ್ಶಿಯಾದ ಅಣೆಪ್ಪಾ ಸೇರಿಕಾರ್, ದಕ್ಷಿಣ ಕ್ಷೇತ್ರದ ಉಪಾಧ್ಯಕ್ಷರಾದ ನಾಗಶೆಟ್ಟಿ ಸಜ್ಜನಶೆಟ್ಟಿ, ಜಿಲ್ಲಾ ಸಂಘಟನೆಯ ಕಾರ್ಯದರ್ಶಿಯಾದ ಚನ್ನಬಸವ ಘಾಳೆ, ನಗರ ಅಧ್ಯಕ್ಷರಾದ ಶಿವಕುಮಾರ್ ಮರೂರಕರ್, ನಗರ ಉಪಾಧ್ಯಕ್ಷರಾದ ಸೂರ್ಯಕಾಂತ್ ರಾಂಪುರೆ, ಜಿಲ್ಲಾ ಉಪಾಧ್ಯಕ್ಷರು ಸೋಮನಾಥ ವರವಟ್ಟಿ, ಸಂಗೊಳಗಿ ಗ್ರಾಮ ಘಟಕದ ಅಧ್ಯಕ್ಷರಾದ ಲಕ್ಷ್ಮಣ್ ಅಲ್ಲೂರೆ, ಚಿಟಗುಪ್ಪಾ ತಾಲೂಕಿನ ಸಲಹೆಗಾರರಾದ ತಿಪ್ಪಣ್ಣ ಇಟಗಾ, ಜಿಲ್ಲಾ ಉಪಾಧ್ಯಕ್ಷರಾದ ಗುರುರೆಡ್ಡಿ, ಸಂಘಟನೆಯ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಪೂರ್ವಭಾವಿ ಸಭೆಯ ಸಮಾವೇಶವನ್ನು ಅರ್ಥಪೂರ್ಣವಾಗಿ ಹಾಗೂ ಅದ್ದೂರಿಯಾಗಿ ನಡೆಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವ ಕುರಿತು ತೀರ್ಮಾನಿಸಲಾಯಿತು.



ಪಿರಿಯಾಪಟ್ಟಣ : 2026 ನೇ ಸಾಲಿನ ಎಸ್ ಎಸ್ ಎಲ್ ಸಿ ಎಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆ ನೀಡುವ ಮೂಲಕ ಪುರಸ್ಕರಿಸಿ ಗೌರವಿಸಲಾಯಿತು.ದ. ಕನ್ನಡ ಜಿಲ್ಲೆಯ ಭಗವಾನ್ ಶ್ರೀ ಸತ್ಯ ಸಾಯಿ ವಿದ್ಯೆ ಕೇಂದ್ರ ಇಂಗ್ಲಿಷ್ ಮೀಡಿಯಂ (ಚೌಕ್ಕಡಿ) ಕಾಲೇಜ್ ಆವರಣದಲ್ಲಿ ಈ ಕಾರ್ಯಕ್ರಮ ನಡೆಯಿತು.ವಿದ್ಯಾರ್ಥಿಗಳಾದ ವರ್ಷ ನಾಗರಾಜ್ ಚಿತ್ರ. ಕೆಜೆ ಲವನ್. ಜಿ ಕುಶಲ್. ಬಿಡಿ ನಿತಿನ್. ಟಿಎ ಲಲಿತ್ ಆದಿತ್ಯ. ಎನ್ ಚರಣ್. ಗೌತಮ್. ಎಸ್ ಕೆ ಸಾತ್ವಿಕ್. ಎಸ್ ಆರ್ ಪ್ರೀತಮ್ ಮತ್ತು ಮುಖ್ಯೋಪಾಧ್ಯರು ಹಾಗೂ ಪೋಷಕರು ಹಾಜರಿದ್ದರು.

# ಅಫಜಲಪುರ (ಚೌಡಾಪುರ): ಖಾಲಿ ಉಳಿದಿರುವ ವಿವಿಧ ವೃತ್ತಿಗಳಿಗೆ ನೇರ ಪ್ರವೇಶ ಪಡೆಯಲು ಅವಕಾಶ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.02–ಅಫಜಲಪುರ (ಚೌಡಾಪುರ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಆಗಸ್ಟ್ 2026ರ ಶೈಕ್ಷಣಿಕ ಸಾಲಿಗೆ ಕೆಳಕಂಡ ವಿವಿಧ 12 ವೃತ್ತಿಗಳಲ್ಲಿ ಖಾಲಿ ಉಳಿದಿರುವ ಸ್ಥಾನಗಳಿಗೆ ನೇರ ಪ್ರವೇಶ ಪಡೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ಅಫಜಲಪುರ (ಚೌಡಾಪುರ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ. ಎರಡು ವರ್ಷದ ಎಲೆಕ್ಟ್ರಿಶಿಯನ್, ಎಲೆಕ್ಟ್ರಾನಿಕ್ ಮೆಕ್ಯಾನಿಕ್, ಫಿಟ್ಟರ್, ಟರ್ನರ್, ಎಂಎಂವಿ, ಟಿ.ಆರ್.ಆಂಡ್ ಎ.ಸಿ., ಹಾಗೂ ಟಾಟಾ ಉದ್ಯೋಗ ಯೋಜನೆಯಡಿ ಎರಡು ವರ್ಷದ ಮೆಕ್ಯಾನಿಕ್ ಎಲೆಕ್ಟ್ರಿಕ್ ವಹಿಕಲ್, ಸಿ.ಎನ್.ಸಿ. ಮಶಿನಿಂಗ್ ಟೆಕ್ನಿಶಿಯನ್, ಬೇಸಿಕ್ ಡಿಸೈನರ್ ಆಂಡ್ ವರ್ಚುವಲ್ ವೆರಿಫೈಯರ್, ಇಂಡಸ್ಟ್ರಿಯಲ್ ರೋಬೋಟಿಕ್ ಆಂಡ್ ಡಿಜಿಟಲ್ ಮ್ಯಾನುಫ್ಯಾಕ್ಚರಿಂಗ್, ಆರ್ಟಿಷಿಯನ್ ಯುಸಿಂಗ್ ಅಡ್ವಾನ್ಸ್‌ಡ್ ಟೂಲ್ಸ್ ಟೆಕ್ನಿಶಿಯನ್, ಮ್ಯಾನುಫ್ಯಾಕ್ಚರಿಂಗ್ ಪ್ರೋಸೆಸ್ ಕಂಟ್ರೋಲ್ ಅಟೋಮೇಶನ್ ಟೆಕ್ನಿಶಿಯನ್ ಒಟ್ಟು 12 ವೃತ್ತಿಗಳಲ್ಲಿ ಖಾಲಿ ಸ್ಥಾನಗಳು ಉಳಿದಿದ್ದು, ಈ ವೃತ್ತಿಗಳಿಗೆ ನೇರವಾಗಿ ಪ್ರವೇಶ ಪಡೆಯಬಹುದಾಗಿದೆ.

ಪ್ರವೇಶ ಬಯಸುವ ಅಭ್ಯರ್ಥಿಗಳು ಸಂಸ್ಥೆಗೆ ಕಚೇರಿ ವೇಳೆಯಲ್ಲಿ ಖುದ್ದಾಗಿ ಎಸ್.ಎಸ್.ಎಲ್.ಸಿ. ಪಾಸಾದ ಅಂಕಪಟ್ಟಿ, ಆಧಾರ್ ಕಾರ್ಡ್, ಆದಾಯ ಮತ್ತು ಜಾತಿ ಪ್ರಮಾಣ ಸಂಬಂಧಿಸಿದ ದಾಖಲೆಗಳೊಂದಿಗೆ ಇತ್ತೀಚಿನ 3 ಭಾವಚಿತ್ರಗಳೊಂದಿಗೆ ಕೂಡಲೇ ಸಂಪರ್ಕಿಬೇಕು.

ಹೆಚ್ಚಿನ ಮಾಹಿತಿಗಾಗಿ ಅಫಜಲಪುರ (ಚೌಡಾಪುರ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಹಾಗೂ ಮೊಬೈಲ್ ಸಂಖ್ಯೆ 9480360909, 7483673282, 9902107103, 9880541331 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಮಕ್ಕಳನ್ನು ವಿಶಿಷ್ಟರೀತಿಯಾಗಿ ಸ್ವಾಗತಿಸಿ ಶಾಲೆ ಪ್ರಾರಂಭಿಸಿದ ಶಿಕ್ಷಕರು



• ಮಲ್ಲಮ್ಮ ನುಡಿ ವಾರ್ತೆ ಕಲಘಟಗಿ

ತಾಲೂಕಿನಾದ್ಯಂತ ಶಾಲೆಗಳು ಪ್ರಾರಂಭವೊತ್ಸವವನ್ನು ವಿಬಿನ್ನ ಬಗೆಯಾಗಿ ಆಚರಿಸಿ ಮಕ್ಕಳನ್ನು ಶಿಕ್ಷಕರು ಸ್ವಾಗತಿಸಿದರು.

ತಾಲೂಕಿನ ಬೀರವಳ್ಳಿ ಗ್ರಾಮದಲ್ಲಿ ಶಾಲಾ ಮುಖ್ಯೋಪಾದ್ಯಯರಾದ ಸಿ.ಎಸ್ ಗ್ಯಾನಪ್ಪನವರ ಮತ್ತು ಸದಸ್ಯಮಂಡಳಿ ಹಾಗೂ ಸಹಶಿಕ್ಷಕರೊಡನೆ ತಂದೆತಾಯಿ ಜೊತೆ ಮಕ್ಕಳನ್ನು ಎತ್ತಿನ ಚಕ್ಕಡಿಯಲ್ಲಿಕುಳ್ಳಿರಿಸಿ ವಾದ್ಯ ಮೇಳದೊಂದಿಗೆ ಗ್ರಾಮದಲ್ಲಿ ಮೆರವಣಿಗೆ ಮೂಲಕ ಶಾಲೆಯಲ್ಲಿ ಸ್ವಾಗತಿಸಲಾಯಿತು.

# ಡಿಎಪಿ ಬದಲಿಗೆ ಸಂಯುಕ್ತ ರಸಗೊಬ್ಬರ ಬಳಕೆಗೆ ಸಲಹೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ರೈತರು ಡಿಎಪಿ ಬದಲಿಗೆ ಸಂಯುಕ್ತ ರಸಗೊಬ್ಬರ ಬಳಕೆ ಮಾಡುವಂತೆ ಕೊಪ್ಪಳ ಜಂಟಿ ಕೃಷಿ ನಿರ್ದೇಶಕರಾದ ಜಿ.ಡಿ ಕೃಷ್ಣಮೂರ್ತಿ ಅವರು ಸಲಹೆ ನೀಡಿದ್ದಾರೆ.

ಆಧುನಿಕ ಕೃಷಿಯಲ್ಲಿ ರೈತರು ಸಾವಯವ ಗೊಬ್ಬರಗಳ ಬಳಕೆಯನ್ನು ಕಡಿಮೆ ಮಾಡಿ, ಕೃತಕ ರಾಸಾಯನಿಕ ಗೊಬ್ಬರಗಳನ್ನು ಶಿಫಾರಸು ಪ್ರಮಾಣಕ್ಕಿಂತ ಹೆಚ್ಚಾಗಿ ಬಳಸುತ್ತಿರುವುದು ಕೃಷಿ ಉತ್ಪಾದನೆ ಹಾಗೂ ಪರಿಸರದ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತಿದೆ. ಜಿಲ್ಲೆಯಲ್ಲಿ ಮುಂಗಾರು ಮಳೆ ಆರಂಭವಾಗಿರುವ ಹಿನ್ನೆಲೆಯಲ್ಲಿ ಕೃಷಿ ಚಟುವಟಿಕೆಗಳು ಹಾಗೂ ಬಿತ್ತನೆ ಕಾರ್ಯಗಳು ವೇಗ ಪಡೆದಿವೆ. ರೈತರ ಅನುಕೂಲಕ್ಕಾಗಿ ಅಗತ್ಯ ಪ್ರಮಾಣದ ರಸಗೊಬ್ಬರಗಳನ್ನು ವಿವಿಧ ದಾಸ್ತಾನು ಮಳಿಗೆಗಳಲ್ಲಿ ಲಭ್ಯವಾಗುವಂತೆ ಮಾಡಲಾಗಿದೆ. ಆದರೆ ರೈತರು ಒಂದೇ ಬಗೆಯ ರಸಗೊಬ್ಬರಕ್ಕೆ ಅಥವಾ ಒಂದೇ ಸಂಸ್ಥೆಯ ಉತ್ಪನ್ನಗಳಿಗೆ ಆದ್ಯತೆ ನೀಡದೆ, ಪರ್ಯಾಯ ಗೊಬ್ಬರಗಳನ್ನು ಬಳಕೆ ಮಾಡಬೇಕು.

ಯೂರಿಯಾ ಹಾಗೂ ಡಿಎಪಿ ರಸಗೊಬ್ಬರಗಳಿಗೆ ಪರ್ಯಾಯವಾಗಿ ಸಂಯುಕ್ತ ರಸಗೊಬ್ಬರಗಳ ಬಳಕೆ ಹೆಚ್ಚು ಪರಿಣಾಮಕಾರಿ ಆಗಲಿದೆ. ಮೆಕ್ಕೆಜೋಳ, ಹೆಸರು, ತೊಗರಿ, ಸಜ್ಜೆ, ಭತ್ತ, ಕಬ್ಬು ಸೇರಿದಂತೆ ವಿವಿಧ ಬೆಳೆಗಳಿಗೆ 10:26:26, 12:32:16, 20:20:0:13, 19:19:19, 15:15:15 ಹಾಗೂ 17:17:17 ಅನುಪಾತದ ಸಂಯುಕ್ತ ರಸಗೊಬ್ಬರಗಳನ್ನು ಬಳಸುವಂತೆ ಶಿಫಾರಸು ಮಾಡಲಾಗಿದೆ. ಇದರೊಂದಿಗೆ ನ್ಯಾನೋ ಯೂ–ರಿಯಾ ಬಳಕೆ ಮಾಡುವುದರಿಂದ ಪೋಷಕಾಂಶಗಳ ಸಮತೋಲನ ಕಾಪಾಡಿಕೊಳ್ಳಲು ಸಾಧ್ಯವಾಗುತ್ತದೆ. ಸಂಯುಕ್ತ ರಸಗೊಬ್ಬರಗಳಲ್ಲಿ ಪೊಟ್ಯಾಷ್ ಹಾಗೂ ಗಂಧಕದ ಅಂಶಗಳು ಇರುವುದರಿಂದ ಬೆಳೆಗಳ ಬೇರುಗಳ ಬೆಳವಣಿಗೆ ಉತ್ತಮಗೊಳ್ಳುತ್ತದೆ. ಅಲ್ಲದೆ, ಕೀಟ ಹಾಗೂ ರೋಗ ನಿರೋಧಕ ಶಕ್ತಿ ಹೆಚ್ಚಾಗಿ, ಉತ್ತಮ ಇಳುವರಿ ಪಡೆಯಲು ಸಹಕಾರಿಯಾಗುತ್ತದೆ. ಈ ಹಿನ್ನೆಲೆಯಲ್ಲಿ ರೈತರು ಸಮತೋಲನ ರಸಗೊಬ್ಬರಗಳ ಬಳಕೆಗೆ ಆದ್ಯತೆ ನೀಡಬೇಕು.

ರೈತರು ಯೂರಿಯಾ ಖರೀದಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಎಫ್.ಐ.ಡಿ ಸಂಖ್ಯೆಯನ್ನು ಹೊಂದಿರಬೇಕು. ರಸಗೊಬ್ಬರ ಮಳಿಗೆಗಳಿಗೆ ತೆರಳುವಾಗ ಆಧಾರ್ ಕಾರ್ಡ್ ಪ್ರತಿಯನ್ನು ಹಾಗೂ ಒಟಿಪಿ ಸ್ವೀಕರಿಸಲು ಮೊಬೈಲ್ ಫೋನ್ ಅನ್ನು ಕಡ್ಡಾಯವಾಗಿ ಕೊಂಡೊಯ್ಯಬೇಕು ಎಂದು ಕೊಪ್ಪಳ ಜಿಲ್ಲಾ ಕೃಷಿ ಇಲಾಖೆಯ ಪ್ರಕಟಣೆ ತಿಳಿಸಿದೆ.

# ಖಾಸಮಠದ ಆವರಣದಲ್ಲಿ ಮಾಸಿಕ ಶರಣ ಸಂಗಮ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಪಟ್ಟಣದ ಖಾಸಮಠದ ಆವರಣದಲ್ಲಿ ಸೋಮವಾರ ಸಂಜೆ ಮಾಸಿಕ ಶರಣ ಸಂಗಮ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ನಿವೃತ್ತ ಕನ್ನಡ ಉಪನ್ಯಾಸಕರಾದ ಅಖಂಡೇಶ್ವರಯ್ಯ ಹಿರೇಮಠ ಅವರು ನಿಜಗುಣ ಶಿವಯೋಗಿಗಳ ಜೀವನ ಚರಿತ್ರೆ ಹಾಗೂ ಕನ್ನಡ ಸಾಹಿತ್ಯಕ್ಕೆ ಅವರು ನೀಡಿದ ಅಪೂರ್ವ ಕೊಡುಗೆಗಳ ಕುರಿತು ಉಪನ್ಯಾಸ ನೀಡಿದರು.



ಮೈಸೂರು ಜಿಲ್ಲೆಯ ಕೊಳ್ಳೇಗಾಲದ ರಾಜನಾಗಿದ್ದ ಚಂದ್ರಚೂಡಾಮಣಿ ಅರಸರು ವೈರಾಗ್ಯ ತಾಳಿ ನಿಜಗುಣ ಶಿವಯೋಗಿಗಳಾಗಿ ರೂಪಾಂತರಗೊಂಡು ಜ್ಞಾನ, ತತ್ವಚಿಂತನೆ ಮತ್ತು ಸಾಹಿತ್ಯ ಸೇವೆಯ ಮೂಲಕ ಕನ್ನಡ ನಾಡಿಗೆ ಅಮೂಲ್ಯ ಕೊಡುಗೆ ನೀಡಿದ್ದಾರೆ ಎಂದು ಅವರು ತಿಳಿಸಿದರು.

ನಿಜಗುಣ ಶಿವಯೋಗಿಗಳು ತಮ್ಮ ಗುರುಗಳ ಮಾರ್ಗದರ್ಶನದಲ್ಲಿ ವಿವೇಕಚಿಂತಾಮಣಿ, ಕೈವಲ್ಯ ಪದ್ಧತಿ, ಪರಮಾನುಭವ ಬೋಧೆ ಸೇರಿದಂತೆ ಹಲವು ಮಹತ್ವದ ಕೃತಿಗಳನ್ನು ರಚಿಸಿ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದಾರೆ. ಅವರ ಕೃತಿಗಳಲ್ಲಿ ಜ್ಞಾನ, ವೈರಾಗ್ಯ, ಮಾನವೀಯ ಮೌಲ್ಯಗಳು ಹಾಗೂ ಆಧ್ಯಾತ್ಮಿಕ ಚಿಂತನೆಗಳು ಪ್ರತಿಬಿಂಬಿತವಾಗಿವೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಮಠದ ಕಾರ್ಯದರ್ಶಿ ಮಲ್ಲಯ್ಯಸ್ವಾಮಿ ಬೆನಕನಳ್ಳಿ, ಭಕ್ತರಾದ ಆನಂದಶೇಖರ್ ಹಿರೇಮಠ್, ನಾರಾಯಣ ಕಂಬದ, ಸೇರಿದಂತೆ ಸಾರ್ವಜನಿಕರು ಭಾಗವಹಿಸಿ ಉಪನ್ಯಾಸವನ್ನು ಆಲಿಸಿದರು.

# ಜೂ.24 ರಂದು ಕಡಮೆ ಬಂಡಿಹಬ್ಬ



ಗೋಕರ್ಣ: ಇಲ್ಲಿಯ ಸಮೀಪದ ಕಡಮೆ ಗ್ರಾಮದ ಶ್ರೀ ಬೀರದೇವರ ಬಂಡಿಹಬ್ಬವು ಜೂ.24 ರಂದು ನಡೆಯಲಿದೆ. ಈ ಬಂಡಿಹಬ್ಬಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಶ್ರೀದೇವರ ಕೃಪೆಗೆ ಪಾತ್ರರಾಗಬೇಕೆಂದು ದೇವಸ್ಥಾನದ ಮೊಕ್ತೇಸರರಾದ ವಿವೇಕ ನಾಡಕರ್ಣಿ ಅವರು ಕೋರಿದ್ದಾರೆ.

## ಗ್ರಾಮೀಣ ಪತ್ರಕರ್ತರ ಬಸ್ ಪಾಸ್ ಷರತ್ತು ಸರಳೀಕರಣ : ಕೆಯುಡಬ್ಲ್ಯೂಜೆ ಸ್ವಾಗತ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್ ಯೋಜನೆ ಜಾರಿಗೆ ಅಡ್ಡಿಯಾಗಿದ್ದ ಕಠಿಣ ಷರತ್ತುಗಳನ್ನು ತೆಗೆದು, ನಿಯಮಾವಳಿ ಸರಳೀಕರಣ ಮಾಡಿ ಸರ್ಕಾರ ಆದೇಶ ಹೊರಡಿಸಿದ್ದು, ಕೆಯುಡಬ್ಲ್ಯೂಜೆ ಸ್ವಾಗತಿಸಿದೆ.

ಬೀದರನಲ್ಲಿ ನಡೆದ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ಒತ್ತಾಯಕ್ಕೆ ಸ್ಪಂಧಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅದೇ ವೇದಿಕೆಯಲ್ಲಿ ಕಠಿಣ ಷರತ್ತುಗಳನ್ನು ಕೈಬಿಡುವುದಾಗಿ ಭರವಸೆ ನೀಡಿದ್ದರು.

ಸರ್ಕಾರಕ್ಕೆ ಮೂರು ವರ್ಷ ತುಂಬಿದಾಗ ಕೆಯುಡಬ್ಲ್ಯೂಜೆ ಏರ್ಪಡಿಸಿದ್ದ ಸಂವಾದದಲ್ಲಿ ಭಾಗವಹಿಸಿದ್ದ ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರು ಈ ಬಗ್ಗೆ ವಾರದೊಳಗೆ ಕ್ರಮ ವಹಿಸುವುದಾಗಿ ತಿಳಿಸಿದ್ದರು. ಸಿಎಂ ಸೂಚನೆ ಮೇರೆಗೆ ಹೊಸ ಆದೇಶ ಹೊರಬಿದ್ದಿದೆ.

ಪೂರ್ಣಾವಧಿಗೆ ಸೀಮಿತವಾಗಿದ್ದನ್ನು ಬದಲಿಸಿ, ಅರೆಕಾಲಿಕ ವರದಿಗಾರರಿಗೂ ಯೋಜನೆ ವಿಸ್ತರಿಸಲಾಗಿದೆ. ಸೌಲಭ್ಯ ಪಡೆಯಲು 11 ತಿಂಗಳ ಲೈನೇಜ್ ಪಡೆದಿರುವ ಬ್ಯಾಂಕ್ ಸ್ಟೇಟ್ ಮೆಂಟ್ ಕಡ್ಡಾಯವಾಗಿದ್ದನ್ನು ಷರತ್ತಿನಲ್ಲಿ ಕೈಬಿಡಲಾಗಿದೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ಸತತ ಹೋರಾಟಕ್ಕೆ ಸ್ಪಂಧಿಸಿ ಬೇಡಿಕೆ ಈಡೇರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ (ಭಾವಿ ಸಿಎಂ) ಡಿ.ಕೆ.ಶಿವಕುಮಾರ್ ಅವರು ಈ ನಿಟ್ಟಿನಲ್ಲಿ ಸತತವಾಗಿ ಸ್ಪಂಧಿಸಿದ ಸಿಎಂ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರಿಗೆ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ಅಭಿನಂದನೆ ಸಲ್ಲಿಸಿದ್ದಾರೆ.

## ಮುಂಗಾರು ಬಿತ್ತನೆಗೆ ಸರ್ವ ಸಿದ್ಧತೆ ಮಾಡಿಟ್ಟುಕೊಳ್ಳಿ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.2: ಮುಂಗಾರು ಮಳೆ ಆರಂಭವಾಗುತ್ತಿದ್ದಂತೆಯೆ ಬಿತ್ತನೆ ಚಟುವಟಿಕೆಗಳು ಗರಿಗೆದರಲಿದ್ದು, ಕೃಷಿ ಸಂಬಂಧಿತ ಇಲಾಖೆಗಳು ಎಲ್ಲಾ ರೀತಿಯ ಪೂರ್ವ ಸರ್ವ ಸಿದ್ಧತೆ ಮಾಡಿಟ್ಟುಕೊಳ್ಳಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಸೂಚಿಸಿದರು.

ಮುಂಗಾರು ಮಳೆ ಅವಧಿ ಪೂರ್ವ ಸಿದ್ಧತೆ ಹಾಗೂ ಮುಂಜಾಗ್ರತಾ ಕ್ರಮಗಳ ಕುರಿತು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜೂನ್ ಮಾಹೆಯಲ್ಲಿ ಸುರಿದ ಮಳೆಯಿಂದ ತೋಟಗಾರಿಕೆ ಇಲಾಖೆಯಿಂದ ಮಾತ್ರ 45 ಹೆಕ್ಟೇರ್ ಬೆಳೆ ಹಾನಿ ವರದಿ ಸಲ್ಲಿಸಿದ್ದು, ಕೃಷಿ ಇಲಾಖೆಯಿಂದ ಇನ್ನು ಸಲ್ಲಿಸಿಲ್ಲ. ಸಂಬಂಧಿಸಿದ ಅಧಿಕಾರಿಗಳು ಸರ್ವೆ ಮಾಡಿ ವರದಿ ಸಲ್ಲಿಸಬೇಕೆಂದರು.

ಜಿಲ್ಲೆಯಲ್ಲಿ 11,634 ಮೆಟ್ರಿಕ್ ಟನ್ ಯೂರಿಯಾ, 9,583 ಮೆಟ್ರಿಕ್ ಟನ್ ಡಿ.ಎ.ಪಿ, ಕಾಂಪ್ಲೆಕ್ಸ್ –13,990 ಮೆ.ಟನ್ ಸೇರಿದಂತೆ 38,351 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನಿದ್ದು, ಈಗಾಗಲೆ ಇದರಲ್ಲಿ ಒಟ್ಟಾರೆ 5–6 ಸಾವಿರ ಮೆಟ್ರಿಕ್ ಟನ್ ರಸಗೊಬ್ಬರ ವಿತರಣೆ–ಯಾಗಿದೆ. ಇನ್ನು ಮಳೆಯಾಗಿಲ್ಲ, ಈಗಲೆ ಬಿತ್ತನೆ ಮಾಡುವುದು ಸರಿಯಲ್ಲ. ರೈತರಿಗೆ ಮಾಹಿತಿ ನೀಡಬೇಕು. ಜಿಲ್ಲೆಯಲ್ಲಿ ಬಿತ್ತನೆ ಬೀಜ, ರಸಗೊಬ್ಬರ ಯಾವುದೇ ಕೊರತೆ ಇಲ್ಲ. ತಹಶೀಲ್ದಾರರು ಮತ್ತು ಕೃಷಿ ಇಲಾಖೆಯ ಅಧಿಕಾರಿಗಳು ರೈತಾಪಿ ಜನರಿಗೆ ಅರಿವು ಮೂಡಿಸಬೇಕು ಎಂದರು. ಜಿಲ್ಲೆಯಾದ್ಯಂತ ಪ್ರವಾಹಕ್ಕೆ ತುತ್ತಾಗುವ ಸುಮಾರು 153 ಗ್ರಾಮಗಳನ್ನು ಗುರುತಿಸಲಾಗಿದೆ. ನೆರೆಯ ಮಹಾರಾಷ್ಟ್ರದ ಅಧಿಕಾರಿಗಳೊಂದಿಗೆ ಸತತ ಸಂಪರ್ಕ ಸಾಧಿಸಿ ಡ್ಯಾಂನಿಂದ ಕೆಳ ಹಂತದ ಪ್ರದೇಶಕ್ಕೆ ನೀರು ಬಿಡುಗಡೆ ಮುನ್ನವೆ ಮಾಹಿತಿ ಪಡೆದು ನದಿ ದಂಡೆಯ ಗ್ರಾಮಸ್ಥರಿಗೆ ಪ್ರಚೂರಪಡಿಸಬೇಕು. ಡಂಗೂರ ಸಾರಬೇಕು. ಸಿಡಿಲಿನಿಂದ ಸಾವು ತಪ್ಪಿಸಲು ಸಾರ್ವಜನಿಕರಿಗೆ ಅರಿವು ಮೂಡಿಸಬೇಕು. ಯಾವುದೇ ಕಾರಣಕ್ಕೂ ಪ್ರವಾಹ, ಮಳೆಯಿಂದ ಮಾನವ ಮತ್ತು ಪ್ರಾಣಿ ಹಾನಿಯಾಗದಂತೆ ಎಚ್ಚರ ವಹಿಸಬೇಕೆಂದರು. ಶಿಥಿಲಾವಸ್ಥೆಯಲ್ಲಿರುವ ಶಾಲಾ, ಅಂಗನವಾಡಿ, ಹಾಸ್ಟೆಲ್ ಕಟ್ಟಡಗಳನ್ನು ಕೂಡಲೆ ಗುರುತಿಸಿ ಸ್ಥಳಾಂತರಿಸಬೇಕು. ಮಳೆಯಿಂದ ಬೆಳೆ, ಆಸ್ತಿ–ಪಾಸ್ತಿ, ರಸ್ತೆ–ಸೇತುವೆ ಹಾನಿಯಾದಲ್ಲಿ 24 ಗಂಟೆ ಒಳಗೆ ಮಾಹಿತಿ ಸಲ್ಲಿಸಬೇಕು. ವಿಳಂಬಕ್ಕೆ ಇಲ್ಲಿ ಅವಕಾಶ ಇಲ್ಲ. ಮಳೆ ಹೆಚ್ಚಾದಲ್ಲಿ, ಪ್ರವಾಹದಿಂದ ರಸ್ತೆ, ಸೇತುವೆ ಸಂಪರ್ಕ ಕಡಿತವಾಗುವ ಸಾಧ್ಯತೆ ಇರುತ್ತದೆ. ಈಗಲೆ ಪರ್ಯಾಯ ಸಾರಿಗೆ ಸಂಪರ್ಕ ಗುರುತಿಸಬೇಕು ಎಂದ ಡಿ.ಸಿ. ಇಕ್ರಮ್ ಶರೀಫ್ ತಿಳಿಸಿದರು.

ಕಂಟ್ರೋಲ್ ರೂಂ ಸ್ಥಾಪಿಸಿ: ಹೆಚ್ಚಿನ ಮಳೆ ಮತ್ತು ನೆರ ಹಾವಳಿ ಪರಿಸ್ಥಿತಿ ಎದುರಾದಲ್ಲಿ ಪ್ರವಾಹದಿಂದ ಸಂತ್ರಸ್ತರು ಸಹಾಯಕ್ಕೆ ಇಂದಿನಿಂದಲೆ ತಾಲೂಕುವಾರು 24ಥ7 ಕಂಟ್ರೋಲ್ ರೂಂ ಸ್ಥಾಪಿಸಿ ಸಿಬ್ಬಂದಿಗಳನ್ನು ನಿಯೋಜಿಸಬೇಕು ಎಂದು ತಹಶೀಲ್ದಾರರಿಗೆ ಡಿ.ಸಿ. ಇಕ್ರಮ್ ಶರೀಫ್ ತಿಳಿಸಿದರು. ಎಂಟಿವೇನೋಮ್ ಡೋಸ್ ದಾಸ್ತಾನು ಮಾಡ್ಕೊಳ್ಳಿ:ಮಳೆಗಾಲದಲ್ಲಿ ಸಹಜವಾಗಿ ಹಾವು ಕಚ್ಚಿ ಸಾವನಪ್ಪವವರ ಸಂಖ್ಯೆ ನೋಡುತ್ತೇವೆ. ಇದನ್ನು ತಡೆಯುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ಪಿ.ಎಚ್.ಸಿ. ಸಿ.ಎಚ್.ಸಿ, ಆಸ್ಪತ್ರೆಗಳಲ್ಲಿ ಎಂಟಿವೇನೋಮ್ ಡೋಸ್ ದಾಸ್ತಾನು ಇರುವಂತೆ ಡಿ.ಎಚ್.ಓ ಅಗತ್ಯ ಕ್ರಮ ತೆಗೆದುಕೊಳ್ಳಬೇಕು ಎಂದು ಡಿ.ಸಿ. ಇಕ್ರಮ್ ಶರೀಫ್ ನಿರ್ದೇಶನ ನೀಡಿದರು.

ಚರಂಡಿ ಸ್ವಚ್ಛತಾ ಅಭಿಯಾನ ಕೈಗೊಳ್ಳಿ: ಮಳೆ ಅರಂಭವಾದರೆ ಸಾಕು, ತೆರೆದ ಚರಂಡಿಗಳು ಕಸ ಕಡ್ಡಿಯಿಂದ ಬ್ಲಾಕ್ ಆಗಿಯೇ ಹೆಚ್ಚು ನಗರ ಪ್ರದೇಶದಲ್ಲಿ ಸಾರ್ವಜನಿಕರಿಗೆ ಸಮಸ್ಯೆ ಉಂಟು ಮಾಡುತ್ತದೆ. ಈ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿ, ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಎಲ್ಲಾ ರೀತಿಯ ಮಳೆ ನೀರು ಚರಂಡಿಗಳು, ನಾಲಿ ಗಳಲ್ಲಿ ಹೂಳೆತ್ತಬೇಕು. ಮಳೆ ಬರುವ ಮುನ್ನವೆ ಸಂಪೂರ್ಣ ಸ್ವಚ್ಛತಾ ಅಭಿಯಾನ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಡಿ.ಸಿ. ಖಡಕ್ ಸೂಚನೆ ನೀಡಿದರು.

ಕಾಳಜಿ ಕೇಂದ್ರ ತೆರೆಯಬೇಕು: ಜಿಲ್ಲಾ ಪಂಚಾಯತ್ ಸಿ.ಇ.ಓ ರಾಜುಲ್ ಸಂಕನೂರ್ ಮಾತನಾಡಿ, ಪ್ರವಾಹ ಹೆಚ್ಚಾದಲ್ಲಿ ತಗ್ಗು ಪ್ರದೇಶದಲ್ಲಿರುವ ಜನವಸತಿ ಪ್ರದೇಶಗಳನ್ನು ಸ್ಥಳಾಂತರಿಸಬೇಕಾಗುತ್ತದೆ. ಹೀಗಾಗಿ ಕಾಳಜಿ ಕೇಂದ್ರ ಸಹ ಗುರುತಿಸಬೇಕು. ಮಳೆಯ ನಡುವೆಯೂ ಶುದ್ಧ ಕುಡಿಯುವ ನೀರು ಪೂರೈಕೆಯು ನಮ್ಮ ಆದ್ಯತೆಯಾಗಬೇಕು ಎಂದರು.

## ದೇಶಿ ಕ್ರೀಡೆಗಳಿಗೆ ಹೆಚ್ಚು ಒತ್ತು ನೀಡಿ : ಡಾ.ಚರಂತಿಮಠ



• ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ

2– ಕ್ರೀಡೆ ಕೇವಲ ದೈಹಿಕ ಚಟುವಟಿಕೆಯಲ್ಲ, ಅದು ವ್ಯಕ್ತಿತ್ವ ವಿಕಸನ, ಶಿಸ್ತು, ಮತ್ತು ಒಗ್ಗಟ್ಟಿನ ಸಂಕೇತವಾಗಿದೆ. ಯುವ ಸಮೂಹ ದೇಶಿ ಕ್ರೀಡೆಗಳಿಗೆ ಹೆಚ್ಚಿನ ಒತ್ತು ನೀಡಬೇಕಿದೆ ಎಂದು ಮಾಜಿ ಶಾಸಕ ವೀರಣ್ಣ ಚರಂತಿಮಠ ಹೇಳಿದರು.

ನಗರದ ಬಿವಿವಿಎಸ್ ಹೋಮಿಯೋಪಥಿ ವೈದ್ಯಕೀಯ ಮಹಾವಿದ್ಯಾಲಯ ಮಂಗಳವಾರ ಬಸವೇಶ್ವರ ಕಾಲೇಜು ಮೈದಾನದಲ್ಲಿ ಆಯೋಜಸಿದ್ದ ನಾಲ್ಕು ದಿನಗಳ ಡಾ.ಹಾನಿಮನ್ ಟ್ರೋಫಿ ಅಂತರ ಕಾಲೇಜು ಕ್ರಿಕೇಟ ಟೂರ್ನಾಮೆಂಟಗೆ ಚಾಲನೆ ನೀಡಿ ಮಾತನಾಡಿದ ಅವರು, ಕ್ರೀಡೆಗಳು ವಿದ್ಯಾರ್ಥಿಗಳಲ್ಲಿ ನಾಯಕತ್ವಗುಣ, ಸೋಲು–ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಮನೋಭಾವ ಹಾಗೂ ಜೀವನದ ಕಠಿಣ ಸವಾಲುಗಳನ್ನು ಎದುರಿಸುವ ಛಲವನ್ನು ಬೆಳೆಸುತ್ತದೆ ಎಂದರು.

ಬವಿವ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ ಮಾತನಾಡಿ, ಬವಿವ ಸಂಘ ಪಠ್ಯದ ಜೊತೆಗೆ ಕ್ರೀಡಾ ಚಟುವಟಿಕೆಗಳಿಗೂ ಪ್ರಾಮುಖ್ಯತೆ ನೀಡಿ ಕೋಟಿ ಕೋಟಿ ಹಣ ವ್ಯಯಿಸಿ ಒಳಾಂಗಣ – ಹೊರಾಂಗಣ ಕ್ರೀಡಾ ಮೈದಾನ, ಅಂತರಾಷ್ಟ್ರೀಯ ಗುಣಮಟ್ಟದ ಈಜುಗೊಳ, ಬ್ಯಾಡಮಿನ್ ಕೋರ್ಟ ನಿರ್ಮಿಸಿದೆ. ವಿದ್ಯಾರ್ಥಿಗಳು ಇವುಗಳ ಸದುಪಯೋಗ ಪಡೆದುಕೊಂಡು ರಾಜ್ಯ – ದೇಶಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಸಂಸ್ಥೆಗೆ ಹೆಸರು ತರಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬಿವಿವಿ ಸಂಘದ ಆಯುಷ ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ, ಕ್ರೀಡಾ ಕ್ಷೇತ್ರ ಇಚ್ಛಾಶಕ್ತಿ, ಏಕಾಗ್ರತೆ ಮತ್ತು ಸ್ಪರ್ಧಾ ಮನೋಭಾವವನ್ನು ಬೆಳೆಸುತ್ತದೆ. ನಿರಂತರವಾದ ಕಠಿಣ ಪ್ರಯತ್ನದಿಂದ ಮಾತ್ರ ಸಾಧನೆ ಮಾಡಲು ಸಾಧ್ಯ. ಸೋಲು ಕೊನೆಯಲ್ಲ. ಸೋಲೇ ಗೆಲುವಿನ ಸೋಪಾನ. ಕ್ರೀಡೆಯಲ್ಲಿ ಪರಿಣಿತರಾದವರಿಗೆ ಶೈಕ್ಷಣಿಕ ಕ್ಷೇತ್ರದಲ್ಲೂ ಹಲವಾರು ಅವಕಾಶಗಳಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಡಾ.ಅರುಣ ಹೂಲಿ, ಪ್ರಾಧ್ಯಾಪಕ ಡಾ.ರವಿ.ಕೋಟೆಣ್ಣವರ., ಡಾ.ಸುಧೀರ ಬೆಟಗೇರಿ, ಡಾ.ಪ್ರದೀಪ ಕೆ, ಡಾ. ಶಶಿಕುಮಾರ. ಡಾ.ತೃಪ್ತಿ ಶಿಂದೆ, ಡಾ.ಐಶ್ವರ್ಯ ಪಾಟೀಲ, ಕ್ರೀಡಾ ಸಂಯೋಜಕರಾದ ಡಾ.ಮಂಜುನಾಥ ಪಾಟೀಲ, ಡಾ. ದೀಪಕ, ಡಾ.ಲಕ್ಷ್ಮೀ ಹಾಗೂ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ ದೈಹಿಕ ನಿರ್ದೇಶಕರುಗಳು ಉಪಸ್ಥಿತರಿದ್ದರು.

ಬೆಂಗಳೂರು, ಬೆಳಗಾವಿ, ಧಾರವಾಡ, ಮಂಗಳೂರು, ಮೂಡುಬಿದ್ರೆ, ಕಲಬುರ್ಗಿ ಹಾಗೂ ಸಂಕೇಶ್ವರ ಹೋಮಿಯೋ ಮೆಡಿಕಲ್ ಕಾಲೇಜುಗಳ ತಂಡಗಳು ಟೂರ್ನಾಮೆಂಟ್ ನಲ್ಲಿ ಭಾಗವಹಿಸಿದ್ದವು.

ಶ್ರೇಯಾ, ಸುಮೀತ ಸ್ವಾಗತಿಸಿ ವಂದಿಸಿದರು. ಭಾಗ್ಯ ಗಂಗಶೆಟ್ಟಿ ನಿರೂಪಿಸಿದರು. ಕಾಲೇಜು ವಿದ್ಯಾರ್ಥಿ ಸಂಸತ್ತಿನ ಪ್ರತಿನಿಧಿಗಳಾದ ಶ್ರೇಯಶ್, ಆದಿತ್ಯ, ರಿಶಿಕೇಶ. ಹಿತೇಶ್ಯಾಮಖಾನ ವ್ಯವಸ್ಥೆ ನೇತ್ರತ್ವ ವಹಿಸಿದ್ದರು.

## ಐಐಟಿ ಪ್ರವೇಶಕ್ಕೆ 64 ವಿದ್ಯಾರ್ಥಿಗಳು ಅರ್ಹತೆ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

2026ನೇ ಜಂಟಿ ಪ್ರವೇಶ ಪರೀಕ್ಷೆ(ಜೆಇಇ) ಅಡ್ವಾನ್ಸ್ಡ್ ಫಲಿತಾಂಶ ಪ್ರಕಟಗೊಂಡಿದ್ದು, ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರಗುರುಕುಲವಸತಿ ವಿಜ್ಞಾನಪದವಿ ಪೂರ್ವ ಕಾಲೇಜಿನ 64 ವಿದ್ಯಾರ್ಥಿಗಳು ಭಾರತೀಯ ತಂತ್ರಜ್ಞಾನ ಸಂಸ್ಥೆಗಳು(ಐಐಟಿ) ಮತ್ತು ದೇಶದ ಪ್ರಮುಖ ಎಂಜಿನಿಯರಿಂಗ್ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯಲು ಅರ್ಹತೆ ಪಡೆದಿದ್ದಾರೆಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ತಿಳಿಸಿದ್ದಾರೆ. ನಗರದ ಹಿರೇಮಠ ಸಂಸ್ಥಾನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಈ ಬಾರಿಯ ದೇಶದಲ್ಲಿ ಸುಮಾರು 15 ಲಕ್ಷ ವಿದ್ಯಾರ್ಥಿಗಳು ಜೆಇಇ ಪರೀಕ್ಷೆ ಬರೆದಿದ್ದರು. ಚನ್ನಬಸವೇಶ್ವರ ಗುರುಕುಲದಿಂದ ಕೂಡ 150 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ಅದರಲ್ಲಿ ನಮ್ಮ ಸಂಸ್ಥೆಯ 64 ವಿದ್ಯಾರ್ಥಿಗಳು ಉತ್ತಮ ರ್ಯಾಂಕ್ ಪಡೆದು ಐಐಟಿ ಪ್ರವೇಶಕ್ಕೆ ಅರ್ಹತೆ ಗಿಟ್ಟಿಸಿಕೊಂಡಿದ್ದಾರೆ. ವಿದ್ಯಾರ್ಥಿ ವಿಶ್ವರಾಜ್ ಅಂಗವಿಕಲ ಕೋಟಾದಲ್ಲಿ ದೇಶಕ್ಕೆ ಪ್ರಥಮ ರ್ಯಾಂಕ್ ಪಡೆದು ಹುಬ್ಬೆರುವಂತಹ ಸಾಧನೆ ಮಾಡಿ ಇಡೀ ದೇಶದ ಗಮನ ಸೆಳೆದಿದ್ದಾನೆ. ವಿದ್ಯಾರ್ಥಿಗಳ ಸಾಧನೆ ಹಿಂದೆ ಪರಮ ಪೂಜ್ಯ ಡಾ.ಬಸವಲಿಂಗ ಪಟ್ಟದ್ದೇವರ ಮಾರ್ಗದರ್ಶನ, ಸಂಸ್ಥೆಯ ಆಡಳಿತಾಧಿಕಾರಿ, ಪ್ರಾಚಾರ್ಯ ಮತ್ತು ಉಪನ್ಯಾಸಕರ ಪರಿಶ್ರಮ ಅಡಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಮಹಾಲಿಂಗ ಸ್ವಾಮೀಜಿ, ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್‌ನ ನಿರ್ದೇಶಕ ಶಶಿಧರ ಕೋಸಂಬೆ, ಆಡಳಿತಾಧಿಕಾರಿ ಮೋಹನ ರೆಡ್ಡಿ, ಪ್ರಾಚಾರ್ಯ ಬಸವರಾಜ ಮೊಳಕೀರೆ ಇದ್ದರು.

### ಬಡ ಮಕ್ಕಳು ಉತ್ತಮ ಸಾಧನೆ


ಜೆಇಇ ಅಡ್ವಾನ್ಸ್ಡ್ ನಂತಹ ರಾಷ್ಟ್ರ ಮಟ್ಟದ ಕಠಿಣ ಪರೀಕ್ಷೆಯಲ್ಲಿ ಗ್ರಾಮೀಣ ಭಾಗದ 64 ಬಡ ಮಕ್ಕಳು ಐಐಟಿ ಪ್ರವೇಶಕ್ಕೆ ಅರ್ಹತೆ ಪಡೆದು ರಾಜ್ಯದಲ್ಲಿ ಹೊಸ ಇತಿಹಾಸ ಸೃಷ್ಟಿಸಿದ್ದಾರೆ ಎಂದು ಪ್ರಾಚಾರ್ಯ ಬಸವರಾಜ ಮೊಳಕೀರೆ ತಿಳಿಸಿದರು.

ಗ್ರಾಮೀಣ ಭಾಗದ ಮಕ್ಕಳಿಗೆ ಬೆಟ್ಟದಂತಹ ಕನಸಾಗಿದ್ದ ಐಐಟಿಯನ್ನು ಪರಮ ಪೂಜ್ಯ ಡಾ.ಬಸವಲಿಂಗ ಪಟ್ಟದ್ದೇವರು ನನಾಗಿಸುವ ಪ್ರಯತ್ನ ಮಾಡುತ್ತಿದ್ದಾರೆ.

ಪರಮ ಪೂಜ್ಯರ ಮಾರ್ಗದರ್ಶನದಲ್ಲಿ ನುರಿತ ಉಪನ್ಯಾಸಕರನ್ನು ನಿಯೋಜಿಸಿ ದೇಶದ ಪ್ರಗತಿಗೆ ಪೂರಕವಾಗಿರುವ ನೀಟ್–ಐಐಟಿನಲ್ಲಿ ನಮ್ಮ ಸಂಸ್ಥೆಯಿಂದ ಪ್ರತಿವರ್ಷ ಉತ್ತಮ ರ್ಯಾಂಕ್ ನೀಡಿ ದೇಶಕ್ಕೆ ಕೊಡುಗೆಯಾಗಿ ನೀಡಲಾಗುತ್ತಿದೆ ಎಂದರು.

## ಖಂಡ್ರೆ ಅವರಿಗೆ ಡಿಸಿಎಂ, ಡಾ. ಚಂದ್ರಶೇಖರ ಪಾಟೀಲರಿಗೆ ಸಚಿವ ಸ್ಥಾನ ನೀಡಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೀದರ



ಜೂ 2: ರಾಜ್ಯದಲ್ಲಿ ನೂತನ ಸಚಿವ ಸಂಪುಟ ರಚನೆಯಾಗುತ್ತಿರುವ ಹಿನ್ನೆಲೆಯಲ್ಲಿ ಅರಣ್ಯ, ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರಿಗೆ ಉಪಮುಖ್ಯಮಂತ್ರಿ(ಡಿಸಿಎಂ) ಸ್ಥಾನ ಹಾಗೂ ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಬಿ. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಬೀದರ ದಕ್ಷಿಣ ಕ್ಷೇತ್ರದ ಕಾಂಗ್ರೆಸ್ ಮುಖಂಡ ಮಾರುತಿ ಮಾಸ್ಟರ್ ಆಗ್ರಹಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕಲ್ಯಾಣ ಕರ್ನಾಟಕ ಭಾಗದ ಹಿರಿಯ ಹಾಗೂ ಜನಪ್ರಿಯ ನಾಯಕರಾದ ಈಶ್ವರ ಬಿ.ಖಂಡ್ರೆ ಅವರು ಸಚಿವರಾಗಿ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದು, ಎಲ್ಲ ಸಮುದಾಯಗಳ ಜನರ ವಿಶ್ವಾಸ ಗಳಿಸಿದ್ದಾರೆ ಎಂದು ತಿಳಿಸಿದ್ದಾರೆ. ರಾಜ್ಯದ ಅಭಿವೃದ್ಧಿ ಹಾಗೂ ಪಕ್ಷದ ಸಂಘಟನಾ ಬಲವರ್ಧನೆಗೆ ಅವರ ಅನುಭವ ಮತ್ತು ನಾಯಕತ್ವ ಅಗತ್ಯವಾಗಿದ್ದು, ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವುದರಿಂದ ಕಲ್ಯಾಣ ಕರ್ನಾಟಕ ಭಾಗಕ್ಕೆ ನ್ಯಾಯ ದೊರೆಯಲಿದೆ ಎಂದು ಹೇಳಿದ್ದಾರೆ. ಅಲ್ಲದೆ, ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಬಿ. ಪಾಟೀಲ ಅವರು ಸಹ ಬೀದರ ಜಿಲ್ಲೆಯ ಅಭಿವೃದ್ಧಿ ಮತ್ತು ಜನಪರ ಕಾರ್ಯಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದು, ಅವರ ಸೇವೆಯನ್ನು ಗುರುತಿಸಿ ಸಚಿವ ಸಂಪುಟದಲ್ಲಿ ಅವಕಾಶ ನೀಡಬೇಕು ಎಂದು ಒತ್ತಾಯಿಸಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದ ಜನರ ಆಶಯಗಳಿಗೆ ಸ್ಪಂದಿಸಿ ಕಾಂಗ್ರೆಸ್ ಹೈಕಮಾಂಡ್ ಹಾಗೂ ಪಕ್ಷದ ವರಿಷ್ಠರು ಈಶ್ವರಬಿ. ಖಂಡ್ರೆ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ಹಾಗೂ ಡಾ.ಚಂದ್ರಶೇಖರ ಬಿ. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡುವ ಕುರಿತು ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಮಾರುತಿ ಮಾಸ್ಟರ್ ಮನವಿ ಮಾಡಿದ್ದಾರೆ.

## ಸಮರ್ಪಕ ಗೊಬ್ಬರ ವಿತರಣೆಗೆ ಆಗ್ರಹಿಸಿ ಜೂ 4ರಂದು ರೈತರ ಪ್ರತಿಭಟನೆ




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆಯ ರೈತರಿಗೆ ಅಗತ್ಯ ಪ್ರಮಾಣದಲ್ಲಿ ಬೀಜ ಮತ್ತು ಗೊಬ್ಬರವನ್ನು ಸಮರ್ಪಕವಾಗಿ ವಿತರಿಸುವಂತೆ ಆಗ್ರಹಿಸಿ ಹಾಗೂ ಗೊಬ್ಬರ ವಿತರಣೆಯಲ್ಲಿನ ವಿವಿಧ ಸಮಸ್ಯೆಗಳನ್ನು ವಿರೋಧಿಸಿ ಅಖಿಲ ಭಾರತ ಕಿಸಾನ್ ಕೃಷಿ ಮಜ್ದೂರ್ ಸಂಘರ್ಷ ಸಮಿತಿ (ಎಐಕೆಕೆಎಂಎಸ್) ವತಿಯಿಂದ ಜೂನ್ 4ರಂದು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಈ ಪ್ರತಿಭಟನೆಯ ಹಿನ್ನೆಲೆಯಲ್ಲಿ ಸಂಘದ ವತಿಯಿಂದ ಮಂಗಳವಾರ ತಾಲೂಕಿನ ಎತ್ತಿನ ಬೂದಿಹಾಳ ಗ್ರಾಮದಲ್ಲಿ ರೈತರ ಸಂಪರ್ಕ ಮತ್ತು ಪ್ರಚಾರ ಕಾರ್ಯಕ್ರಮ ನಡೆಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಜಿಲ್ಲಾ ಅಧ್ಯಕ್ಷ ಗೋವಿಂದ್, ಮುಂಗಾರು ಕೃಷಿ ಚಟುವಟಿಕೆಗಳು ಆರಂಭವಾಗಿರುವ ಸಂದರ್ಭದಲ್ಲಿ ರೈತರಿಗೆ ಅಗತ್ಯ ಪ್ರಮಾಣದಲ್ಲಿ ಬೀಜ ಮತ್ತು ಗೊಬ್ಬರ ಲಭ್ಯವಾಗಬೇಕು. ಆದರೆ ಹಲವೆಡೆ ರೈತರು ಗೊಬ್ಬರಕ್ಕಾಗಿ ಅಲೆದಾಡುವ ಸ್ಥಿತಿ ನಿರ್ಮಾಣವಾಗಿದ್ದು, ಕೃಷಿ ಚಟುವಟಿಕೆಗಳಿಗೆ ತೊಂದರೆಯಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಗೊಬ್ಬರ ಪಡೆಯಲು ಎಫ್‌ಐಡಿ (ಈಖಆ) ಸಂಖ್ಯೆಯನ್ನು ಕಡ್ಡಾಯಗೊಳಿಸಿರುವ ಕ್ರಮದಿಂದ ಅನೇಕ ರೈತರು ಸಮಸ್ಯೆ ಎದುರಿಸುತ್ತಿದ್ದಾರೆ. ತಾಂತ್ರಿಕ ಕಾರಣಗಳು ಹಾಗೂ ದಾಖಲೆಗಳ ಸಮಸ್ಯೆಯಿಂದ ಹಲವರಿಗೆ ಗೊಬ್ಬರ ದೊರೆಯದೆ ಕೃಷಿ ಕಾರ್ಯ ವಿಳಂಬವಾಗುತ್ತಿದೆ. ಆದ್ದರಿಂದ ಈ ಕಡ್ಡಾಯ ನಿಯಮವನ್ನು ಸರ್ಕಾರ ತಕ್ಷಣ ಹಿಂತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ಗೊಬ್ಬರ ಖರೀದಿಸುವ ಸಂದರ್ಭದಲ್ಲಿ ಕೆಲವು ಮಾರಾಟ ಕೇಂದ್ರಗಳಲ್ಲಿ ರೈತರಿಗೆ ಅನಗತ್ಯ ಔಷಧಗಳು ಹಾಗೂ ಇತರೆ ಕೃಷಿ ಉತ್ಪನ್ನಗಳನ್ನು ಕಡ್ಡಾಯವಾಗಿ ಖರೀದಿಸಲು ಒತ್ತಾಯಿಸಲಾಗುತ್ತಿದೆ ಎಂಬ ದೂರುಗಳು ಕೇಳಿಬರುತ್ತಿವೆ. ಇಂತಹ 'ಲಿಂಕ್ ಮಾರಾಟ' ಪದ್ಧತಿಯನ್ನು ತಕ್ಷಣ ನಿಲ್ಲಿಸಬೇಕು. ರೈತರಿಗೆ ಬೇಕಾದ ಗೊಬ್ಬರವನ್ನು ಯಾವುದೇ ಷರತ್ತುಗಳಿಲ್ಲದೆ ಒದಗಿಸಬೇಕು ಎಂದು ಅವರು ಆಗ್ರಹಿಸಿದರು.

ರೈತರ ಸಮಸ್ಯೆಗಳ ಪರಿಹಾರಕ್ಕಾಗಿ ಜೂನ್ 4ರಂದು ಗುರುವಾರ ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ನಡೆಯಲಿರುವ ಪ್ರತಿಭಟನೆಯಲ್ಲಿ ಜಿಲ್ಲೆಯ ಎಲ್ಲಾ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹೋರಾಟವನ್ನು ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.


ಪ್ರಚಾರ ಕಾರ್ಯಕ್ರಮದಲ್ಲಿ ರೈತರಾದ ಬಸವರಾಜ್, ಹುಲುಗಪ್ಪ, ಮಾಲಿಂಗಪ್ಪ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಜಂಬಗಿಯಲ್ಲಿ ಕುರಿಗಾಹಿಯ ಹತ್ಯೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.2– ಕುರಿಗಾಹಿಯೊಬ್ಬನಿಗೆ ಹಂತಕರು ಹರಿತವಾದ ಆಯುಧದಿಂದ ಹೊಡೆದು ಹತ್ಯೆ ಮಾಡಿ ಪರಾರಿಯಾದ ಘಟನೆ ತಾಲ್ಲೂಕಿನ ಜಂಬಗಾ (ಬಿ) ಗ್ರಾಮದಲ್ಲಿ ಸಂಭವಿಸಿದೆ. ಮೃತನಿಗೆ ವಿಜಯಪುರ ಜಿಲ್ಲೆಯ ತಿಕೋಟಾ ತಾಲ್ಲೂಕಿನ ಅರಕೇರಿ ಗ್ರಾಮದ ನಿವಾಸಿ ಬಂಡು ತಾಂಬೆ (24) ಎಂದು ಗುರುತಿಸಲಾಗಿದೆ. ಹಂತಕರು ಹರಿತವಾದ ಆಯುಧದಿಂದ ಕುರಿಗಾಹಿಯ ಹೊಟ್ಟೆಗೆ ಚುಚ್ಚಿ ಹತ್ಯೆ ಮಾಡಿದ್ದಾರೆ ಎಂಬುದು ಪ್ರಾಥಮಿಕ ಮೂಲಗಳಿಂದ ತಿಳಿದುಬಂದಿದೆ. ಸುದ್ದಿ ತಿಳಿಯುತ್ತಿದ್ದಂತೆಯೇ ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಸಬ್ ಅರ್ಬನ್ ಪೋಲಿಸ್ ಠಾಣೆಯ ಪಿಐ ನಟರಾಜ್ ಲಾಡೆ ಮುಂತಾದವರು ಭೇಟಿ ನೀಡಿ ಪರಿಶೀಲಿಸಿದರು. ಈ ಕುರಿತು ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

## ಗಮನ ಸೆಳೆದ ಈಜು ಸ್ಪರ್ಧೆ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಸ್ವಿಮಿಂಗ್ ಕ್ಲಬ್ ಇವರ ಸಹಯೋಗದೊಂದಿಗೆ ರವಿವಾರ ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದ್ದ ಈಜು ಸ್ಪದ–ರ್ಯ ಎಲ್ಲರ ಗಮನ ಸೆಳೆಯಿತು.

ಕೊಪ್ಪಳ ಸಿಪಿಐ ಸುರೇಶ ಅವರು ಈಜು ಸ್ಪರ್ಧೆಗೆ ಚಾಲನೆ ನೀಡಿದರು. ಬಳಿಕ ಮಾತನಾಡಿ, ಇಂತಹ ಕಾರ್ಯಕ್ರಮಗಳು ಬಹಳ ಮುಖ್ಯ. ಪ್ರತಿಯೊಬ್ಬ ಕ್ರೀಡಾಪಟು ಈಜು ಸ್ಪರ್ಧೆಯಲ್ಲಿ ಭಾಗವಹಿಸಿದಾಗ ದೈಹಿಕವಾಗಿ ಮಾನಸಿಕವಾಗಿ ಸದೃಡವಾಗಲು ಸಾಧ್ಯ. ಹಾಗಾಗಿ ಕ್ರೀಡಾಪಟುಗಳು ಇಂತಹ ಕಾರ್ಯಕ್ರಮಗಳ ಸದುಪಯೋಗವನ್ನು ಪಡೆದುಕೊಳ್ಳಬೇಕು. ಕ್ರೀಡಾ ಪಟುಗಳಿಗೆ ಉತ್ತಮ ರೀತಿಯಲ್ಲಿ ಕ್ರೀಡಾ ಸೌಲಭ್ಯಗಳು ಸಿಗುತ್ತಿದ್ದು, ಪಾಲಕರು ಪೋಷಕರು ತಮ್ಮ ಮಕ್ಕಳಿಗೆ ಕ್ರೀಡೆಯಲ್ಲಿ ಭಾಗವಹಿಸಲು ಪ್ರೋತ್ಸಾಹಿಸಬೇಕೆಂದು ಹೇಳಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೊಪ್ಪಳ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿಠಲ ಜಾಬಗೌಡರ್ ಅವರು ಮಾತನಾಡಿ, ಕ್ರೀಡೆ ಜೀವನದ ಒಂದು ಭಾಗವಾಗಿದೆ. ಪ್ರತಿಯೊಬ್ಬರು ಒಂದೊಂದು ಕ್ರೀಡೆಯಲ್ಲಿ ಭಾಗವಹಿಸಿ ತಮ್ಮ ಸಾಮರ್ಥ್ಯವನ್ನು ಹೆಚ್ಚಿಸುವದರ ಜೊತೆಗೆ ತಮ್ಮ ಆರೋಗ್ಯವನ್ನು ಸದೃಡವಾಗಿಟ್ಟುಕೊಳ್ಳಬೇಕು. ಈಜು ಸ್ಪರ್ಧೆ ಬಹಳ ಮುಖ್ಯವಾಗಿದ್ದು, ಕೊಪ್ಪಳ ಜಿಲ್ಲೆಯ ಕ್ರೀಡಾ ಪಟುಗಳಿಗೆ ಈ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ. ಈಜು ಸ್ಪರ್ಧೆಯಲ್ಲಿ ಅಂತರ ರಾಷ್ಟ್ರೀಯ ಕ್ರೀಡಾ ಪಟುಗಳಾದ ಅಸ್ಮಿತಾ ಚಂದ್ರು ಹಾಗೂ ವೃತ್ತಿ ಅಗರವಾಲ್ ಅವರು ಉತ್ತಮ ಸಾಧನೆಯನ್ನು ಮಾಡಿದ್ದಾರೆ. ಅಸ್ಮಿತಾ ಚಂದು ಅವರು ಸಿಂಗಾಪೂರದಲ್ಲಿ ಅಂತರಾಷ್ಟ್ರೀಯ ಈಜು ಸ್ಪರ್ಧೆಯಲ್ಲಿ ಸಾಧನೆ ಮಾಡಿರುತ್ತಾರೆ. ಅವರಂತೆ ಎಲ್ಲಾ ಕ್ರೀಡಾಪಟುಗಳು, ಈ ಈಜು ಸ್ಪರ್ಧೆಯಲ್ಲಿ ಆಸಕ್ತಿವಹಿಸಿ ರಾಷ್ಟಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುವಂತೆ ಬೆಳೆಯಬೇಕು ಎಂದು ಶುಭ ಹಾರೈಸಿದರು.

ಅಂತರ ರಾಷ್ಟ್ರೀಯ ಕ್ರೀಡಾಪಟು ಅಸ್ಮಿತಾಚಂದ್ರು ಅವರು ಮಾತನಾಡಿ, ನಾನು ಹೈದಾರಾಬಾದಿನವಳು ನಾನು ಈಜು ಸ್ಪರ್ಧೆಯಲ್ಲಿ ಹೆಚ್ಚಿನ ಆಸ್ತಿಕ ಇದ್ದು, ನನಗೆ ನನ್ನ ತಂದೆ ತಾಯಿಗಳ ಪ್ರೋತ್ಸಾಹ ಹಾಗೂ ನನ್ನ ನೆಚ್ಚಿನ ಗುರುಗಳ ಮಾರ್ಗದರ್ಶನದಿಂದ ಬೆಸಿಗೆ ತರಬೇತಿಯಲ್ಲಿ ಭಾಗಹಿಸುತ್ತಿದ್ದೆ. ದಿನಂಪ್ರತಿ ಬೆಳಿಗ್ಗೆ ಈಜುತ್ತಿದ್ದೆ, ಇದರಿಂದ ನನಗೆ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಲು ಅವಕಾಶ ಸಿಕ್ಕಿದೆ. ಇದರಂತೆ ತಾವುಗಳು ಹೆಚ್ಚಿನ ರೀತಿಯಲ್ಲಿ ಈಜು ತರಬೇತಿ ಪಡೆದು ರಾಷ್ಟ ಮಟ್ಟದಲ್ಲಿ ಗುರುತಿಸಿಕೊಳ್ಳಿ ಎಂದು ತಿಳಿಸಿದರು.

ಅಂತರ ರಾಷ್ಟ್ರೀಯ ಕ್ರೀಡಾಪಟು ವೃತಿ ಅಗರವಾಲ್ ಅವರು ಮಾತನಾಡಿ, ಈಜು ಸ್ಪರ್ಧೆಯಲ್ಲಿ ನಾನು ಸಹ ಅಂತರಾಷ್ಟ್ರೀಯ ಮಟ್ಟದಲ್ಲಿ ಬೆಳೆದಿರುತ್ತೇನೆ. ತಾವುಗಳು ಸಹಿತ ಹಿರಿಯರ ಹಾಗೂ ಗುರುಗಳ ಮಾರ್ಗದರ್ಶನದಲ್ಲಿ ರಾಷ್ಟಮಟ್ಟದಲ್ಲಿ ಬೆಳೆಯಲು ಹಾರೈಸಿದರು.*50 ಕ್ರೀಡಾಪಟುಗಳು ಭಾಗಿ:* ಈಜು ಸ್ಪರ್ಧೆಯಲ್ಲಿ 8 ರಿಂದ 10 ವರ್ಷ ವಯೋಮಿತಿ, 10 ರಿಂದ 12 ವರ್ಷ ವಯೋಮಿತಿ ಹಾಗೂ 12 ರಿಂದ 14 ವರ್ಷ ವಯೋಮಿತಿ ಒಳಗಿನ ಬಾಲಕ ಮತ್ತು ಬಾಲಕೀಯರಿಗೆ ಅವಕಾಶ ಕಲ್ಪಿಸಲಾಗಿದ್ದು, ಈಜು ಸ್ಪರ್ಧೆಯಲ್ಲಿ ಒಟ್ಟು 50 ಜನ ಬಾಲಕ ಬಾಲಕೀಯರು ಭಾಗವಹಿಸಿದ್ದರು.*ವಿಜೇತರು:*8 ರಿಂದ 10 ವರ್ಷ ವಯೋಮಿತಿಯ ಸ್ಪರ್ಧೆಯಲ್ಲಿ ವಿರಾಟ್ ಪಾಟೀಲ್ ಪ್ರಥಮ ಸ್ಥಾನ, ಆದರ್ಶ ದ್ವಿತೀಯ, ಸುಫಿಯಾನ್ ಪಟೇಲ್ ತೃತೀಯ ಸ್ಥಾನ ಪಡೆದುಕೊಂಡರು. 10 ರಿಂದ 12 ವರ್ಷ ವಯೋಮಿತಿಯ ಸ್ಪರ್ಧೆಯಲ್ಲಿ ಶೌರ್ಯ ಪಾಟೀಲ್ ಪ್ರಥಮ, ಅನುಷ್ ದ್ವಿತೀಯ, ಶ್ರೀಧರ್ ಭಟ್ ತೃತೀಯ ಸ್ಥಾನ ಪಡೆದುಕೊಂಡರೆ, 12 ರಿಂದ 14 ವರ್ಷ ವಯೋಮಿತಿಯ ಸ್ಪರ್ಧೆಯಲ್ಲಿ ಗವಿಶ್ ಪ್ರಥಮ, ಶ್ರೇಯಸ್ ದ್ವಿತೀಯ ಮತ್ತು ತನಯ್ ತೃತೀಯ ಸ್ಥಾನವನ್ನು ಪಡೆದುಕೊಂಡಿದ್ದಾರೆ. ಕಾರ್ಯಕ್ರಮದಲ್ಲಿ ತರಬೇತುದಾರರಾದ ಜಾನ್ವಿ ಮತ್ತು ಎ.ಎನ್. ಯತಿರಾಜ್, ಕೊಪ್ಪಳ ತಾಲ್ಲೂಕ ಕ್ರೀಡಾಧಿಕಾರಿಗಳಾದ ಶರಣಬಸವ ಬಂಡಿಹಾಳ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ಬಸವಾಜು ಹನಮಸಾಗರ ಅವರು ಕಾರ್ಯಕ್ರಮ ನಿರೂಪಿಸಿದರು

Printed, Published & Owned by Ramesh Reddy, Printed at Metro Politan Media Company Limited, Plot No.15&16, KIADB Rayapur Industrial
Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104.
Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +919449732000.
PRGI NO. 120927
(RNINO:KARKAN/2011/ 48371)